Volume : 9 | Issue : 158 | September : 08 : 2026 : Tuesday
ಸಂಪುಟ : 9 | ಸಂಚಿಕೆ : 158 | ಸೆಪ್ಟಂಬರ್ : 08 : 2026 : ಮಂಗಳವಾರ

www.VIKRAMAVAHINI.com

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

# ವಿಕ್ರಮ ವಾಹಿನಿ

ಪುಟ 4 ₹2 || ಕನ್ನಡ ದಿನಪತ್ರಿಕೆ ||

VIKRAMA VAHINI
PRGI NO: KARKAN/2018/78481





ಟಾಲಿವುಡ್ ನಟ ಶ್ರೀವಿಷ್ಣು ಅಭಿನಯದ ಹೊಸ ಚಿತ್ರಕ್ಕೆ ನಾಯಕಿಯಾಗಿ ಸ್ಯಾಂಡಲ್‌ವುಡ್ ನಟಿ ಆಶಿಕಾ ರಂಗನಾಥ್ ಆಯ್ಕೆಯಾಗಿದ್ದಾರೆ. ಸಿತಾರಾ ಎಂಟರ್‌ಟೇನ್‌ಮೆಂಟ್ಸ್ ನಿರ್ಮಾಣದ ಸನ್ನಿ ಸಂಜಯ್ ನಿರ್ದೇಶನದ ಈ ಚಿತ್ರದ ಚಿತ್ರೀಕರಣ ಈಗಾಗಲೇ ಆರಂಭವಾಗಿದೆ ಎಂದು ತಿಳಿದು ಬಂದಿದೆ,

ಸಿಇಓಗಳ ಗ್ರಾಮಭೇಟಿ ಕಡ್ಡಾಯ: ಈಶ್ವರ ಖಂಡ್ರೆ | ಪುಟ 4

'ಹುಚ್ಚ' ಎಂದವರ ಎದುರೇ ನದಿಗಿಳಿದು ಸ್ವಚ್ಛಗೊಳಿಸಿದ 20ರ ಯುವಕ | ಪುಟ 4

■ ಸುದ್ದಿ ಚುಟುಕು

## ಬಿ. ನಾಗೇಂದ್ರಗೆ ಮತ್ತೆ ಇಡಿ ವಿಚಾರಣೆ

● ವಿಕ್ರಮ ವಾಹಿನಿ । ಬೆಂಗಳೂರು

ವಾಲ್ಮೀಕಿ ಅಭಿವೃದ್ಧಿ ನಿಗಮದ ಬಹುಕೋಟಿ ಹಗರಣಕ್ಕೆ ಸಂಬಂಧಿಸಿದಂತೆ ಮಾಜಿ ಸಚಿವ ಬಿ. ನಾಗೇಂದ್ರ ಅವರನ್ನು ಜಾರಿ ನಿರ್ದೇಶನಾಲಯ (ಇಡಿ) ಸೋಮವಾರ ಮತ್ತೆ ವಿಚಾರಣೆಗೆ ಒಳಪಡಿಸಿದೆ.

ವಿಚಾರಣೆಗೆ ಹಾಜರಾಗುವಂತೆ ಇಡಿ ಸಮನ್ಸ್ ನೀಡಿದ್ದ ಹಿನ್ನೆಲೆಯಲ್ಲಿ ನಾಗೇಂದ್ರ ಅವರು ಬೆಂಗಳೂರಿನ ಜಾಲಹಳ್ಳಿಯ ಎಚ್‌ಎಂಟಿ ಲೇಔಟ್‌ನಲ್ಲಿರುವ ಇಡಿ ಕಚೇರಿಗೆ ತೆರಳಿ ಅಧಿಕಾರಿಗಳ ಮುಂದೆ ಹಾಜರಾದರು. ಚಾರ್ಜ್‌ಶೀಟ್ ಸಲ್ಲಿಸಿದ ಬಳಿಕ ಪ್ರಕರಣಕ್ಕೆ ಸಂಬಂಧಿಸಿದಂತೆ ಮತ್ತಷ್ಟು ಮಾಹಿತಿ ಹಾಗೂ ದಾಖಲೆಗಳನ್ನು ಪಡೆಯುವ ಉದ್ದೇಶದಿಂದ ಮರು ವಿಚಾರಣೆ ನಡೆಸಲಾಗುತ್ತಿದೆ ಎಂದು ತಿಳಿದುಬಂದಿದೆ.

ವಾಲ್ಮೀಕಿ ನಿಗಮದ ಹಣ ಅಕ್ರಮ ವರ್ಗಾವಣೆ ಪ್ರಕರಣದಲ್ಲಿ ನಾಗೇಂದ್ರ ಅವರು ಈ ಹಿಂದೆ ಜೈಲು ಸೇರಿದ್ದರು. ಬಳಿಕ ನ್ಯಾಯಾಲಯದಿಂದ ಜಾಮೀನು ಪಡೆದು ಹೊರಬಂದಿದ್ದರು. ಪ್ರಕರಣದ ತನಿಖೆ ನಡೆಸಿರುವ ಇಡಿ ಈಗಾಗಲೇ ನ್ಯಾಯಾಲಯಕ್ಕೆ ಚಾರ್ಜ್‌ಶೀಟ್ ಸಲ್ಲಿಸಿದೆ.

ಇದೇ ಪ್ರಕರಣಕ್ಕೆ ಸಂಬಂಧಿಸಿದಂತೆ ಕೇಂದ್ರ ತನಿಖಾ ದಳ (ಸಿಬಿಐ) ಕೂಡ ನಾಗೇಂದ್ರ ವಿರುದ್ಧ ಚಾರ್ಜ್‌ಶೀಟ್ ಸಲ್ಲಿಸಿದೆ. ಇದೀಗ ಇಡಿ ಮತ್ತೊಮ್ಮೆ ವಿಚಾರಣೆಗೆ ಕರೆದಿರುವುದು ಪ್ರಕರಣದಲ್ಲಿ ಮಹತ್ವ ಪಡೆದಿದೆ.

ಹಗರಣಕ್ಕೆ ಸಂಬಂಧಿಸಿದ ಹಣದ ವಹಿವಾಟು, ದಾಖಲೆಗಳು ಹಾಗೂ ಇತರ ಆರೋಪಿಗಳೊಂದಿಗೆ ಇರುವ ಸಂಪರ್ಕದ ಕುರಿತು ಅಧಿಕಾರಿಗಳು ಮಾಹಿತಿ ಪಡೆಯುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ.

## ದೆಹಲಿ ಕಟ್ಟಡ ಕುಸಿತ: 7 ಮಂದಿ ಸಾವು; ಮಾಲೀಕನಿಗಾಗಿ ಪೊಲೀಸರ ಶೋಧ

● ವಿಕ್ರಮ ವಾಹಿನಿ । ನವದೆಹಲಿ

ರಾಷ್ಟ್ರ ರಾಜಧಾನಿಯ ಸತ್ಯ ನಿಕೇತನ ಪ್ರದೇಶದಲ್ಲಿ ಐದಂತಸ್ತಿನ ಕಟ್ಟಡ ಕುಸಿದು ಬಿದ್ದ ದುರಂತದಲ್ಲಿ ಈವರೆಗೆ 7 ಮಂದಿ ಮೃತಪಟ್ಟಿದ್ದಾರೆ. ಘಟನೆ ಬಳಿಕ ಕಟ್ಟಡದ ಮಾಲೀಕ ಹರಿರಾಮ್ ನಾಪತ್ತೆಯಾಗಿದ್ದು, ಆತನ ವಿರುದ್ಧ ದೆಹಲಿ ಪೊಲೀಸರು ಪತ್ತೆ ನೋಟಿಸ್ ಹೊರಡಿಸಿದ್ದಾರೆ. ಆತನ ಪತ್ತೆಗಾಗಿ ವಿಶೇಷ ಪೊಲೀಸ್ ತಂಡಗಳು ಶೋಧ ಕಾರ್ಯ ನಡೆಸುತ್ತಿವೆ.

ನೈಋತ್ಯ ದೆಹಲಿಯ ಸತ್ಯ ನಿಕೇತನ ಪ್ರದೇಶದಲ್ಲಿರುವ ಐದು ಅಂತಸ್ತಿನ ಕಟ್ಟಡ ಭಾನುವಾರ ಮಧ್ಯಾಹ್ನ ಏಕಾಏಕಿ ಕುಸಿದುಬಿದ್ದಿತ್ತು. ಘಟನೆಗೆ ಸಂಬಂಧಿಸಿದಂತೆ ಭಾರತೀಯ ನ್ಯಾಯ ಸಂಹಿತೆಯ ವಿವಿಧ ಕಲಂಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಕಟ್ಟಡ ಕುಸಿದ ಬಳಿಕ ಭಾನುವಾರ ಮಧ್ಯಾಹ್ನದಿಂದಲೇ ರಕ್ಷಣಾ ಕಾರ್ಯಾಚರಣೆ ಆರಂಭವಾಗಿದ್ದು, ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆಯ ನೇತೃತ್ವದಲ್ಲಿ ಕಾರ್ಯಾಚರಣೆ ಮುಂದುವರಿದಿದೆ.

ಕಟ್ಟಡ ಕುಸಿಯುವ ಮುನ್ನ ಅದರ ಸ್ಥಿತಿ ಹೇಗಿತ್ತು ಹಾಗೂ ದುರಂತಕ್ಕೆ ಕಾರಣವೇನು ಎಂಬುದರ ಕುರಿತು ಕೇಳಿಬಂದಿರುವ ಹೇಳಿಕೆಗಳನ್ನೂ ಪೊಲೀಸರು ಪರಿಶೀಲಿಸುತ್ತಿದ್ದಾರೆ.

ಈ ಕುರಿತು ಮಾತನಾಡಿದ ಭಾರತೀಯ ಜನತಾ ಪಕ್ಷದ ಆರ್.ಕೆ. ಪುರಂ ಶಾಸಕ ಅನಿಲ್ ಶರ್ಮಾ, ಕಟ್ಟಡ ಕುಸಿದ ಸಂದರ್ಭದಲ್ಲಿ ವಸತಿ ಗೃಹದೊಳಗೆ ನಿಖರವಾಗಿ ಎಷ್ಟು ಮಂದಿ ಇದ್ದರು ಎಂಬ ಮಾಹಿತಿ ಇನ್ನೂ ಲಭ್ಯವಾಗಿಲ್ಲ ಎಂದು ತಿಳಿಸಿದ್ದಾರೆ. ಅಂದಾಜಿನ ಪ್ರಕಾರ 13 ಮಕ್ಕಳು ಹಾಗೂ 3ರಿಂದ 4 ಮಂದಿ ಕಾರ್ಮಿಕರು ಸೇರಿದಂತೆ ಒಟ್ಟು 16ರಿಂದ 17 ಮಂದಿ ಕಟ್ಟಡದೊಳಗೆ ಇದ್ದಿರಬಹುದು. ಈ ಪೈಕಿ 12 ಮಂದಿಯನ್ನು ರಕ್ಷಿಸಲಾಗಿದೆ. ಆದರೆ ದುರಂತದಲ್ಲಿ 7 ಮಂದಿ ಮೃತಪಟ್ಟಿದ್ದು, ಗಾಯಗೊಂಡವರು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಅವರು ಹೇಳಿದ್ದಾರೆ.

ಮಧ್ಯಾಹ್ನ ಅಥವಾ ಸಂಜೆಯ ವೇಳೆಗೆ ಸಂಪೂರ್ಣ ರಕ್ಷಣಾ ಕಾರ್ಯಾಚರಣೆ ಪೂರ್ಣಗೊಳ್ಳುವ ನಿರೀಕ್ಷೆಯಿದೆ ಎಂದು ಶಾಸಕ ಅನಿಲ್ ಶರ್ಮಾ ತಿಳಿಸಿದ್ದಾರೆ.

ಬಿಲ್ಡರ್ ಅಥವಾ ಆಸ್ತಿ ಮಾಲೀಕರ ನಿರ್ಲಕ್ಷ್ಯದಿಂದ ಸಂಭವಿಸಿದ ದೊಡ್ಡ ದುರಂತ ಇದಾಗಿದೆ ಎಂದು ಅವರು ಆರೋಪಿಸಿದ್ದಾರೆ. ಇಂತಹ ದುರಸ್ತಿ ಕಾರ್ಯ ಕೈಗೊಳ್ಳುವ ಮೊದಲು ಕಟ್ಟಡದ ಸುರಕ್ಷತೆಯನ್ನು ಪರಿಶೀಲಿಸಲು ತಜ್ಞ ಎಂಜಿನಿಯರ್‌ರ ಸಲಹೆ ಪಡೆಯಬೇಕಿತ್ತು ಎಂದು ಅವರು ಹೇಳಿದ್ದಾರೆ.

# ಸರ್ಕಾರಿ ಬಂಗಲೆಗಾಗಿ ಹಾಲಿ–ಮಾಜಿ ತಿಕ್ಕಾಟ!

## ಮಹದೇವಪ್ಪ ಬಂಗಲೆ ತೆರವು ಮುನ್ನವೇ ನವೀಕರಣಕ್ಕೆ ಮುಂದಾದ ಬೈರತಿ

● ವಿಕ್ರಮ ವಾಹಿನಿ । ಬೆಂಗಳೂರು

ನಗರದ ಪ್ರತಿಷ್ಠಿತ ಕ್ರೆಸೆಂಟ್ ರಸ್ತೆಯಲ್ಲಿರುವ ಸರ್ಕಾರಿ ನಿವಾಸಕ್ಕಾಗಿ ಕಾಂಗ್ರೆಸ್‌ನ ಹಾಲಿ ಹಾಗೂ ಮಾಜಿ ಸಚಿವರ ನಡುವೆ ತೆರೆಮರೆಯ ತಿಕ್ಕಾಟಕ್ಕೆ ಕಾರಣವಾಗಿದೆ. ಕ್ರೆಸೆಂಟ್ ರಸ್ತೆಯ ನಂ.2ರ ಸರ್ಕಾರಿ ಬಂಗಲೆಯನ್ನು ಸಾರಿಗೆ ಸಚಿವ ಬೈರತಿ ಸುರೇಶ್ ಅವರಿಗೆ ನೀಡುವ ಪ್ರಕ್ರಿಯೆ ನಡೆಯುತ್ತಿದ್ದು, ಪ್ರಸ್ತುತ ಅಲ್ಲಿ ವಾಸವಿರುವ ಮಾಜಿ ಸಚಿವ ಡಾ. ಎಚ್.ಸಿ. ಮಹದೇವಪ್ಪ ಅವರು ತೆರವು ಮಾಡುವ ಮುನ್ನವೇ ನವೀಕರಣ ಕಾಮಗಾರಿ ಆರಂಭವಾಗಿರುವುದು ಚರ್ಚೆಗೆ ಗ್ರಾಸವಾಗಿದೆ.

**ನಿವಾಸದಲ್ಲಿದ್ದಾಗಲೇ ಕಾಮಗಾರಿ**

ಸಚಿವರಾಗಿದ್ದ ಅವಧಿಯಿಂದಲೂ ಮಹದೇವಪ್ಪ ಅವರು ಇದೇ ಸರ್ಕಾರಿ ಬಂಗಲೆಯಲ್ಲಿ ವಾಸವಿದ್ದಾರೆ. ನಿಯಮಾನುಸಾರ ನಿವಾಸ ತೆರವುಗೊಳಿಸಲು ಅವರಿಗೆ ಕಾಲಾವಕಾಶವಿದ್ದರೂ, ಬಂಗಲೆಯ ಆವರಣದಲ್ಲಿ ಜೆಸಿಬಿ ಬಳಸಿ ಮೀಟಿಂಗ್ ಹಾಲ್ ತೆರವುಗೊಳಿಸಲಾಗಿದ್ದು, ಪೇಂಟಿಂಗ್ ಸೇರಿದಂತೆ ವಿವಿಧ ನವೀಕರಣ ಕಾಮಗಾರಿಗಳು ಆರಂಭವಾಗಿವೆ ಎನ್ನಲಾಗಿದೆ.

ಮಹದೇವಪ್ಪ ನಿವಾಸದಲ್ಲಿದ್ದ ಸಂದರ್ಭದಲ್ಲೇ ಕಾಮಗಾರಿ ಆರಂಭಿಸಿರುವುದು ಹಾಗೂ ಶೀಘ್ರವೇ ಮನೆ ಖಾಲಿ ಮಾಡುವಂತೆ ಒತ್ತಡ ಹೇರಲಾಗುತ್ತಿದೆ ಎಂಬ ಆರೋಪವೂ ಕೇಳಿಬಂದಿದೆ.

**'ಬಾಡಿಗೆ ಮನೆ ಸಿಕ್ಕ ಕೂಡಲೇ ಖಾಲಿ ಮಾಡುತ್ತೇನೆ'**

ಈ ಕುರಿತು ಪ್ರತಿಕ್ರಿಯಿಸಿರುವ ಮಾಜಿ ಸಚಿವ ಮಹದೇವಪ್ಪ, ತಮಗೆ ಬೆಂಗಳೂರಿನಲ್ಲಿ ಸ್ವಂತ ಮನೆಯಿಲ್ಲದ ಕಾರಣ ಬಾಡಿಗೆ ಮನೆ ಹುಡುಕುತ್ತಿದ್ದು, ಸೂಕ್ತ ಮನೆ ದೊರೆತ ಕೂಡಲೇ ಸರ್ಕಾರಿ ಬಂಗಲೆ ಖಾಲಿ ಮಾಡುವುದಾಗಿ ತಿಳಿಸಿದ್ದಾರೆ.

"ನಾನು ಸಚಿವನಾಗಿದ್ದ ಸಂದರ್ಭದಲ್ಲಿ ಸರ್ಕಾರ ಈ ನಿವಾಸ ನೀಡಿತ್ತು. ಈಗ ಸಚಿವನಾಗಿಲ್ಲ. ಹೀಗಾಗಿ ಬಂಗಲೆಯನ್ನು ಬೇಗ ಬಿಟ್ಟುಕೊಡುವುದು ನನ್ನ ಜವಾಬ್ದಾರಿ. ಸೂಕ್ತ ಬಾಡಿಗೆ ಮನೆ ಅಂತಿಮವಾದ ತಕ್ಷಣವೇ ನಿವಾಸ ತೆರವುಗೊಳಿಸುತ್ತೇನೆ" ಎಂದು ಹೇಳಿದ್ದಾರೆ.

"ಬೈರತಿ ಸುರೇಶ್ ಹಾಲಿ ಸಚಿವರಾಗಿದ್ದು, ಅವರ ದೈನಂದಿನ ಕಾರ್ಯಚಟುವಟಿಕೆಗಳಿಗೆ ಅಡ್ಡಿಯಾಗಬಾರದು ಎಂಬುದೇ ನನ್ನ ಉದ್ದೇಶ. ಇಲ್ಲಿ ಹಿರಿಯ–ಕಿರಿಯ ಎಂಬ ಪ್ರಶ್ನೆಯಿಲ್ಲ. ನನಗೆ ತೊಂದರೆಯಾಗಿರುವುದರಿಂದಲೇ ಅವರು ಬೇಗ ಖಾಲಿ ಮಾಡುವಂತೆ ಕೇಳಿರಬಹುದು. ಅವರ ತಪ್ಪೇನೂ ಇಲ್ಲ" ಎಂದು ಮಹದೇವಪ್ಪ ಸ್ಪಷ್ಟಪಡಿಸಿದ್ದಾರೆ.

ಇದರ ನಡುವೆ, ಮಹದೇವಪ್ಪ ಅವರು ನಿವಾಸ ತೆರವುಗೊಳಿಸುವ ಮುನ್ನವೇ ನವೀಕರಣ ಕಾಮಗಾರಿ ಆರಂಭಿಸಿರುವುದು ಹಾಗೂ ಬಂಗಲೆ ಹಂಚಿಕೆ ವಿಚಾರ ಕಾಂಗ್ರೆಸ್ ವಲಯದಲ್ಲಿ ಚರ್ಚೆಗೆ ಕಾರಣವಾಗಿದೆ.




● ವಿಕ್ರಮ ವಾಹಿನಿ । ಬೆಂಗಳೂರು

ಸರ್ಕಾರಿ ಶಾಲೆಗಳಲ್ಲಿ ವ್ಯಾಸಂಗ ಮಾಡಿದ ವಿದ್ಯಾರ್ಥಿಗಳಿಗೆ ವೃತ್ತಿಪರ ಕೋರ್ಸ್‌ಗಳ ಪ್ರವೇಶದಲ್ಲಿ ಶೇ.7.5ರಷ್ಟು ಮೀಸಲಾತಿ ಕಲ್ಪಿಸಲು ರಾಜ್ಯ ಸರ್ಕಾರ ಮುಂದಾಗಿದೆ. ಈ ಸಂಬಂಧ ಉನ್ನತ ಶಿಕ್ಷಣ ಇಲಾಖೆ ಸೋಮವಾರ ಕರಡು ತಿದ್ದುಪಡಿ ನಿಯಮಗಳನ್ನು ಪ್ರಕಟಿಸಿದ್ದು, ಸಾರ್ವಜನಿಕರಿಂದ ಆಕ್ಷೇಪಣೆ ಹಾಗೂ ಸಲಹೆಗಳನ್ನು ಆಹ್ವಾನಿಸಿದೆ.

ಪ್ರಸ್ತಾವಿತ ತಿದ್ದುಪಡಿಯು ವೃತ್ತಿಪರ ಶಿಕ್ಷಣ ಸಂಸ್ಥೆಗಳಲ್ಲಿ ಸರ್ಕಾರಿ ಸೀಟುಗಳ ಪ್ರವೇಶಕ್ಕಾಗಿ ಅಭ್ಯರ್ಥಿಗಳ ಆಯ್ಕೆ ನಿಯಮಗಳು, 2006ಕ್ಕೆ ಸಂಬಂಧಿಸಿದೆ. 'ಕರ್ನಾಟಕ ಅಭ್ಯರ್ಥಿಗಳ ಆಯ್ಕೆ (ತಿದ್ದುಪಡಿ) ನಿಯಮಗಳು, 2026' ಎಂದು ಕರೆಯಲಾಗುವ ಈ ನಿಯಮಗಳು ಅಧಿಕೃತ ಗೆಜೆಟ್‌ನಲ್ಲಿ ಪ್ರಕಟವಾದ ದಿನದಿಂದ ಜಾರಿಗೆ ಬರಲಿವೆ ಎಂದು ಅಧಿಸೂಚನೆಯಲ್ಲಿ ತಿಳಿಸಲಾಗಿದೆ.

**ಮೀಸಲಾತಿಯಲ್ಲಿ ಬದಲಾವಣೆ**

ಪ್ರಸ್ತುತ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ವೃತ್ತಿಪರ ಕೋರ್ಸ್‌ಗಳ ಪ್ರವೇಶದಲ್ಲಿ ಒಟ್ಟಾರೆ ಶೇ.15ರಷ್ಟು ಮೀಸಲಾತಿ ಇದೆ. ಕರಡು ನಿಯಮದಂತೆ ಈ ಶೇ.15ರ ಮೀಸಲಾತಿಯನ್ನು ಎರಡು ವಿಭಾಗಗಳಾಗಿ ವಿಂಗಡಿಸಲು ಪ್ರಸ್ತಾಪಿಸಲಾಗಿದೆ.

ಅದರಂತೆ, ಸರ್ಕಾರಿ ಶಾಲೆಗಳಲ್ಲಿ ವ್ಯಾಸಂಗ ಮಾಡಿದ ಅರ್ಹ ವಿದ್ಯಾರ್ಥಿಗಳಿಗೆ ಶೇ.7.5ರಷ್ಟು ಮೀಸಲಾತಿ ಹಾಗೂ ಗ್ರಾಮೀಣ ಪ್ರದೇಶದಲ್ಲಿರುವ ಸರ್ಕಾರಿ ಅಥವಾ ಖಾಸಗಿ ಶಾಲೆ ಸೇರಿದಂತೆ ಯಾವುದೇ ಶಿಕ್ಷಣ ಸಂಸ್ಥೆಯಲ್ಲಿ 10ನೇ ತರಗತಿವರೆಗೆ ವ್ಯಾಸಂಗ ಮಾಡಿದ ಅರ್ಹ ಗ್ರಾಮೀಣ ವಿದ್ಯಾರ್ಥಿಗಳಿಗೆ ಶೇ.7.5ರಷ್ಟು ಮೀಸಲಾತಿ ನೀಡಲು ಉದ್ದೇಶಿಸಲಾಗಿದೆ.

**ವೃತ್ತಿಪರ ಕೋರ್ಸ್‌ಗಳಿಗೆ ಅನ್ವಯ**

ಈ ಮೀಸಲಾತಿಯು ವೃತ್ತಿಪರ ಶಿಕ್ಷಣ ಸಂಸ್ಥೆಗಳಲ್ಲಿ ಸರ್ಕಾರಿ ಸೀಟುಗಳಿಗೆ ಪ್ರವೇಶ ಪಡೆಯುವ ಅಭ್ಯರ್ಥಿಗಳ ಆಯ್ಕೆ ಪ್ರಕ್ರಿಯೆಯಲ್ಲಿ ಅನ್ವಯವಾಗಲಿದೆ. ವೈದ್ಯಕೀಯ, ಎಂಜಿನಿಯರಿಂಗ್ ಸೇರಿದಂತೆ ವಿವಿಧ ವೃತ್ತಿಪರ ಕೋರ್ಸ್‌ಗಳ ಪ್ರವೇಶದಲ್ಲಿ ಗ್ರಾಮೀಣ ಹಾಗೂ ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ ಹೆಚ್ಚಿನ ಅವಕಾಶ ಕಲ್ಪಿಸುವುದು ಇದರ ಉದ್ದೇಶವಾಗಿದೆ.

ಕರಡು ನಿಯಮ ಪ್ರಕಟವಾಗಿರುವ ಹಿನ್ನೆಲೆಯಲ್ಲಿ ಸರ್ಕಾರವು ಸಾರ್ವಜನಿಕರು ಹಾಗೂ ಸಂಬಂಧಪಟ್ಟವರಿಂದ ಸಲಹೆ, ಆಕ್ಷೇಪಣೆಗಳನ್ನು ಸ್ವೀಕರಿಸಲಿದೆ. ಬಂದ ಅಭಿಪ್ರಾಯಗಳನ್ನು ಪರಿಶೀಲಿಸಿದ ಬಳಿಕ ಅಂತಿಮ ನಿಯಮಗಳನ್ನು ಪ್ರಕಟಿಸುವ ಸಾಧ್ಯತೆ ಇದೆ.

ಸರ್ಕಾರಿ ಶಾಲೆಗಳಲ್ಲಿ ವ್ಯಾಸಂಗ ಮಾಡಿರುವ ಗ್ರಾಮೀಣ ಹಿನ್ನೆಲೆಯ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣದ ಅವಕಾಶ ಹೆಚ್ಚಿಸುವ ನಿಟ್ಟಿನಲ್ಲಿ ಈ ಕ್ರಮ ಮಹತ್ವದ್ದಾಗಿದೆ.

## ಕಾವೇರಿ ನೀರು: ಇಂದು CWRC, CWMA ಸಭೆ

● ವಿಕ್ರಮ ವಾಹಿನಿ । ನವದೆಹಲಿ

ತಮಿಳುನಾಡಿಗೆ ಕಾವೇರಿ ನೀರು ಹರಿಸುವ ವಿಚಾರಕ್ಕೆ ಸಂಬಂಧಿಸಿದಂತೆ ಕಾವೇರಿ ನೀರು ನಿಯಂತ್ರಣ ಸಮಿತಿ (CWRC) ಹಾಗೂ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ (CWMA) ಸಭೆಗಳು ನಾಳೆ ದೆಹಲಿಯಲ್ಲಿ ನಡೆಯಲಿವೆ.

ಬೆಳಗ್ಗೆ 11.30ಕ್ಕೆ CWMA ಕಚೇರಿಯಲ್ಲಿ ಅಘಾಖಅ ಅಧ್ಯಕ್ಷ ವಿನೀತ್ ಗುಪ್ತಾ ನೇತೃತ್ವದಲ್ಲಿ ಸಭೆ ನಡೆಯಲಿದ್ದು, ತಮಿಳುನಾಡಿಗೆ ನೀರು ಹರಿಸುವ ಕುರಿತು ಹೊಸ ಆದೇಶ ಹೊರಡಿಸುವ ಬಗ್ಗೆ ಚರ್ಚೆ ನಡೆಯಲಿದೆ. ಮಧ್ಯಾಹ್ನ 2.30ಕ್ಕೆ CWMA ಅಧ್ಯಕ್ಷ ಎಸ್.ಕೆ. ಹಲ್ದಾರ್ ನೇತೃತ್ವದಲ್ಲಿ ಪ್ರಾಧಿಕಾರದ ಸಭೆ ನಡೆಯಲಿದೆ.

ಹಿಂದಿನ ಸಭೆಯಲ್ಲಿ ಕರ್ನಾಟಕವು ನಿತ್ಯ 9,000 ಕ್ಯೂಸೆಕ್ ನೀರನ್ನು 15 ದಿನಗಳ ಕಾಲ ತಮಿಳುನಾಡಿಗೆ ಹರಿಸುವಂತೆ ಸೂಚಿಸಲಾಗಿತ್ತು. ಇದನ್ನು ಪ್ರಶ್ನಿಸಿ ಕರ್ನಾಟಕ ಮೇಲ್ಮನವಿ ಸಲ್ಲಿಸಿದ್ದು, ನೀರು ಹರಿಸುವ ಪ್ರಮಾಣವನ್ನು 9,000ರಿಂದ 2,000 ಕ್ಯೂಸೆಕ್‌ಗೆ ಇಳಿಸುವಂತೆ ಮನವಿ ಮಾಡಿದೆ.

ಜಲಾಶಯಗಳಿಗೆ ಒಳಹರಿವು ಕಡಿಮೆಯಾಗಿರುವ ಹಿನ್ನೆಲೆಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ನೀರು ಬಿಡುಗಡೆ ಮಾಡಲು ಸಾಧ್ಯವಿಲ್ಲ ಎಂದು ಕರ್ನಾಟಕ ತನ್ನ ವಾದ ಮಂಡಿಸಿದೆ. ಮತ್ತೊಂದೆಡೆ, ಬಾಕಿ ಇರುವ ನೀರನ್ನು ಕರ್ನಾಟಕದಿಂದ ಹರಿಸಬೇಕೆಂದು ತಮಿಳುನಾಡು ಒತ್ತಾಯಿಸುವ ಸಾಧ್ಯತೆ ಇದೆ. ಉಭಯ ರಾಜ್ಯಗಳ ವಾದ ಆಲಿಸಿದ ಬಳಿಕ ಅಂತಿಮವಾಗಿ ಎಷ್ಟು ಪ್ರಮಾಣದ ನೀರು ಹರಿಸಬೇಕು ಎಂಬುದನ್ನು ಅಘಾಒಂ ನಿರ್ಧರಿಸಲಿದೆ.

ಇದೇ ವೇಳೆ, ತಮಿಳುನಾಡಿನ ಬೇಡಿಕೆ ಹಾಗೂ ಕರ್ನಾಟಕದ ನೀರಿನ ಕೊರತೆಯ ನಡುವಿನ ಸಮತೋಲನ ಕಾಯ್ದುಕೊಳ್ಳುವುದು ಪ್ರಾಧಿಕಾರಕ್ಕೆ ಸವಾಲಾಗಿದೆ. ಸಭೆಯ ನಿರ್ಧಾರ ಉಭಯ ರಾಜ್ಯಗಳಲ್ಲೂ ಕುತೂಹಲ ಮೂಡಿಸಿದ್ದು, ಕರ್ನಾಟಕದ ಮನವಿಗೆ CWMA ಯಾವ ರೀತಿಯ ಸ್ಪಂದನೆ ನೀಡಲಿದೆ ಎಂಬುದು ಮಹತ್ವ ಪಡೆದಿದೆ.

## 'ನೈಸ್ ದೇಶದ ಅತಿದೊಡ್ಡ ವಂಚನೆ'

● ವಿಕ್ರಮ ವಾಹಿನಿ । ಬೆಂಗಳೂರು

ಬೆಂಗಳೂರು–ಮೈಸೂರು ಮೂಲಸೌಕರ್ಯ ಕಾರಿಡಾರ್ ಯೋಜನೆ (ನೈಸ್)ಗಾಗಿ ಭೂಮಿ ಕಳೆದುಕೊಂಡ ರೈತರಿಗೆ 1,453 ನಿವೇಶನಗಳನ್ನು ಹಂಚಿಕೆ ಮಾಡಲು ರಾಜ್ಯ ಸಚಿವ ಸಂಪುಟ ಕೈಗೊಂಡಿರುವ ನಿರ್ಧಾರಕ್ಕೆ ಮಾಜಿ ಪ್ರಧಾನಿ ಹಾಗೂ ಜೆಡಿಎಸ್ ರಾಷ್ಟ್ರೀಯ ಅಧ್ಯಕ್ಷ ಎಚ್.ಡಿ. ದೇವೇಗೌಡ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಈ ನಿರ್ಧಾರವು ಹೈಕೋರ್ಟ್ ಅಭಿಪ್ರಾಯ ಹಾಗೂ ಸುಪ್ರೀಂ ಕೋರ್ಟ್ ತೀರ್ಪುಗಳಿಗೆ ವಿರುದ್ಧವಾಗಿದೆ ಎಂದು ಅವರು ಆರೋಪಿಸಿದ್ದಾರೆ.

ಈ ಕುರಿತು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಮೂರು ಪುಟಗಳ ಬಹಿರಂಗ ಪತ್ರ ಬರೆದಿರುವ ದೇವೇಗೌಡರು, ಜೆ.ಪಿ. ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಪತ್ರವನ್ನು ಬಿಡುಗಡೆ ಮಾಡಿದರು. ನೈಸ್ ಯೋಜನೆ ದೇಶದಲ್ಲೇ ಅತಿದೊಡ್ಡ ವಂಚನೆಗಳಲ್ಲಿ ಒಂದಾಗಿದೆ ಎಂದು ಆರೋಪಿಸಿದ ಅವರು, ಭೂಮಿ ಕಳೆದುಕೊಂಡ ರೈತರಿಗೆ ನಿವೇಶನ ನೀಡುವ ನೆಪದಲ್ಲಿ ಉಳಿದ ಭೂಮಿಯನ್ನು ದುರುಪಯೋಗಪಡಿಸಿಕೊಳ್ಳುವ ಹುನ್ನಾರವಿದೆ ಎಂದು ಅನುಮಾನ ವ್ಯಕ್ತಪಡಿಸಿದರು.

**'ಭೂಮಿಗೆ ಬಂಗಾರಕ್ಕಿಂತಲೂ ಹೆಚ್ಚಿನ ಬೆಲೆ'**

ನಿವೇಶನಗಳ ಹಂಚಿಕೆಯ ಹಿಂದೆ ದೊಡ್ಡ ಉದ್ದೇಶವಿದೆ ಎಂದು ಆರೋಪಿಸಿದ ದೇವೇಗೌಡರು, ಸಂಬಂಧಪಟ್ಟ ಪ್ರದೇಶಗಳಲ್ಲಿ ಒಂದು ಚದರ ಅಡಿ ಭೂಮಿಯ ಬೆಲೆ 10 ಸಾವಿರದಿಂದ 15 ಸಾವಿರದವರೆಗೆ ಇದೆ. ಇಷ್ಟೊಂದು ಮೌಲ್ಯದ ಭೂಮಿಯನ್ನು ಯಾರ ಲಾಭಕ್ಕಾಗಿ ಬಳಸಿಕೊಳ್ಳಲಾಗುತ್ತಿದೆ ಎಂಬುದನ್ನು ಸರ್ಕಾರ ಸ್ಪಷ್ಟಪಡಿಸಬೇಕು ಎಂದು ಆಗ್ರಹಿಸಿದರು.

ನೈಸ್ ಯೋಜನೆಗೆ ಸಂಬಂಧಿಸಿದ ಭೂಮಿಯನ್ನು ರಸ್ತೆ ಹಾಗೂ ಮೂಲಸೌಕರ್ಯ ಅಭಿವೃದ್ಧಿಗಾಗಿ ಸ್ವಾಧೀನಪಡಿಸಿಕೊಳ್ಳಲಾಗಿತ್ತು. ಆದರೆ ಯೋಜನಾ ಚೌಕಟ್ಟು ಒಪ್ಪಂದದ ಉದ್ದೇಶಕ್ಕೆ ವಿರುದ್ಧವಾಗಿ ಭೂಮಿಯನ್ನು ವಾಣಿಜ್ಯ ಬಳಕೆಗೆ ಅಥವಾ ನಿವೇಶನ ನಿರ್ಮಾಣಕ್ಕೆ ಬಳಸುವುದು ಸರಿಯಲ್ಲ ಎಂದು ದೇವೇಗೌಡರು ಹೇಳಿದರು.



**ಕೋರ್ಟ್ ಆದೇಶ ಉಲ್ಲಂಘನೆ ಆರೋಪ**

2016ರಲ್ಲಿ ರಾಜ್ಯ ಸರ್ಕಾರವೇ ಸುಪ್ರೀಂ ಕೋರ್ಟ್‌ಗೆ ಸಲ್ಲಿಸಿದ್ದ ಪ್ರಮಾಣಪತ್ರದಲ್ಲಿ, ಇಂಟರ್‌ಚೇಂಜ್ ಪ್ರದೇಶಗಳಲ್ಲಿ ನಿವೇಶನ ನಿರ್ಮಿಸುವುದು ಒಪ್ಪಂದ ಮತ್ತು ನ್ಯಾಯಾಲಯದ ಆದೇಶಗಳಿಗೆ ವಿರುದ್ಧವಾಗಿದೆ ಎಂದು ತಿಳಿಸಿತ್ತು. ಈಗ ಅದೇ ಸರ್ಕಾರ ಅದಕ್ಕೆ ವಿರುದ್ಧವಾದ ನಿರ್ಧಾರ ಕೈಗೊಂಡಿರುವುದು ಅರ್ಥವಾಗುತ್ತಿಲ್ಲ ಎಂದು ಅವರು ಪ್ರಶ್ನಿಸಿದರು.

ಮಾದಾವರ, ಕೊಡಿಗೆಹಳ್ಳಿ, ಕೆಂಗೇರಿ, ಕೊಮಘಟ್ಟ, ವರಹಸಂದ್ರ, ಸೋಂಪುರ, ಪಿಳ್ಳಗಾನಹಳ್ಳಿ ಸೇರಿದಂತೆ ಹಲವು ಗ್ರಾಮಗಳು ರಸ್ತೆ ನಿರ್ಮಾಣ ಯೋಜನೆಯ ವ್ಯಾಪ್ತಿಯಲ್ಲಿವೆ. ಇಂತಹ ಪ್ರದೇಶಗಳಲ್ಲಿ ನಿವೇಶನ ಹಂಚಿಕೆಗೆ ಅನುಮತಿ ನೀಡಿರುವುದು ಹೇಗೆ ಸಾಧ್ಯ ಎಂದು ಮುಖ್ಯಮಂತ್ರಿಯನ್ನು ದೇವೇಗೌಡರು ಪ್ರಶ್ನಿಸಿದರು.


ಜುಲೈ 2026ರಲ್ಲಿ ಹೈಕೋರ್ಟ್ ವಿಭಾಗೀಯ ಪೀಠವು ನೈಸ್ ಸಂಸ್ಥೆಯ ಹಣಕಾಸು ವ್ಯವಹಾರಗಳು, ಭೂಮಿ ಮಾರಾಟದ ಮುಂಗಡ ಹಾಗೂ ಜಂಟಿ ಅಭಿವೃದ್ಧಿ ಒಪ್ಪಂದಗಳ ಕುರಿತು ಗಮನಿಸಿರುವ ಅಂಶಗಳನ್ನು ತಮ್ಮ ಪತ್ರದಲ್ಲಿ ಉಲ್ಲೇಖಿಸಿರುವ ದೇವೇಗೌಡರು, ಯೋಜನೆಯ ಭೂಮಿಯಿಂದ ವಾಣಿಜ್ಯ ಲಾಭ ಪಡೆಯುವ ಚಟುವಟಿಕೆಗಳ ಬಗ್ಗೆ ನ್ಯಾಯಾಲಯದ ಗಮನಕ್ಕೆ ಬಂದಿರುವುದಾಗಿ ಹೇಳಿದ್ದಾರೆ. 2ನೇ ಪುಟಕ್ಕೆ...

## 'ಬೇಕಿದ್ದರೆ ಕೋರ್ಟ್‌ಗೆ ಹೋಗಲಿ, ಹೋರಾಟ ಮಾಡಲಿ'

● ವಿಕ್ರಮ ವಾಹಿನಿ । ಬೆಂಗಳೂರು

ನೈಸ್ ಯೋಜನೆಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ಕೈಗೊಳ್ಳುವ ಯಾವುದೇ ನಿರ್ಧಾರ ಕಾನೂನು ಚೌಕಟ್ಟಿನಲ್ಲೇ ಇರಲಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸ್ಪಷ್ಟಪಡಿಸಿದ್ದಾರೆ.

ನೈಸ್ ಯೋಜನೆ ಕುರಿತು ಸಚಿವ ಸಂಪುಟದ ನಿರ್ಧಾರ ಕಾನೂನುಬಾಹಿರವಾಗಿದೆ ಎಂದು ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರು ಮುಖ್ಯಮಂತ್ರಿ ಅವರಿಗೆ ಬಹಿರಂಗ ಪತ್ರ ಬರೆದಿರುವ ಕುರಿತು ಪ್ರತಿಕ್ರಿಯಿಸಿದ ಅವರು, "ನಾವು ಏನೇ ಮಾಡಿದರೂ ಕಾನೂನು ಚೌಕಟ್ಟಿನಲ್ಲೇ ಮಾಡುತ್ತೇವೆ. ಅಗತ್ಯವಿದ್ದರೆ ಕಾನೂನು ಅಭಿಪ್ರಾಯ ಪಡೆದು ಎಲ್ಲವನ್ನೂ ಮರುಪರಿಶೀಲಿಸುತ್ತೇವೆ. ಕಾನೂನು ಉಲ್ಲಂಘಿಸಿ ಯಾವುದೇ ಕ್ರಮ ಕೈಗೊಳ್ಳುವುದಿಲ್ಲ" ಎಂದರು.



ಒಂದು ವೇಳೆ ಸರ್ಕಾರದ ನಿರ್ಧಾರ ಕಾನೂನುಬಾಹಿರವಾಗಿದೆ ಎಂದು ಭಾವಿಸಿದರೆ ದೇವೇಗೌಡರು ನ್ಯಾಯಾಲಯದ ಮೊರೆ ಹೋಗಬಹುದು.

ಹೋರಾಟ ಮಾಡಲಿ ಅಥವಾ ಉಪವಾಸ ಮಾಡಲಿ ಎಂದು ಅವರು ತೀಕ್ಷ್ಣವಾಗಿ ಪ್ರತಿಕ್ರಿಯಿಸಿದರು. ನೈಸ್ ಯೋಜನೆಗಾಗಿ ಭೂಮಿ ಕಳೆದುಕೊಂಡಿರುವ ರೈತರ ಹಿತ ಕಾಪಾಡುವುದು ಸರ್ಕಾರದ ಜವಾಬ್ದಾರಿ ಎಂದು ಶಿವಕುಮಾರ್ ಹೇಳಿದರು. ಹಿಂದಿನ ಸರ್ಕಾರಗಳು ಒಪ್ಪಂದಗಳಿಗೆ ಸಹಿ ಹಾಕಿದ್ದು, ಅದರ ಪರಿಣಾಮ ರೈತರು ತಮ್ಮ ಆಸ್ತಿ ಕಳೆದುಕೊಂಡಿದ್ದಾರೆ. 2ನೇ ಪುಟಕ್ಕೆ...

# ಅಹಿಂದ ಸಮಾವೇಶಕ್ಕೆ ಆಪ್ತರ ಗೈರು

## ಸಿದ್ದರಾಮಯ್ಯ ಬಣದಲ್ಲಿ ಬಿರುಕು? ಸತೀಶ್, ಮಹದೇವಪ್ಪ ಅಸಮಾಧಾನ

● ವಿಕ್ರಮ ವಾಹಿನಿ । ಬೆಂಗಳೂರು

ಬೆಂಗಳೂರಿನ ಅರಮನೆ ಮೈದಾನದಲ್ಲಿ ಭಾನುವಾರ ನಡೆದ ಹಿಂದುಳಿದ ವರ್ಗಗಳ ಬೃಹತ್ ಸಮಾವೇಶಕ್ಕೆ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಆಪ್ತ ವಲಯದ ಪ್ರಮುಖ ನಾಯಕರಾದ ಸಚಿವ ಸತೀಶ್ ಜಾರಕಿಹೊಳಿ ಹಾಗೂ ಮಾಜಿ ಸಚಿವ ಡಾ. ಎಚ್.ಸಿ. ಮಹದೇವಪ್ಪ ಗೈರಾಗಿರುವುದು ರಾಜ್ಯ ರಾಜಕೀಯದಲ್ಲಿ ಚರ್ಚೆಗೆ ಕಾರಣವಾಗಿದೆ.



ಕರ್ನಾಟಕ ರಾಜ್ಯ ಹಿಂದುಳಿದ ಜಾತಿಗಳ ಒಕ್ಕೂಟದ ರಜತ ಮಹೋತ್ಸವ ಹಾಗೂ ಬೃಹತ್ ಜನಜಾಗೃತಿ ಸಮಾವೇಶದಲ್ಲಿ ಸಿದ್ದರಾಮಯ್ಯ ಅವರ ಆಪ್ತರೆಂದೇ ಗುರುತಿಸಿಕೊಂಡಿದ್ದ ಇಬ್ಬರು ಪ್ರಮುಖ ನಾಯಕರು ಗೈರಾಗಿರುವುದು ಹಲವು ರಾಜಕೀಯ ಲೆಕ್ಕಾಚಾರಗಳಿಗೆ ಕಾರಣವಾಗಿದೆ. ಅಹಿಂದ ಚಳವಳಿಯ ಆರಂಭಿಕ ಹಂತದಲ್ಲಿ ಸಿದ್ದರಾಮಯ್ಯ ಅವರೊಂದಿಗೆ ಪ್ರಮುಖವಾಗಿ ಗುರುತಿಸಿಕೊಂಡಿದ್ದ ನಾಯಕರೇ ಕಾರ್ಯಕ್ರಮದಿಂದ ದೂರ ಉಳಿದಿರುವುದು ಗಮನ ಸೆಳೆದಿದೆ.

**'ಯಾವುದೇ ಆಹ್ವಾನ ಬಂದಿಲ್ಲ'**

ಸಮಾವೇಶಕ್ಕೆ ಗೈರಾಗಿರುವ ಕುರಿತು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಬಹಿರಂಗ ಅಸಮಾಧಾನ ವ್ಯಕ್ತಪಡಿಸಿದ್ದಾರೆ. "ಸಮಾವೇಶಕ್ಕೆ ನನಗೆ ಯಾವುದೇ ಆಹ್ವಾನ ಬಂದಿರಲಿಲ್ಲ. ಹೀಗಾಗಿ ನಾನು ಹೋಗಿಲ್ಲ. ಅಹಿಂದ ಯಾರೊಬ್ಬರ ಆಸ್ತಿಯೂ ಅಲ್ಲ" ಎಂದು ಅವರು ಹೇಳಿದ್ದಾರೆ.

ಅಹಿಂದ ಚಳವಳಿಯ ಹೆಸರಿನಲ್ಲಿ ನಡೆಯುವ ಕಾರ್ಯಕ್ರಮಗಳಲ್ಲಿ ಎಲ್ಲರನ್ನೂ ಒಳಗೊಳ್ಳುವ ಅಗತ್ಯವಿದೆ ಎಂಬ ಸಂದೇಶವನ್ನು ಸತೀಶ್ ಜಾರಕಿಹೊಳಿ ಅವರ ಹೇಳಿಕೆ ನೀಡಿದೆ ಎಂದು ರಾಜಕೀಯ ವಲಯದಲ್ಲಿ ವಿಶ್ಲೇಷಿಸಲಾಗುತ್ತಿದೆ.

**'ಅಹಿಂದ ಒಬ್ಬರಿಂದಲೇ ಆಗಿಲ್ಲ'**

ಮಾಜಿ ಸಚಿವ ಎಚ್.ಸಿ. ಮಹದೇವಪ್ಪ ಕೂಡ ಅಹಿಂದ ಚಳವಳಿ ಕುರಿತು ಪರೋಕ್ಷವಾಗಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ. "ಅಹಿಂದ ಒಬ್ಬರಿಂದಲೇ ಆಗಿಲ್ಲ" ಎಂದು ಹೇಳಿರುವ ಅವರು, ಚಳವಳಿಯ ರೂಪುಗೊಳ್ಳುವಿಕೆಯ ಸಂದರ್ಭದಲ್ಲಿ ತಮ್ಮ ಪಾತ್ರವನ್ನು ನೆನಪಿಸಿದ್ದಾರೆ.

"ಮೊದಲು ಹುಬ್ಬಳ್ಳಿಯಲ್ಲಿ ಅಹಿಂದ ಸಮಾವೇಶ ನಡೆಯಿತು. ನಾನೊಬ್ಬನೇ ಕುಳಿತು ಅದನ್ನು ರೂಪಿಸಿದ್ದೆ. ಕೇವಲ ಭಾಷಣ ಮಾಡಿ ಹೋಗುವುದರಿಂದ ಅಥವಾ ಸಭೆ ಸೇರಿ ನಿರ್ಣಯ ಕೈಗೊಳ್ಳುವುದರಿಂದ ನಾಯಕತ್ವ ರೂಪುಗೊಳ್ಳುವುದಿಲ್ಲ. ದೇಶವನ್ನು ಹೇಗೆ ಕಟ್ಟಬೇಕು ಎಂಬ ಬದ್ಧತೆ ಮುಖ್ಯ. ಯಾರಿಗೆ ಬದ್ಧತೆ ಇದೆಯೋ ಅವರು ಚಳವಳಿಯನ್ನು ಮುನ್ನಡೆಸಿಕೊಂಡು ಹೋಗುತ್ತಾರೆ" ಎಂದು ಮಹದೇವಪ್ಪ ಹೇಳಿದ್ದಾರೆ.

**ರಾಜಕೀಯ ವಲಯದಲ್ಲಿ ಕುತೂಹಲ**

ಸಿದ್ದರಾಮಯ್ಯ ಅವರ ರಾಜಕೀಯ ಪಯಣದಲ್ಲಿ ಅಹಿಂದ ಚಳವಳಿ ಪ್ರಮುಖ ಪಾತ್ರ ವಹಿಸಿತ್ತು. ಈ ಹಿನ್ನೆಲೆಯಲ್ಲಿ ಅದರ ಪ್ರಮುಖ ನಾಯಕರೇ ಇತ್ತೀಚಿನ ಸಮಾವೇಶದಿಂದ ದೂರ ಉಳಿದಿರುವುದು ಕಾಂಗ್ರೆಸ್‌ನ ಆಂತರಿಕ ರಾಜಕೀಯದಲ್ಲಿ ಹೊಸ ಚರ್ಚೆಗೆ ಕಾರಣವಾಗಿದೆ.

ಸತೀಶ್ ಜಾರಕಿಹೊಳಿ ಮತ್ತು ಮಹದೇವಪ್ಪ ಅವರ ಹೇಳಿಕೆಗಳು ವೈಯಕ್ತಿಕ ಅಸಮಾಧಾನವೇ ಅಥವಾ ಸಿದ್ದರಾಮಯ್ಯ ಬಣದೊಳಗಿನ ರಾಜಕೀಯ ಅಂತರದ ಸೂಚನೆಯೇ ಎಂಬುದು ಇದೀಗ ಕುತೂಹಲ ಮೂಡಿಸಿದೆ.

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481

ವಿಕ್ರಮ ವಾಹಿನಿ

### ಸವಿ ವಾಹಿನಿ

ಪ್ರತಿ ಕೆಲಸವನ್ನು ನಗು ನಗುತ್ತ ಮಾಡಬೇಕು. ನಗುವಿಲ್ಲದೇ ಕಳೆದ ದಿನವೊಂದು ವ್ಯರ್ಥವೇ. ನಗು ನಿರಂತರವಾಗಿರಲಿ!

### ದಿನ ಪಂಚಾಂಗ

ಸೆಪ್ಟಂಬರ್, 08-2026, ಮಂಗಳವಾರ ವರ್ಷ ಋತು, ಶ್ರಾವಣ ಮಾಸ, ಬಹುಳ ಪಕ್ಷ. ದ್ವಾದಶಿ ತಿಥಿ ಮ-01:58 ಪುಷ್ಯ ನಕ್ಷತ್ರ ಸಾ-05:03
ರಾಹುಕಾಲ ಮ-03:21-04:53
ಪರ್ಯೂಷಣ್ ಆರಂಭ (ಶ್ವೇತಾಂಬರ), ಪ್ರದೋಷ, ಮಂಗಳಗೌರೀ ವ್ರತ, ಅಂತರರಾಷ್ಟ್ರೀಯ ಸಾಕ್ಷರತಾ ದಿನ, ಕಪ್ಪತ್ತಗುಡ್ಡ ನಂದಿವೇರಿ ಬಸವೇಶ್ವರ ಜಾತ್ರೆ, ಕಪ್ಪತ್ತಗುಡ್ಡ ಮಲ್ಲಿಕಾರ್ಜುನ ಜಾತ್ರೆ, ಹುನಗುಂದ । ಮೂಗನೂರ ಮಲ್ಲಿಕಾರ್ಜುನ ರಥ, ರಾಣೆಬೆನ್ನೂರ । ಹುಲಿಕಟ್ಟಿ ಬೀರಲಿಂಗೇಶ್ವರ ರಥ, ಹಾವೇರಿ । ಗುತ್ತಲ ವೀರಭದ್ರ ಜಾತ್ರೆ, ಬೇಟ ನಾರಾಯಣ ಮಹಾರಾಜ ಪುಣ್ಯದಿನ, ಗಂವ್ಹಾರ ಶಂಕರಾನಂದ ಆರಾಧನೆ, ನಾರಾಯಣಪೇಟೆ ಧೀರಾನಂದಸ್ವಾಮಿ ಆರಾಧನೆ

### ಆಧ್ಯಾತ್ಮ

## ಮನುಷ್ಯನ ಆಯಾಸ, ಗಾಬರಿ ನೀಗಿಸುವ ಶಕ್ತಿ ನೀರಿಗಿದೆ



● ವಿಕ್ರಮ ವಾಹಿನಿ । ಗೋಕರ್ಣ

ಹಿಂದೆ ರಾಜರು ಮಳೆಯ ನೀರನ್ನೇ ಸುಯೋಗ್ಯವಾಗಿ ಸಂಗ್ರಹಿಸಿ ಕುಡಿಯುತ್ತಿದ್ದರು. ಸಮರ್ಪಕವಾಗಿ ಮಳೆ ನೀರನ್ನು ಸಂಗ್ರಹಿಸಿದಾಗ ಅದು ವರ್ಷಗಳ ಕಾಲ ಹಾಳಾಗದೇ ಸೇವನೆಗೆ ಯೋಗ್ಯವಾಗಿರುತ್ತದೆ. ನಮಗಿಂದು ಮಳೆ ನೀರೆಂಬ ಅಮೃತ ಜಲದ ಬಗ್ಗೆ ಯಾವುದೇ ಜ್ಞಾನ ಇಲ್ಲದಂತಾಗಿದೆ. ಮಳೆನೀರನ್ನು ಸುಯೋಗ್ಯವಾಗಿ ಸಂಗ್ರಹಿಸುವುದರ ಬದಲು, ಅದನ್ನು ಚರಂಡಿಯಲ್ಲಿ ಹರಿದು ಹೋಗಲು ಬಿಡುತ್ತಿದ್ದೇವೆ ಎಂದು ಶ್ರೀರಾಮಚಂದ್ರಾಪುರ ಮಠದ ಜಗದ್ಗುರು ಶಂಕರಾಚಾರ್ಯ ಶ್ರೀಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು ಹೇಳಿದರು.

ಗೋಕರ್ಣದ ಅಶೋಕೆಯ ಮೂಲಮಠದ ಪರಿಸರದಲ್ಲಿ ನಡೆಯುತ್ತಿರುವ 'ಅನ್ನಬ್ರಹ್ಮ ಚಾತುರ್ಮಾಸ್ಯ'ದ ಧರ್ಮಸಭೆಯಲ್ಲಿ 07.09.2026 ರಂದು 'ಅನ್ನಂ ಬ್ರಹ್ಮ' ಮಾಲಿಕೆಯಲ್ಲಿ ಪ್ರವಚನ ಅನುಗ್ರಹಿಸಿದ ಶ್ರೀಗಳು, ಸಮಾಧಾನವನ್ನು ನೀಡುವಲ್ಲಿ ನೀರಿನಂತೆ ಇರುವ ಇನ್ನೊಂದು ಪದಾರ್ಥವಿಲ್ಲ. ಮನುಷ್ಯನಿಗೆ ದಣಿವು, ಆಯಾಸ, ಗಾಬರಿಗಳಾದಾಗ ಸಮಾಧಾನವನ್ನು ತಂದುಕೊಡುವ ಗುಣ ನೀರಿಗಿದೆ. ಬೇರೆ ಬೇರೆ ಕಾಲದ ಬೇರೆ ಬೇರೆ ಪ್ರದೇಶದ ಆಯುರ್ವೇದ ಆಚಾರ್ಯರೆಲ್ಲರೂ ಮಳೆ ನೀರನ್ನು ಸೇವನೆಗೆ ಸುಯೋಗ್ಯ ಎಂದು ಸಾರಿ ಹೇಳಿದ್ದಾರೆ.ಮಳೆಯ ನೀರಿಗೆ ಅಪರಿಮಿತವಾದ ಚೈತನ್ಯವಿದ್ದು, ಲೆಕ್ಕಕ್ಕೆ ಸಿಗದಷ್ಟು ಗುಣಗಳಿವೆ. ಮಳೆನೀರಿನಲ್ಲಿ ಸುಲಭವಾಗಿ ಗುರುತಿಸಲು ಸಾಧ್ಯವಾಗುವ ಆರು ಗುಣಗಳನ್ನು ಆಯುರ್ವೇದ ಚರ್ಚಿಸಿದ್ದು, ತಂಪು, ಶುದ್ಧ, ರುಚಿಕರ, ಕಲ್ಮಶಗಳಿಲ್ಲ, ಮಂಗಳಕರ ಹಾಗೂ ಜೀರ್ಣಕ್ಕೆ ಲಘು ಎಂಬುದಾಗಿ ವಿಮರ್ಶಿಸಿದೆ ಎಂದರು.

ಮಳೆಯ ನೀರಿನಲ್ಲಿ ಗಾಂಗ ಹಾಗೂ ಸಾಮುದ್ರ ಎಂದು ಎರಡು ವಿಭಾಗವನ್ನು ಮಾಡಿದ್ದು, ಗಾಂಗ ಜಲವು ಸೇವಿಸಲು ಉತ್ಕೃಷ್ಟ ನೀರಾಗಿದೆ. ಸಂಗ್ರಹಿಸಿದ ಮಳೆಯ ನೀರು ಗಾಂಗವೋ? ಅಥವಾ ಸಾಮುದ್ರಕವೋ?? ಎಂದು ತಿಳಿಯಲು ಅನೇಕ ಸುಲಭ ಪರೀಕ್ಷೆಗಳನ್ನು ಮಾಡಬಹುದಾಗಿದ್ದು, ಸಾಮಾನ್ಯವಾಗಿ ಆಶ್ವಯುಜ ಮಾಸದಲ್ಲಿ ಹಾಗೂ ದಕ್ಷಿಣ ದಿಕ್ಕಿನಲ್ಲಿ ಅಗಸ್ತ್ಯ ನಕ್ಷತ್ರ ಕಾಣುವಾಗ ಬೀಳುವ ಮಳೆಯ ನೀರು ಗಾಂಗವಾಗಿದ್ದು, ಅದು ಕುಡಿಯಲು ಉತ್ತಮೋತ್ತಮ ಎಂದು ಪ್ರಾಚೀನ ಮಹರ್ಷಿಗಳು ಸೂಚಿಸಿದ್ದಾರೆ ಎಂದು ವಿವರಿಸಿದರು.

ಮಳೆಯ ನೀರು ಕಪ್ಪು ಮಣ್ಣಿಗೆ ಬಿದ್ದಾಗ ಸಿಹಿ ರಸ, ಬಿಳಿ ಮಣ್ಣಿಗೆ ಬಿದ್ದಾಗ ಒಗರು, ಪರ್ವತದ ತಪ್ಪಲಲ್ಲಿ ಬಿದ್ದ ನೀರು ಖಾರ ರಸ ಎಂಬುದಾಗಿ ಮಳೆಯ ನೀರು ಯಾವ ಬಣ್ಣದ ಮಣ್ಣಿಗೆ ಬಿದ್ದಾಗ ಯಾವ ರುಚಿ ಏರ್ಪಡುತ್ತದೆ ಎಂದು ವಿಸ್ತಾರವಾಗಿ ನಮ್ಮ ಪೂರ್ವಜರು ಸಂಶೋಧಿಸಿದ್ದು, ಬಂಗಾರ, ಬೆಳ್ಳಿ , ಮಣ್ಣು ಅಥವಾ ಗಾಜಿನ ಪಾತ್ರೆಗಳಲ್ಲಿ ಮಳೆಯ ನೀರನ್ನು ಸಂಗ್ರಹ ಮಾಡಬೇಕು. ಇವುಗಳಿಂದ ನೀರಿನ ಗುಣಗಳ ನಾಶವಾಗುವುದಿಲ್ಲ ಎಂದು ತಿಳಿಸಿದರು. ಶ್ರೀಕ್ಷೇತ್ರ ಗೋಕರ್ಣದ ಉಪಾಧಿವಂತರಾದ ವೇ.ಮೂ. ಪರಮೇಶ್ವರ ಭಟ್ ಮಾರ್ಕಂಡೆ ದಂಪತಿಗಳು ದಿನಪ್ರಧಾನರಾಗಿ ಉಪಸ್ಥಿತರಿದ್ದು, ಶ್ರೀಗಳಿಂದ ಆಶೀರ್ವಾದ ಪಡೆದರು.

## ಯುಜಿಸಿಇಟಿ 3ನೇ ಸುತ್ತಿನ ಅಂತಿಮ ಸೀಟು ಹಂಚಿಕೆ ಪ್ರಕಟ

● ವಿಕ್ರಮ ವಾಹಿನಿ । ಬೆಂಗಳೂರು

ಎಂಜಿನಿಯರಿಂಗ್, ಪಶುವೈದ್ಯಕೀಯ ಸೇರಿದಂತೆ ವಿವಿಧ ಯುಜಿಸಿಇಟಿ ಕೋರ್ಸ್‌ಗಳ ಮೂರನೇ ಸುತ್ತಿನ ಸೀಟು ಹಂಚಿಕೆಯ ಅಂತಿಮ ಫಲಿತಾಂಶವನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಕೆಇಎ) ಸೋಮವಾರ ಪ್ರಕಟಿಸಿದೆ.

ಸೀಟು ಹಂಚಿಕೆಯಾಗಿರುವ ಅಭ್ಯರ್ಥಿಗಳು ಸೆ.10ರೊಳಗೆ ನಿಗದಿತ ಶುಲ್ಕ ಪಾವತಿಸಬೇಕು. ಬಳಿಕ ಸೀಟು ಖಾತರಿ ಪತ್ರವನ್ನು ಡೌನ್‌ಲೋಡ್ ಮಾಡಿಕೊಂಡು ಸೆ.11ರೊಳಗೆ ಸಂಬಂಧಪಟ್ಟ ಕಾಲೇಜಿಗೆ ತೆರಳಿ ಪ್ರವೇಶ ಪಡೆಯುವಂತೆ ಕೆಇಎ ಕಾರ್ಯನಿರ್ವಾಹಕ ನಿರ್ದೇಶಕ ಎಚ್. ಪ್ರಸನ್ನ ತಿಳಿಸಿದ್ದಾರೆ.

ಮೂರನೇ ಸುತ್ತಿನಲ್ಲಿ ಸೀಟು ಪಡೆದ ಅಭ್ಯರ್ಥಿಗಳಿಗೆ ಪ್ರವೇಶ ಪಡೆಯುವುದು ಕಡ್ಡಾಯವಾಗಿದ್ದು, ಸೀಟು ರದ್ದತಿಗೆ ಕೋರಿ ಸಲ್ಲಿಸುವ ಯಾವುದೇ ಮನವಿಯನ್ನು ಪರಿಗಣಿಸಲಾಗುವುದಿಲ್ಲ ಎಂದು ಕೆಇಎ ಸ್ಪಷ್ಟಪಡಿಸಿದೆ.

ನಿಗದಿತ ಅವಧಿಯಲ್ಲಿ ಕಾಲೇಜಿಗೆ ಪ್ರವೇಶ ಪಡೆಯದ ಅಭ್ಯರ್ಥಿಗಳ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಎಚ್. ಪ್ರಸನ್ನ ಎಚ್ಚರಿಕೆ ನೀಡಿದ್ದಾರೆ. ಅಭ್ಯರ್ಥಿಗಳು ಕೆಇಎ ಸೂಚಿಸಿರುವ ದಿನಾಂಕ ಹಾಗೂ ನಿಯಮಗಳನ್ನು ತಪ್ಪದೇ ಪಾಲಿಸುವಂತೆ ತಿಳಿಸಲಾಗಿದೆ.

# ತಿರುಗಲ್ ತಿಮ್ಮಪ್ಪನ ಬೆಟ್ಟದಲ್ಲಿ ವಿಶೇಷ 'ಅನ್ನಬ್ರಹ್ಮ' ಬಂಡೆಯೂಟದ ಹಬ್ಬ

ಈ ಬಾರಿ ಗೋಕರ್ಣದ ಅಶೋಕೆಯ ಮೂಲಮಠದಲ್ಲಿ ನಡೆಯುತ್ತಿರುವ 33ನೇ ಚಾತುರ್ಮಾಸ್ಯ ಸಾರ್ವಜನಿಕವಾಗಿ ಗಮನ ಸೆಳೆಯುತ್ತಿದೆ. ಜುಲೈ 29ರಿಂದ ಸೆಪ್ಟೆಂಬರ್ 26ರವರೆಗೆ "ಅನ್ನಬ್ರಹ್ಮ ಚಾತುರ್ಮಾಸ್ಯ" ಆಯೋಜಿಸಿರುವ ರಾಘವೇಶ್ವರ ಶ್ರೀಗಳು ಅನ್ನಕ್ಕೆ ಆದ್ಯತೆ ನೀಡಿದ್ದಾರೆ. ಶ್ರೀಗಳೇ ಹೇಳಿರುವಂತೆ 'ಅನ್ನ ಹಾಗೂ ಅಮ್ಮ' ಒಂದೇ. "ಅನ್ನ ಹಾಗೂ ಅಮ್ಮ ಎರಡಕ್ಕೂ ಹೆಚ್ಚು ವ್ಯತ್ಯಾಸವಿಲ್ಲ. ಪೋಷಕರು ಹೊರಗಿನಿಂದ ಪೋಷಿಸಿದರೆ, ಅನ್ನ ಒಳಗಿನಿಂದ ಕಾಪಾಡುತ್ತದೆ" ಎಂದು ಶ್ರೀಗಳು ಹೇಳಿದ್ದಾರೆ. ಅನ್ನ ಕೇವಲ ಹೊಟ್ಟೆ ತುಂಬಿಸುವ ವಸ್ತು ಅಲ್ಲ, ಅದು ಪರಮಾತ್ಮನ ಸ್ವರೂಪ, ಅನ್ನಪೂರ್ಣೇಶ್ವರಿ ಸ್ವರೂಪವೇ ಅನ್ನ.

ಇಂಥ ಅನ್ನದ ಹಬ್ಬವನ್ನು ಕರ್ನಾಟಕದ ಕೊಪ್ಪಳ ಜಿಲ್ಲೆಯ ಐತಿಹಾಸಿಕ ತಿರುಗಲ್ ತಿಮ್ಮಪ್ಪ ಬೆಟ್ಟದಲ್ಲಿ ಪ್ರತಿವರ್ಷವೂ ಆಚರಣೆ ಮಾಡಲಾಗುತ್ತಿದೆ. ಈ ಹಬ್ಬಕ್ಕೆ ಶತಶತಮಾನಗಳ ಹಿನ್ನೆಲೆ ಇದೆ. ಶ್ರಾವಣ ಮಾಸದ ಕೊನೆ ಶನಿವಾರದಂದು ಆಚರಿಸುವ ಇಲ್ಲಿನ ವಿಶೇಷ ಅನ್ನಬ್ರಹ್ಮ ಬಂಡೆಯೂಟ ಕೋಮು ಸೌಹಾರ್ದತೆ ಮತ್ತು ಪರಸ್ಪರ ಭ್ರಾತೃತ್ವ ಮೂಡಿಸುವ ಹಬ್ಬವಾಗಿದೆ. ಎಂದಿನಂತೆ ಈ ಬಾರಿಯೂ 'ಅನ್ನಬ್ರಹ್ಮ' ವಿಶೇಷ ಬಂಡೆಯೂಟ ಹಬ್ಬದಾಚರಣೆಯಲ್ಲಿ ಎಲ್ಲ ಜಾತಿ, ಧರ್ಮದವರು ಪಾಲ್ಗೊಂಡಿದ್ದು ಬಂಡೆಯೂಟ ಸವಿದು ಧನ್ಯತೆ ಹೊಂದಿದ್ದಾರೆ.



**ಬಂಡೆಯೂಟ ತಂದ ಸಂತೃಪ್ತ ಭಾವ:** ತಿರುಗಲ್ ತಿಮ್ಮಪ್ಪ ಬೆಟ್ಟವು ಶೈವ-ವೈಷ್ಣವ ಪರಂಪರೆ ಸಂಕೇತಿಸುವ ಒಂದು ಧಾರ್ಮಿಕ ತಾಣ. ಕೊಪ್ಪಳ ತಾಲೂಕಿನ ಐತಿಹಾಸಿಕ ದಿಂದಿರಿಗಿ ಪಟ್ಟಣವೆಂದು ಕರೆಯುವ ಕೆರೆಹಳ್ಳಿ ಗ್ರಾಮದ ಪೂರ್ವದಂಚಿನಲ್ಲಿ ಈ ದೇವಾಲಯವಿದೆ. ತಿಮ್ಮಪ್ಪ, ಲಕ್ಷ್ಮೀದೇವಿ ಮಂದಿರಗಳು ಇಂದು ನಿಧಿಚೋರರಿಂದ ಹಾನಿಗೊಳಗಾಗಿವೆ. ಶ್ರೀ ತಿರುಗಲ್ ತಿಮ್ಮಪ್ಪ, ಶ್ರೀ ಲಕ್ಷ್ಮೀದೇವಿ ಮತ್ತು ಶ್ರೀ ತೇರಿನ ಹನುಮಪ್ಪ ಮೂಲ ಮೂರ್ತಿಗಳನ್ನು ದುಷ್ಕರ್ಮಿಗಳು ಧ್ವಂಸಗೊಳಿಸಿ ನಾಶ ಮಾಡಿದ್ದಾರೆ. ಇತ್ತೀಚಿನ ವರ್ಷಗಳಲ್ಲಿ ತೇರಿನ ಹನುಮಪ್ಪ ಹೊಸ ಮೂರ್ತಿ ಪ್ರತಿಷ್ಠಾಪನೆ ಮಾಡಿದ್ದು ಕೆರೆಹಳ್ಳಿ, ಶಹಪುರ ಮತ್ತು ಸುತ್ತಮುತ್ತಲ ಗ್ರಾಮಸ್ಥರು ಪ್ರತಿವರ್ಷದ ಶ್ರಾವಣ ಮಾಸದ ಕೊನೆ ಶನಿವಾರದಂದು ಎಂದಿನಂತೆ ಧಾರ್ಮಿಕ ಆಚರಣೆಗಳನ್ನು ನಡೆಸುತ್ತ ಬರುತ್ತಿದ್ದಾರೆ. ಇಲ್ಲಿಗೆ ಭೇಟಿ ನೀಡುವ ಪ್ರತಿಯೊಬ್ಬರೂ ಬಂಡೆಯೂಟ ಸವಿದೇ ಸಂತೃಪ್ತಿಯಿಂದ ಮರಳಿದರು.

**ಅನ್ನದ ಪೌರಾಣಿಕ ಹಿನ್ನೆಲೆ:**

ಶಿವ ಭೌತಿಕ ಜಗತ್ತು ಮಿಥ್ಯ. ಆಹಾರ ಸುಳ್ಳು ಅಂದಾಗ ಪಾರ್ವತಿ ಕುಪಿತಳಾಗಿ ಕಾಶಿಯಲ್ಲಿ ಅನ್ನಪೂರ್ಣೇಶ್ವರಿಯಾಗಿ ಅವತರಿಸಿದಳು. ಕೊನೆಗೆ ಶಿವನೇ ಭಿಕ್ಷುಕನಾಗಿ "ಭವತಿ ಭಿಕ್ಷಾಂ ದೇಹಿ" ಅಂತ ಬೇಡಬೇಕಾಯಿತು. ಇದು 'ಅನ್ನ'ದ ಮಹತ್ವ ಸಾರಲು ಆದಿ ದಂಪತಿಗಳು ಆಡಿದ ನಾಟಕವೆಂದು ರಾಘವೇಶ್ವರ ಶ್ರೀಗಳು ವಿವರಿಸಿದ್ದಾರೆ.

"ಆತ್ಮ ಸಾಕ್ಷಾತ್ಕಾರಕ್ಕೆ ಶರೀರ ಅಗತ್ಯ. ಧರ್ಮ, ಅರ್ಥ, ಕಾಮ, ಮೋಕ್ಷಗಳು ಶರೀರದಿಂದಲೇ ಸಾಧ್ಯ. ಶರೀರ ಉಳಿಯಲು ಆಹಾರ ಅಗತ್ಯ. ಹಾಗಾಗಿ ಜ್ಞಾನ, ಭಕ್ತಿ, ಮುಕ್ತಿ ಎಲ್ಲಕ್ಕೂ ಅನ್ನವೇ ಆಧಾರ. ಅದರಂತೆ ಈ ಅನ್ನದ ಪ್ರತಿಪಾದನೆ ಶತ ಶತಮಾನಗಳಿಂದಲೂ ತಿರುಗಲ್ ತಿಮ್ಮಪ್ಪ ಬೆಟ್ಟದಲ್ಲಿ ಆಚರಿಸಿಕೊಂಡು ಬರುತ್ತಿರುವುದು ವಿಶೇಷ.

**ಸಾಕು ಎನ್ನುವ ಸಂಪತ್ತು ಅನ್ನ:** "ಇಂದು ಆಹಾರ ಹಾಗೂ ಊಟದ ವ್ಯವಸ್ಥೆಯಲ್ಲಿ ಅನೇಕ ಲೋಪಗಳನ್ನು ಕಾಣುತ್ತೇವೆ. ನಾವು ಏನನ್ನು ತಿನ್ನುತ್ತೇವೆ, ಹೇಗೆ ತಿನ್ನುತ್ತೇವೆ ಎನ್ನುವುದು ನಮ್ಮ ಮೇಲೆ ಮಹತ್ತರ ಪರಿಣಾಮ ಬೀರುತ್ತದೆ. ನಮ್ಮ ಪ್ರಾಚೀನ ಆಚರಣೆಗಳ ವೈಜ್ಞಾನಿಕತೆಯನ್ನು ಸಮಾಜಕ್ಕೆ ತಿಳಿಸುವ ಗುರುತರವಾದ ಕೆಲಸವನ್ನು ಈ ಬಂಡೆಯೂಟದ ಪರಿಕಲ್ಪನೆಯಲ್ಲಿ ತಿರುಗಲ್ ತಿಮ್ಮಪ್ಪ ಬೆಟ್ಟ ಸಾಕ್ಷೀಕರಿಸುತ್ತಿದೆ. ಆಯುರ್ವೇದದ ಪ್ರಕಾರ ನೀರು-ತುಪ್ಪ-ಹಾಲು-ಅಕ್ಕಿ ಎಂಬ ನಾಲ್ಕು "ಜಾತಿ ಸಾತ್ಮ್ಯ" - ಎಲ್ಲರಿಗೂ ಹೊಂದುವ ಆಹಾರ. ಇವುಗಳಲ್ಲಿ ಪ್ರಾಣಿ ಹಿಂಸೆ ಇಲ್ಲ, ಕರ್ಮದೋಷ ಇಲ್ಲ. ಸಂಪತ್ತು ಎಷ್ಟೇ ಬಂದರೂ ಸಾಕು ಎನ್ನಲ್ಲ, ಆದರೆ ಅನ್ನ ಒಂದು ಹಂತದಲ್ಲಿ ಸಾಕು ಎನ್ನಬೇಕಾದರೂ, ಯಾವ ಸಂಪತ್ತೂ ಕೊಡದ ತೃಪ್ತಿಯನ್ನು ಅನ್ನವೇ ಕೊಡುತ್ತದೆ ಎನ್ನುವುದನ್ನು ಈ ಬಂಡೆಯೂಟ ಮೂಲ ಸಂದೇಶವನ್ನು ನೀಡುತ್ತಿದೆ.

**ತಿರುಗಲ್ ತಿಮ್ಮಪ್ಪ ನ ಅನ್ನ:** ಅನ್ನವನ್ನು ಬಹುತೇಕ ಬಾಳೆ ಎಲೆ, ಊಟದ ತಟ್ಟೆಗಳಲ್ಲಿ ಸೇವಿಸುವುದು ವಾಡಿಕೆ. ಆದರಿಲ್ಲಿ, ಬಂಡೆಗಲ್ಲುಗಳ ಮೇಲೆ ಅನ್ನ ಸೇವಿಸುತ್ತಿರುವುದು ವಿಶೇಷ. ಇಲ್ಲಿ ಅನ್ನದ ಮಹತ್ವ ಅಪಾರವಾಗಿದೆ ಎನ್ನುವುದನ್ನು ನಿರೂಪಿಸುತ್ತಿದೆ. ನಮ್ಮ ಸಂಸ್ಕೃತಿಯಲ್ಲಿ ಅನ್ನಕ್ಕೆ ದೇವರ ಸ್ಥಾನ ಇದೆ. "ಅನ್ನಂ ಬ್ರಹ್ಮ" ಅಂತಾರೆ. ಅನ್ನವೇ ಶಕ್ತಿ. ದೇಹಕ್ಕೆ ಬೇಕಾದ ಕಾರ್ಬೋ ಹೈಡ್ರೇಟ್, ಶಕ್ತಿ, ಚೈತನ್ಯ ಎಲ್ಲವೂ ಅನ್ನದಿಂದಲೇ ಬರುತ್ತದೆ. ಕರ್ನಾಟಕದಲ್ಲಿ ಅನ್ನಕ್ಕೆ ತುಂಬಾ ಗೌರವ. ಊಟಕ್ಕಿಂತ ಮೊದಲು ಕೈ ಮುಗಿಯುವುದು ವಾಡಿಕೆ. ಅನ್ನವನ್ನು ಕಾಲಿನಿಂದ ತುಳಿಯಬಾರದು, ಚೆಲ್ಲಬಾರದು ಎಂಬ ಸಂಸ್ಕಾರ ನಮ್ಮಲ್ಲಿದೆ.

ಅತಿಥಿಗೆ ಅನ್ನ ಹಾಕುವುದು ಪುಣ್ಯದ ಕೆಲಸವೆಂದು ಭಾವಿಸಿದ್ದು ಇದು ಸಾಮಾಜಿಕ ಬಂಧವನ್ನು ವೃದ್ಧಿಸುತ್ತದೆ. ಅನ್ನ ಹಂಚಿಕೊಂಡು ತಿನ್ನುವುದು ಪ್ರೀತಿ, ವಿಶ್ವಾಸದ ಸಂಕೇತ. "ಅನ್ನದ ಋಣ" ಎಂಬ ಮಾತೇ ಇದೆ - ಅನ್ನ ಕೊಟ್ಟವರನ್ನು ಮರೆಯಬಾರದು ಎಂದು ಹೇಳುತ್ತಾರೆ. ಒಂದು ಕಾಳು ಅನ್ನದ ಹಿಂದೆ ರೈತನ ತಿಂಗಳುಗಟ್ಟಲೆ ಬೆವರು ಇದೆ. ಅದಕ್ಕೆ ಅನ್ನವನ್ನು ವ್ಯರ್ಥ ಮಾಡಬಾರದು ಎಂದು ಹಿರಿಯರು ಹೇಳುತ್ತಾರೆ. ಹೀಗಾಗಿ, ತಿರುಗಲ್ ತಿಮ್ಮಪ್ಪನ ಬೆಟ್ಟದಲ್ಲಿ ಅನ್ನಕ್ಕೆ ಬಹಳ ಮಹತ್ವ ನೀಡಲಾಗುತ್ತಿದೆ.

**ಅನ್ನದಿಂದ ಜೀವ ಸೃಷ್ಟಿ:** ಅನ್ನ ಕೇವಲ ಹೊಟ್ಟೆ ತುಂಬುವ ವಸ್ತು ಅಲ್ಲ, ಅದು ಬ್ರಹ್ಮವೇ ಆಗಿದೆ. ಭಾರತೀಯ ದರ್ಶನದಲ್ಲಿ ಇದು ಋಜುವಾತಾಗಿದೆ. ತೈತ್ತಿರೀಯ ಉಪನಿಷತ್ ನಲ್ಲಿ 'ಅನ್ನಂ ಬ್ರಹ್ಮೇತಿ ವ್ಯಜಾನಾತ್' - ಅನ್ನವೇ ಬ್ರಹ್ಮ ಎಂದು ತಿಳಿಸಿದೆ. ಎಲ್ಲ ಜೀವಿಗಳು ಅನ್ನದಿಂದಲೇ ಹುಟ್ಟಿ, ಅನ್ನದಿಂದಲೇ ಬದುಕಿ, ಅಂತ್ಯದಲ್ಲಿ ಅನ್ನದಲ್ಲೇ ಲೀನವಾಗುತ್ತವೆ. ಭಗವದ್ಗೀತೆಯೂ ಸಹಿತ 'ಅನ್ನಾದ್ ಭವಂತಿ ಭೂತಾನಿ' - ಅನ್ನದಿಂದಲೇ ಎಲ್ಲಾ ಪ್ರಾಣಿಗಳು ಹುಟ್ಟುತ್ತವೆ ಎಂದು ಸಾರಿದೆ.

ಮಳೆ, ಯಜ್ಞ, ಕರ್ಮಗಳ ಚಕ್ರ ಅನ್ನದಿಂದಲೇ ಶುರುವಾಗುತ್ತದೆ. ಅನ್ನವೇ ಸೃಷ್ಟಿಯ ಮೂಲವೆಂದು ಇಡೀ ಜಗತ್ತೇ ನಂಬಿದೆ. 'ಅನ್ನ ದಾಸೋಹವೇ ಮಹಾ ದಾಸೋಹ' - ಅನ್ನದಾನಕ್ಕಿಂತ ದೊಡ್ಡ ಸೇವೆ ಇನ್ನೊಂದಿಲ್ಲ. ಅನ್ನ ಹಾಕಿದವನೇ ಶಿವನೆಂದು ಬಸವಣ್ಣ ಹೇಳಿದ್ದಾರೆ. "ದೇವರು ಬಡವರಿಗೆ ಅನ್ನದ ರೂಪದಲ್ಲಿ ಕಾಣಿಸಿಕೊಳ್ಳುತ್ತಾನೆ" ಎಂದು ಗಾಂಧೀಜಿ ಹೇಳಿದ್ದಾರೆ. ಹಸಿದವನಿಗೆ ತತ್ವಜ್ಞಾನ ಅರ್ಥವಾಗಲ್ಲ, ಮೊದಲು ಅನ್ನ ಬೇಕು ಎಂದು ಪಾಶ್ಚಿಮಾತ್ಯ ದಾರ್ಶನಿಕರಾದ ಫಾಯರ್‌ಬಾಕ್ ಹೇಳಿದ್ದಾರೆ. "ನೀನು ಯಾವ ಜಾಗದಲ್ಲಿ ಏನು ತಿನ್ನುತ್ತೀಯೋ, ನೀನು ಅದೇ ಆಗುತ್ತೀಯ." ನಿನ್ನ ಆಲೋಚನೆ, ನಿನ್ನ ನೈತಿಕತೆ ನಿನ್ನ ಅನ್ನದ ಮೇಲೆ ನಿಂತಿದೆ ಎಂದು ಸಾಕ್ರಟೀಸ್ ಹೇಳಿದ್ದಾರೆ.




ಮನುಷ್ಯ ಬದುಕಬೇಕು ತಿನ್ನಲು ಅಲ್ಲ, ತಿನ್ನಬೇಕು ಬದುಕಲು. ಅನ್ನದ ಆಸೆ ಮಿತಿ ಮೀರಿದರೆ ಮನುಷ್ಯ ಗುಲಾಮನಾಗುತ್ತಾನೆ ಎಂದು ಅನೇಕ ದಾರ್ಶನಿಕರು ಹೇಳಿದ್ದಾರೆ.

ಸ್ಥೂಲ ಅನ್ನ: ದೇಹಕ್ಕೆ ಶಕ್ತಿಸೂಕ್ಷ್ಮ ಅನ್ನ: ಮನಸ್ಸಿಗೆ ಶುದ್ಧಿ - ಸಾತ್ವಿಕ ಅನ್ನದಿಂದ ಸಾತ್ವಿಕ ಆಲೋಚನೆ ಕಾರಣ ಅನ್ನ: ಆತ್ಮಕ್ಕೆ ತೃಪ್ತಿ - ಇನ್ನೊಬ್ಬರ ಹಸಿವು ನೀಗಿಸಿದಾಗ ಸಿಗುವ ತೃಪ್ತಿ ಅದಕ್ಕೆ ಊಟಕ್ಕೆ ಮುಂಚೆ 'ಅನ್ನದಾತಾ ಸುಖೀಭವ ಅನ್ನುತ್ತಾರೆ' ಅನ್ನವನ್ನು ಎಸೆಯಬಾರದು ಎನ್ನುವುದು ನಮ್ಮ ಸಂಸ್ಕೃತಿ.

ಬಂಡೆಕಲ್ಲಿನ ಮೇಲಿನ ಊಟದ ಅನುಭವ ಸಂತೋಷ ತಂದಿದೆ. "ರೈತರ ಸಹಕಾರ ಮತ್ತು ಪ್ರೋತ್ಸಾಹದಿಂದ ನಮಗೆ ಇಂತಹ ಸಂತೃಪ್ತಿಯ ಗಂಗಾವತಿ ಕೃಷಿ ವಿಶ್ವವಿದ್ಯಾಲಯದ ಶಿಬಿರದ ಮೂಲಕ ರೈತರು, ವಿದ್ಯಾರ್ಥಿಗಳು ಹಾಗೂ ಪಾಲಕರು ಒಟ್ಟಾಗಿ ಭಾಗವಹಿಸಿದ ಈ ಕ್ಷೇತ್ರದ ಭೇಟಿಯು ಭಕ್ತಿ, ಸ್ನೇಹ, ಪ್ರಕೃತಿ ಸೌಂದರ್ಯ ಹಾಗೂ ಹೊಸ ಅನುಭವಗಳಿಂದ ಕೂಡಿದ ಸ್ಮರಣೀಯ ದಿನವಾಗಿ ಪರಿಣಮಿಸಿದೆ.

"ನಾನು ವೀರಯೋಧ. ಜಮ್ಮು-ಕಾಶ್ಮೀರದಲ್ಲಿ ಸೈನಿಕನಾಗಿ ಸೇವೆ ಸಲ್ಲಿಸಿದ್ದೇನೆ. ದೇಶದ ವಿವಿಧೆಡೆ ಮತ್ತು ಕೆಲ ವಿದೇಶಗಳಲ್ಲಿ ಸಂಚರಿಸಿದ್ದೇನೆ. ಎಲ್ಲೆಡೆ ಪ್ರವಾಸ ಮಾಡಿದ್ದರೂ ಈ ರೀತಿ ಬಂಡೆಕಲ್ಲಿನ ಮೇಲೆ ಊಟ ಮಾಡುವ ಪದ್ಧತಿ ನೋಡಿರಲಿಲ್ಲ. ಕೆರೆಹಳ್ಳಿ ಬಳಿಯ ತಿಮ್ಮಪ್ಪನ ಬೆಟ್ಟ ಹತ್ತಿದಾಗ ನನಗೆ ಜಮ್ಮು-ಕಾಶ್ಮೀರದ ಸ್ಮರಣೆ ಆಯಿತು. ನಾನು ಬಂಡೆಕಲ್ಲಿನ ಮೇಲೆ ಊಟ ಮಾಡುತ್ತಿರುವುದು ಇದೇ ಮೊದಲು. ಊಟದ ರುಚಿಯೂ ಅದ್ಭುತವಾಗಿತ್ತು. ಇಲ್ಲಿಗೆ ಬಂದಿದ್ದು ತುಂಬಾ ಸಂತೋಷವಾಗಿದೆ."



- ಅಲ್ಲಾಬಕ್ಷಿ ನದಾಫ್,
ಮಾಜಿ ಸೈನಿಕರು, ಪ್ರಸ್ತುತ ಪೊಲೀಸ್ ಇಲಾಖೆ ನೌಕರರು. ಲಕ್ಷ್ಮೇಶ್ವರ.

"ನನ್ನ ಮಗಳನ್ನು ಭೇಟಿಯಾಗಲು ಬಂದಿದ್ದೆವು. ಇಲ್ಲಿ ಜಾತ್ರೆ ನಡೆಯುತ್ತಿರುವ ವಿಷಯ ತಿಳಿದು ಭಾಗಿಯಾಗಿದ್ದು ಸಂತೋಷ ತಂದಿದೆ. ಇಂದು ನನ್ನ ಹುಟ್ಟುಹಬ್ಬವೂ ಆಗಿದ್ದು, ಇಂತಹ ಸುಂದರ ಸ್ಥಳದಲ್ಲಿ ಬಂಡೆಕಲ್ಲಿನ ಮೇಲಿನ ಊಟ ಸಿಕ್ಕಿರುವುದು ನನ್ನ ಪುಣ್ಯ. ನನ್ನ ಯಜಮಾನರು ಮತ್ತು ಪುತ್ರ ಶನಿವಾರದಂದೇ ಜನಿಸಿದ್ದಾರೆ. ನಮ್ಮ ಮನೆಯಲ್ಲಿ ಆಂಜನೇಯನನ್ನು ಪೂಜಿಸುತ್ತೇವೆ."



- ಶೈರಾ ನದಾಫ್,
ಮಾಜಿ ಸೈನಿಕ ಅಲ್ಲಾಬಕ್ಷಿ ಅವರ ಪತ್ನಿ.

"ನಾವು ಕೃಷಿ ಮಹಾವಿದ್ಯಾಲಯದ ವಿದ್ಯಾರ್ಥಿಗಳು. ಇಲ್ಲಿನ ರೈತರ ಕರೆಯ ಮೇರೆಗೆ ಆಗಮಿಸಿದ್ದ ನಮಗೆ ಉತ್ತಮ ಅನುಭೂತಿ ಪಡೆಯಲು ಸಾಧ್ಯವಾಯಿತು. ನಮ್ಮ ಪಾಲಕರೊಂದಿಗೆ ಈ ಅನುಭವವನ್ನು ಹಂಚಿಕೊಂಡಿದ್ದು ಇನ್ನಷ್ಟು ಸಂತೋಷದ ಸಂಗತಿಯಾಗಿದೆ."



- ರೀದಾ ನದಾಫ್,
ವಿದ್ಯಾರ್ಥಿನಿ, ಗಂಗಾವತಿ ಕೃಷಿ ವಿಶ್ವವಿದ್ಯಾಲಯ.

"ನಾವು ಕೃಷಿ ಮಹಾವಿದ್ಯಾಲಯದ ಅಂತಿಮ ವರ್ಷದ ವಿದ್ಯಾರ್ಥಿಗಳು. ರೈತರ ಸಹಕಾರದಿಂದ ಇಂದು ನಮಗೆ ಹೊಸ ಹಾಗೂ ವಿಶೇಷ ಅನುಭವ ದೊರೆತಿದೆ. ಇಲ್ಲಿಗೆ ಬಂದು ತುಂಬಾ ಸಂತೋಷವಾಗಿದೆ. ಈ ಸುಂದರ ನೆನಪುಗಳು ನಮ್ಮ ಜೀವನದುದ್ದಕ್ಕೂ ಉಳಿಯುತ್ತವೆ. ದೇವರ ದರ್ಶನದ ನಂತರ ಬಂಡೆ ಕಲ್ಲುಗಳ ಮೇಲಿನ ಊಟ ನಮ್ಮೆಲ್ಲರಿಗೂ ಹೊಸ ಹಾಗೂ ವಿಶೇಷ ಅನುಭವವನ್ನು ನೀಡಿತು. ಪ್ರಕೃತಿಯ ಸುಂದರ ವಾತಾವರಣದಲ್ಲಿ ಎಲ್ಲರೂ ಒಟ್ಟಾಗಿ ಊಟ ಮಾಡಿದ್ದು, ಈ ದಿನವನ್ನು ಮತ್ತಷ್ಟು ಸ್ಮರಣೀಯವಾಗಿಸಿತು.



-ವಾಣಿಶ್ರೀ, ವಿದ್ಯಾರ್ಥಿನಿ.
ಕೃಷಿ ವಿಶ್ವವಿದ್ಯಾಲಯ.
ಗಂಗಾವತಿ.

## 'ನೈಸ್ ದೇಶದ ಅತಿದೊಡ್ಡ ವಂಚನೆ'

1ನೇ ಪುಟದಿಂದ

ಸದನ ಸಮಿತಿ ವರದಿ ಪ್ರಸ್ತಾಪ

ನೈಸ್ ಯೋಜನೆಗೆ ಸಂಬಂಧಿಸಿದ ಅಕ್ರಮಗಳ ಕುರಿತು ಟಿ.ಬಿ. ಜಯಚಂದ್ರ ನೇತೃತ್ವದಲ್ಲಿ ರಚಿಸಲಾಗಿದ್ದ ಜಂಟಿ ಸದನ ಸಮಿತಿಯ ವರದಿಯ ಬಗ್ಗೆಯೂ ದೇವೇಗೌಡರು ಸರ್ಕಾರವನ್ನು ಪ್ರಶ್ನಿಸಿದರು. ಸಮಿತಿಯ ಶಿಫಾರಸುಗಳ ಕುರಿತು ಸರ್ಕಾರ ಏಕೆ ಚರ್ಚಿಸುತ್ತಿಲ್ಲ ಎಂದು ಅವರು ಕೇಳಿದರು.

“ಈಗಷ್ಟೇ ಮುಖ್ಯಮಂತ್ರಿಗೆ ಪತ್ರ ಬರೆದಿದ್ದೇನೆ. ಅವರು ಉತ್ತರ ನೀಡಲಿ. ಬಳಿಕ ಈ ವಿಷಯದ ಕುರಿತು ಮತ್ತಷ್ಟು ಸುದೀರ್ಘವಾಗಿ ಮಾತನಾಡುತ್ತೇನೆ” ಎಂದು ದೇವೇಗೌಡರು ಹೇಳಿದರು.

ನೈಸ್ ಯೋಜನೆಗೆ ಸಂಬಂಧಿಸಿದ ಅಕ್ರಮಗಳ ಕುರಿತು ನ್ಯಾಯಾಲಯಗಳು ಹಾಗೂ ಸದನ ಸಮಿತಿ ವ್ಯಕ್ತಪಡಿಸಿರುವ ಅಭಿಪ್ರಾಯಗಳು ಸರ್ಕಾರಕ್ಕೆ ತಿಳಿದಿದ್ದರೂ ಟೋಲ್ ಸಂಗ್ರಹಕ್ಕೆ ಹೇಗೆ ಅವಕಾಶ ನೀಡಲಾಗುತ್ತಿದೆ ಎಂದು ಅವರು ಪ್ರಶ್ನಿಸಿದರು.

**'ರಾಜಿ ಪ್ರಶ್ನೆಯೇ ಇಲ್ಲ'**

ನೈಸ್ ವಿಚಾರದಲ್ಲಿ ಯಾವುದೇ ರಾಜಿ ಮಾಡಿಕೊಳ್ಳುವ ಪ್ರಶ್ನೆಯೇ ಇಲ್ಲ. ಭೂಮಿ ಕಳೆದುಕೊಂಡ ರೈತರಿಗೆ ಅನ್ಯಾಯವಾಗಲು ಬಿಡುವುದಿಲ್ಲ. ಈ ವಿಚಾರದಲ್ಲಿ ಹೋರಾಟ ಮುಂದುವರಿಸಲಾಗುವುದು ಎಂದು ದೇವೇಗೌಡರು ಸ್ಪಷ್ಟಪಡಿಸಿದರು. ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಕೂಡ ಶೀಘ್ರದಲ್ಲೇ ಈ ಕುರಿತು ಮಾತನಾಡಲಿದ್ದಾರೆ ಎಂದರು.

ಕುಮಾರಸ್ವಾಮಿ ಅವರು ನೈಸ್ ವಿಚಾರದಲ್ಲಿ ದಾಖಲೆಗಳ ಆಧಾರದಲ್ಲೇ ಮಾತನಾಡುತ್ತಾರೆ. ನನ್ನ ಬಳಿಯೂ ಹಲವು ದಾಖಲೆಗಳಿವೆ.

ಯಾರು ಯಾರ ಹೆಸರಿನಲ್ಲಿ ಜಮೀನು ಬರೆಸಿಕೊಂಡಿದ್ದಾರೆ ಎಂಬುದಕ್ಕೆ ಸಂಬಂಧಿಸಿದ ದಾಖಲೆಗಳು ನನ್ನ ಬಳಿ ಇವೆ ಎಂದು ದೇವೇಗೌಡರು ಹೇಳಿದರು.

## 'ಬೇಕಿದ್ದರೆ ಕೋರ್ಟ್‌ಗೆ ಹೋಗಲಿ, ಹೋರಾಟ ಮಾಡಲಿ'

1ನೇ ಪುಟದಿಂದ

ಅಂತಹ ರೈತರ ರಕ್ಷಣೆಗೆ ಸರ್ಕಾರ ಕ್ರಮ ಕೈಗೊಳ್ಳಲಿದೆ ಎಂದು ತಿಳಿಸಿದರು.

“ನನಗೂ ಪ್ರಜ್ಞೆ ಇದೆ. ಮನುಷ್ಯ ವಿದ್ಯಾವಂತನಾಗಿರದಿದ್ದರೂ ಬುದ್ಧಿವಂತನಾಗಿರಬೇಕು, ಸಾಮಾನ್ಯ ಪ್ರಜ್ಞೆ ಹೊಂದಿರಬೇಕು” ಎಂದು ಅವರು ದೇವೇಗೌಡರ ಆರೋಪಗಳಿಗೆ ತಿರುಗೇಟು ನೀಡಿದರು.

ರಾಜ್ಯದಲ್ಲಿ ಹಲವು ಭಾಗಗಳಲ್ಲಿ ಭೀಕರ ಬರ ಪರಿಸ್ಥಿತಿ ನಿರ್ಮಾಣವಾಗಿದ್ದು, ವೈಜ್ಞಾನಿಕ ಹಾಗೂ ತಾಂತ್ರಿಕ ವರದಿಗಳ ಆಧಾರದ ಮೇಲೆ ಹಂತ ಹಂತವಾಗಿ ಮತ್ತಷ್ಟು ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗುವುದು ಎಂದು ಮುಖ್ಯಮಂತ್ರಿ ತಿಳಿಸಿದರು.

21 ದಿನಗಳ ಕಾಲ ಮಳೆಯಾಗದ ಪ್ರದೇಶಗಳನ್ನು ಗುರುತಿಸಿ, ತಾಂತ್ರಿಕ ವರದಿ ಆಧರಿಸಿ ಬರ ಘೋಷಣೆ ಕುರಿತು ನಿರ್ಧಾರ ಕೈಗೊಳ್ಳಲಾಗುವುದು.

ಈ ಸಂಬಂಧ ಉಪಮುಖ್ಯಮಂತ್ರಿ ವರದಿಗಳನ್ನು ತರಿಸಿಕೊಳ್ಳುತ್ತಿದ್ದಾರೆ ಎಂದು ಹೇಳಿದರು.

ಬರ ಪರಿಸ್ಥಿತಿ ಹಾಗೂ ರೈತರ ಸಮಸ್ಯೆಗಳ ಕುರಿತು ಚರ್ಚಿಸಲು ವಿಶೇಷ ವಿಧಾನಸಭೆ ಅಧಿವೇಶನ ಕರೆಯಲಾಗಿದೆ.

ಬರಪೀಡಿತ ಪ್ರದೇಶಗಳ ವಾಸ್ತವ ಸ್ಥಿತಿಯನ್ನು ವೈಜ್ಞಾನಿಕವಾಗಿ ಪರಿಶೀಲಿಸಿ, ರೈತರಿಗೆ ಅಗತ್ಯ ನೆರವು ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳಲಿದೆ ಎಂದು ಶಿವಕುಮಾರ್ ಹೇಳಿದರು.

ಶಾಸಕರು ಆತಂಕಪಡುವ ಅಗತ್ಯವಿಲ್ಲ. ಎಲ್ಲೆಲ್ಲಿ ಬರ ಪರಿಸ್ಥಿತಿ ಇದೆ ಎಂಬುದನ್ನು ವೈಜ್ಞಾನಿಕವಾಗಿ ನಿರ್ಧರಿಸಿ, ಹಂತ ಹಂತವಾಗಿ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ತಿಳಿಸಿದರು.



ಡಿವೈಡರ್‌ಗೆ ಕಾರು ಡಿಕ್ಕಿ ಹೊಡೆದು ನಾಲ್ವರು ಮೃತಪಟ್ಟಿರುವ ಘಟನೆ ಚೆನ್ನೈ ಎಕ್ಸ್‌ಪ್ರೆಸ್ ಕಾರಿಡಾರ್ ಬಳ ಜರುಗಿದೆ. ಬೆಳಗ್ಗೆ ತಿರುಪತಿಯಿಂದ ಬೆಂಗಳೂರಿಗೆ ವಾಪಸ್ ಆಗುವ ವೇಳೆಗೆ ಅತಿವೇಗದಿಂದ ಬಂದ ಇನೋವ ಕಾರು ಡಿವೈಡರ್ ಗೆ ಡಿಕ್ಕಿ ಹೊಡೆದು ಪಲ್ಟಿ ಹೊಟೆದಿದೆ. ಇದರಿಂದ ಸ್ಥಳದಲ್ಲೇ ಇಬ್ಬರು ಮೃತ ಪಟ್ಟಿದ್ದು, ಮತ್ತಿಬ್ಬರು ಆಸ್ಪತ್ರೆಗೆ ಸಾಗಿಸುವ ವೇಳೆ ಮರಣಹೊಂದಿದ್ದಾರೆ. ಕೆಜಿಎಫ್ ತಾಲೂಕಿನ ದೊಡ್ಡಕಾರಿ ಗ್ರಾಮದ ಬಳ ಘಟನೆ ನಡೆದಿದ್ದು, ಮೃತರನ್ನು ದೇವೇಂದ್ರ ಕುಮಾರ್ 40 ವರ್ಷ, ವಿಷ್ಣು 15 ವರ್ಷ, ದೀಕ್ಷಿತ್ 20 ವರ್ಷ ಹಾಗೂ ಶಾರದಬಾಯಿ 70 ಎಂದು ತಿಳದು ಬಂದಿದೆ. ಎಲ್ಲರೂ ಬೆಂಗಳೂರು ಮೂಲದವರಾಗಿದ್ದಾರೆ. ಈ ಬಗ್ಗೆ ಬೇತಮಂಗಲ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಬರ ಘೋಷಣೆಗೆ ಆಗ್ರಹಿಸಿ ಸವಣೂರಿನಲ್ಲಿ ಭಜನೆ ಪ್ರತಿಭಟನೆ

● ವಿಕ್ರಮ ವಾಹಿನಿ । ಹಾವೇರಿ

ಸವಣೂರು ತಾಲೂಕನ್ನು ಬರಪೀಡಿತ ಪ್ರದೇಶವೆಂದು ಘೋಷಿಸಿ ರೈತರಿಗೆ ಸೂಕ್ತ ಪರಿಹಾರ ಒದಗಿಸುವಂತೆ ಆಗ್ರಹಿಸಿ ಬಿಜೆಪಿ ಕಾರ್ಯಕರ್ತರು ಹಾಗೂ ರೈತರು ತಹಸೀಲ್ದಾರ್ ಕಚೇರಿ ಎದುರು ಭಜನೆ ಮಾಡುವ ಮೂಲಕ ಪ್ರತಿಭಟನೆ ನಡೆಸಿದರು.

ಹಾವೇರಿ ಜಿಲ್ಲೆಯಲ್ಲಿ ಈ ಬಾರಿ ನಿರೀಕ್ಷಿತ ಪ್ರಮಾಣದಲ್ಲಿ ಮಳೆಯಾಗದ ಪರಿಣಾಮ ಕೃಷಿ ಚಟುವಟಿಕೆಗಳು ತೀವ್ರವಾಗಿ ಹಿನ್ನಡೆ ಕಂಡಿವೆ. ಸವಣೂರು ತಾಲೂಕಿನ ಹಲವು ಗ್ರಾಮಗಳಲ್ಲಿ ರೈತರು ಈಗಾಗಲೇ ಎರಡು ಬಾರಿ ಬಿತ್ತನೆ ಕೈಗೊಂಡಿದ್ದರೂ, ಮಳೆ ಕೈಕೊಟ್ಟಿರುವುದರಿಂದ ನಿರೀಕ್ಷಿತ ಪ್ರಮಾಣದಲ್ಲಿ ಬೆಳೆ ಬಂದಿಲ್ಲ. ಪರಿಣಾಮ ಬಿತ್ತನೆಗೆ ಮಾಡಿದ ಖರ್ಚು ಕೂಡ ವಾಪಸ್ ಬಾರದ ಸ್ಥಿತಿ ನಿರ್ಮಾಣವಾಗಿದ್ದು, ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಪ್ರತಿಭಟನಾಕಾರರು ಹೇಳಿದರು.

ಸರ್ಕಾರ ಜಿಲ್ಲೆಯ ಕೆಲವೇ ತಾಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಿಸಿರುವುದು ಸಮರ್ಪಕವಲ್ಲ. ಮಳೆ ಕೊರತೆಯಿಂದ ತೀವ್ರ ಸಂಕಷ್ಟ ಎದುರಿಸುತ್ತಿರುವ ಸವಣೂರು ತಾಲೂಕನ್ನು ಬರ ಪಟ್ಟಿಯಿಂದ ಹೊರಗಿಟ್ಟಿರುವುದು ರೈತರಿಗೆ ಅನ್ಯಾಯವಾಗಿದೆ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು. ಸರ್ಕಾರ ರೈತರ ಸಮಸ್ಯೆಗಳನ್ನು ಗಂಭೀರವಾಗಿ ಪರಿಗಣಿಸದೆ ಕೇವಲ ಕೆಲ ತಾಲೂಕುಗಳನ್ನು ಬರಪೀಡಿತವೆಂದು ಘೋಷಿಸಿ ಕೈತೊಳೆದುಕೊಂಡಿದೆ ಎಂದು ಆರೋಪಿಸಿದರು.

ಬರಪೀಡಿತ ತಾಲೂಕುಗಳ ಎರಡನೇ ಪಟ್ಟಿಯನ್ನು ಪ್ರಕಟಿಸುವ ಸಂದರ್ಭದಲ್ಲಿ ಹಾವೇರಿ ಜಿಲ್ಲೆಯ ಎಲ್ಲ ತಾಲೂಕುಗಳನ್ನೂ ಸೇರ್ಪಡೆಗೊಳಿಸಬೇಕು.

ಸವಣೂರು ತಾಲೂಕಿನ ಬರಪೀಡಿತ ಗ್ರಾಮಗಳನ್ನು ಗುರುತಿಸಿ ರೈತರಿಗೆ ಬೆಳೆ ನಷ್ಟ ಪರಿಹಾರ ಸೇರಿದಂತೆ ಅಗತ್ಯ ನೆರವು ನೀಡಬೇಕು ಎಂದು ಒತ್ತಾಯಿಸಿದರು.

ನಂತರ ಪ್ರತಿಭಟನಾಕಾರರು ತಹಸೀಲ್ದಾರ್ ಮೂಲಕ ಮುಖ್ಯಮಂತ್ರಿ ಅವರಿಗೆ ಮನವಿ ಸಲ್ಲಿಸಿ, ಮಳೆ ಕೊರತೆ, ಬೆಳೆ ನಷ್ಟ ಹಾಗೂ ರೈತರ ಆರ್ಥಿಕ ಸಂಕಷ್ಟದ ಕುರಿತು ಸರ್ಕಾರದ ಗಮನ ಸೆಳೆದರು.

ಕೂಡಲೇ ಸಮೀಕ್ಷೆ ನಡೆಸಿ ವಾಸ್ತವ ಪರಿಸ್ಥಿತಿಯ ಆಧಾರದ ಮೇಲೆ ಸವಣೂರು ತಾಲೂಕನ್ನು ಬರಪೀಡಿತ ಪ್ರದೇಶವೆಂದು ಘೋಷಿಸಿ ಪರಿಹಾರ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

# ಇನ್ನುಂದೆ 25 ದಿನಕ್ಕೊಮ್ಮೆ ಎಲ್‌ಪಿಜಿ ಸಿಲಿಂಡರ್

● ವಿಕ್ರಮ ವಾಹಿನಿ । ನವದೆಹಲಿ

ಎಲ್‌ಪಿಜಿ ಸಿಲಿಂಡರ್ ರಿಫಿಲ್ ಬುಕ್ಕಿಂಗ್‌ಗೆ ಇದ್ದ ಅವಧಿಯನ್ನು ಕೇಂದ್ರ ಸರ್ಕಾರ ಪರಿಷ್ಕರಿಸಿದ್ದು, ಇನ್ನುಂದೆ ನಗರ ಹಾಗೂ ಗ್ರಾಮೀಣ ಪ್ರದೇಶಗಳ ಎಲ್ಲಾ ಗೃಹಬಳಕೆ ಗ್ರಾಹಕರು 25 ದಿನಕ್ಕೊಮ್ಮೆ ಸಿಲಿಂಡರ್ ಬುಕ್ ಮಾಡಬಹುದಾಗಿದೆ.

ಗ್ರಾಮೀಣ ಪ್ರದೇಶಗಳಲ್ಲಿ ಈ ಹಿಂದೆ 45 ದಿನಗಳಿಗೊಮ್ಮೆ ರಿಫಿಲ್ ಬುಕ್ ಮಾಡಲು ಅವಕಾಶವಿತ್ತು. ಇದೀಗ ಈ ಅವಧಿಯನ್ನು 25 ದಿನಗಳಿಗೆ ಇಳಿಸಲಾಗಿದ್ದು, ಪರಿಷ್ಕೃತ ನಿಯಮ ತಕ್ಷಣದಿಂದಲೇ ಜಾರಿಗೆ ಬರಲಿದೆ ಎಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಖಾತೆ ರಾಜ್ಯ ಸಚಿವ ಸುರೇಶ್ ಗೋಪಿ ಸೋಮವಾರ ತಿಳಿಸಿದ್ದಾರೆ.

ಮಧ್ಯಪ್ರಾಚ್ಯ ಸಂಘರ್ಷದ ಹಿನ್ನೆಲೆಯಲ್ಲಿ ಎಲ್‌ಪಿಜಿ ಪೂರೈಕೆಯಲ್ಲಿ ಉಂಟಾಗಿದ್ದ ಒತ್ತಡದಿಂದಾಗಿ ರಿಫಿಲ್ ಬುಕ್ಕಿಂಗ್ ಅವಧಿಯಲ್ಲಿ ನಿರ್ಬಂಧ ಹೇರಲಾಗಿತ್ತು.

ಆದರೆ, ಸದ್ಯ ಪೂರೈಕೆ ಪರಿಸ್ಥಿತಿ ಸುಧಾರಿಸಿದ್ದು, ಬಾಕಿ ಉಳಿದಿರುವ ರಿಫಿಲ್ ಬೇಡಿಕೆಯೂ ಗಣನೀಯವಾಗಿ ಇಳಿಕೆಯಾಗಿದೆ. ಈ ಹಿನ್ನೆಲೆಯಲ್ಲಿ ನಿರ್ಬಂಧ ಸಡಿಲಿಸಲಾಗಿದೆ ಎಂದು ಸಚಿವರು ವಿವರಿಸಿದ್ದಾರೆ.

ಇದರಿಂದ ಗ್ರಾಮೀಣ ಪ್ರದೇಶಗಳಲ್ಲಿ ಸಿಲಿಂಡರ್ ಬಳಕೆ ಹೆಚ್ಚಿರುವ ಕುಟುಂಬಗಳಿಗೆ ಹೆಚ್ಚಿನ ಅನುಕೂಲವಾಗಲಿದೆ. ವಿಶೇಷವಾಗಿ ಮಾಸಿಕ ಬಳಕೆ ಆಧರಿಸಿ ಸಿಲಿಂಡರ್ ಅಗತ್ಯವಿರುವ ಗ್ರಾಹಕರು ಇನ್ನು ಮುಂದೆ ಹೆಚ್ಚು ದಿನ ಕಾಯಬೇಕಾದ ಅನಿವಾರ್ಯತೆ ಇರುವುದಿಲ್ಲ.

ಎಲ್‌ಪಿಜಿ ಪೂರೈಕೆಯಲ್ಲಿ ಸುಧಾರಣೆ ಕಂಡಿರುವ ಹಿನ್ನೆಲೆಯಲ್ಲಿ ದೇಶಾದ್ಯಂತ ಗ್ರಾಹಕರಿಗೆ ಹೆಚ್ಚಿನ ಅನುಕೂಲ ಕಲ್ಪಿಸುವ ಉದ್ದೇಶದಿಂದ ಈ ನಿರ್ಧಾರ ಕೈಗೊಳ್ಳಲಾಗಿದೆ. ಪರಿಷ್ಕೃತ ಅವಧಿಯಂತೆ ತೈಲ ಮಾರುಕಟ್ಟೆ ಕಂಪನಿಗಳು ರಿಫಿಲ್ ಬುಕ್ಕಿಂಗ್ ವ್ಯವಸ್ಥೆ ಕಲ್ಪಿಸುವಂತೆ ಕೇಂದ್ರ ಸರ್ಕಾರ ಸೂಚಿಸಿದೆ.

# ತುಮಕೂರಿನಲ್ಲಿ ಈ ಬಾರಿ ಅದ್ದೂರಿ ದಸರಾ

● ವಿಕ್ರಮ ವಾಹಿನಿ । ತುಮಕೂರು

ಕಳೆದ ಬಾರಿಗಿಂತಲೂ ಈ ಬಾರಿ ತುಮಕೂರು ದಸರಾ ಉತ್ಸವವನ್ನು ಇನ್ನಷ್ಟು ವೈಭವದಿಂದ ಆಚರಿಸಲು ನಿರ್ಧರಿಸಲಾಗಿದೆ ಎಂದು ಉಪಮುಖ್ಯಮಂತ್ರಿ ಜಿ. ಪರಮೇಶ್ವರ್ ತಿಳಿಸಿದ್ದಾರೆ.

ದಸರಾ ಪೂರ್ವಭಾವಿ ಸಭೆಯ ಬಳಿಕ ಮಾತನಾಡಿದ ಅವರು, ಮೈಸೂರು ದಸರಾ ಮಾದರಿಯಲ್ಲಿ ಒಂಬತ್ತು ದಿನಗಳ ಕಾಲ ನಾಡಹಬ್ಬವನ್ನು ಆಚರಿಸಲಾಗುವುದು. ದುರ್ಗಾ ಪೂಜೆ, ಹೋಮ-ಹವನ ಹಾಗೂ ಪ್ರತಿದಿನ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು. ಕಳೆದ ಬಾರಿ 5,343 ಸ್ಥಳೀಯ ಕಲಾವಿದರಿಗೆ ಅವಕಾಶ ನೀಡಲಾಗಿದ್ದು, ಈ ಬಾರಿಯೂ ಅದನ್ನು ಮುಂದುವರಿಸಲಾಗುವುದು ಎಂದರು.



ಸೆ.15ರಂದು ತುಮಕೂರು ದಸರಾ ಲಾಂಛನ ಬಿಡುಗಡೆ ಮಾಡುವ ಮೂಲಕ ಕಾರ್ಯಕ್ರಮಗಳ ವಿವರ ಪ್ರಕಟಿಸಲಾಗುವುದು. ಅ.11ರಂದು ಧ್ವಜಾರೋಹಣದೊಂದಿಗೆ ದಸರಾ ಉತ್ಸವಕ್ಕೆ ಚಾಲನೆ ನೀಡಲಾಗುತ್ತದೆ. ಅ.21ರಂದು ಆನೆಯ ಮೇಲೆ ಅಂಬಾರಿ ಮೆರವಣಿಗೆ ನಡೆಯಲಿದೆ.

ಈ ಬಾರಿ ದೀಪಾಲಂಕಾರ ಹಾಗೂ ಫಲಪುಷ್ಪ ಪ್ರದರ್ಶನವನ್ನು ಮತ್ತಷ್ಟು ವೈಭವಯುತವಾಗಿ ಆಯೋಜಿಸಲು ನಿರ್ಧರಿಸಲಾಗಿದೆ. ಹೊಸ ಪ್ರದರ್ಶನಗಳ ಜತೆಗೆ ಎಸ್.ಎಸ್. ವೃತ್ತದಲ್ಲಿ ನ್ಯೂಯಾರ್ಕ್ ಮಾದರಿಯ 'ತುಮಕೂರು ಸ್ಕ್ವೇರ್' ನಿರ್ಮಿಸುವ ಯೋಜನೆಯೂ ಇದೆ. ಉತ್ಸವದ ಅಂಗವಾಗಿ ಇನ್ನಷ್ಟು ಹೊಸ ಕಾರ್ಯಕ್ರಮಗಳನ್ನು ಆಯೋಜಿಸಲು ಸಿದ್ಧತೆ ನಡೆಸಲಾಗುತ್ತಿದೆ ಎಂದು ಪರಮೇಶ್ವರ್ ತಿಳಿಸಿದರು.

# "ಶಿಕ್ಷಣ, ಕ್ಯಾನ್ಸರ್ ಪೀಡಿತರ ನೆರವಿಗೆ ಲಕ್ಷ್ಮೀಶ ಫೌಂಡೇಶನ್ ಸೇವೆ ಮಾದರಿ"

● ವಿಕ್ರಮ ವಾಹಿನಿ । ಬೆಂಗಳೂರು

*ಲಕ್ಷ್ಮೀಶ ಫೌಂಡೇಶನ್‌ನ 6ನೇ ಸಂಸ್ಥಾಪನಾ ದಿನಾಚರಣೆಯ ಅಂಗವಾಗಿ ಕನಕಪುರ ರಸ್ತೆಯ ಕುಮಾರನ್ ಶಾಲೆಯ ರಂಗಮಂಚದಲ್ಲಿ ಮಕ್ಕಳ ಶೈಕ್ಷಣಿಕ ನೆರವು ಹಾಗೂ ಕ್ಯಾನ್ಸರ್ ಪೀಡಿತ ಮಕ್ಕಳ ನೆರವಿಗಾಗಿ 'ನಾದೋತ್ಸವ' ಸಂಗೀತ ಕಾರ್ಯಕ್ರಮ ಆಯೋಜಿಸಲಾಗಿತ್ತು.*





*ಎಂ.ಡಿ. ಪಲ್ಲವಿ, ಶ್ರೀನಿಧಿ ಶಾಸ್ತ್ರಿ ಹಾಗೂ ಸಂಗಡಿಗರು ಸುಮಾರು ಮೂರು ಗಂಟೆಗಳ ಕಾಲ ಬೇಂದ್ರೆ, ಜಿ.ಎಸ್. ಶಿವರುದ್ರಪ್ಪ, ಎಚ್.ಎಸ್. ವೆಂಕಟೇಶಮೂರ್ತಿ, ಎಂ.ಎನ್. ವ್ಯಾಸರಾವ್, ಕೆ.ಎಸ್. ನಿಸಾರ್ ಅಹಮದ್, ಕೆ.ಎಸ್. ನರಸಿಂಹಸ್ವಾಮಿ ಹಾಗೂ ಶಿಶುನಾಳ ಶರೀಫರ ಹೆಸರಾಂತ ಭಾವಗೀತೆಗಳನ್ನು ಮಧುರ ಕಂಠದಿಂದ ಹಾಡಿ ಸಂಗೀತಾಭಿಮಾನಿಗಳನ್ನು ರಂಜಿಸಿದರು.*

*ಕಾರ್ಯಕ್ರಮದ ವಿಶೇಷ ಅತಿಥಿಯಾಗಿ ಭಾಗವಹಿಸಿದ್ದ ಬೆಂಗಳೂರು ಗ್ರಾಮಾಂತರ ಕ್ಷೇತ್ರದ ಶಾಸಕ, ಪದ್ಮಶ್ರೀ ಡಾ. ಸಿ.ಎನ್. ಮಂಜುನಾಥ್ ಅವರು ಮಾತನಾಡಿ, ಕ್ಯಾನ್ಸರ್ ಪೀಡಿತರು ಹಾಗೂ ಅವರ ಕುಟುಂಬಗಳಿಗೆ ಲಕ್ಷ್ಮೀಶ ಫೌಂಡೇಶನ್ ನೀಡುತ್ತಿರುವ ಸೇವೆಯನ್ನು ಶ್ಲಾಘಿಸಿದರು.*

*ಕ್ಯಾನ್ಸರ್ ಚಿಕಿತ್ಸೆಯಲ್ಲಿ ಔಷಧಿ ಹಾಗೂ ಶಸ್ತ್ರಚಿಕಿತ್ಸೆಯ ಜೊತೆಗೆ ರೋಗಿಗಳಿಗೆ ಆತ್ಮವಿಶ್ವಾಸ ಮತ್ತು ಮಾನಸಿಕ ಧೈರ್ಯ ತುಂಬುವುದು ಕೂಡ ಮುಖ್ಯ. ನಿಯಮಿತ ಆರೋಗ್ಯ ತಪಾಸಣೆ ಹಾಗೂ ಆರಂಭಿಕ ಹಂತದಲ್ಲೇ ರೋಗ ಪತ್ತೆ ಮಾಡುವ ಮೂಲಕ ಗಂಭೀರ ಕಾಯಿಲೆಗಳನ್ನು ನಿಯಂತ್ರಿಸಬಹುದು ಎಂದು ಸಲಹೆ ನೀಡಿದರು.*

*ಬಡ ವಿದ್ಯಾರ್ಥಿಗಳ ಶಿಕ್ಷಣಕ್ಕೆ ನೆರವು ನೀಡುವುದರ ಜೊತೆಗೆ ಕ್ಯಾನ್ಸರ್ ಪೀಡಿತ ಮಕ್ಕಳು ಹಾಗೂ ರೋಗಿಗಳಿಗೆ ನೆರವು ನೀಡುವ ಮೂಲಕ ಲಕ್ಷ್ಮೀಶ ಫೌಂಡೇಶನ್ ಕಳೆದ ಆರು ವರ್ಷಗಳಿಂದ ಸಮಾಜಮುಖಿ ಸೇವೆಯಲ್ಲಿ ತೊಡಗಿಸಿಕೊಂಡಿದೆ ಎಂದು ಕಾರ್ಯಕ್ರಮದಲ್ಲಿ ಶ್ಲಾಘನೆ ವ್ಯಕ್ತವಾಯಿತು.*

*ಲಕ್ಷ್ಮೀಶ ಫೌಂಡೇಶನ್ ಕಳೆದ ಆರು ವರ್ಷಗಳಿಂದ ಬಡ ವಿದ್ಯಾರ್ಥಿಗಳ ಶಿಕ್ಷಣಕ್ಕೆ ನೆರವು, ಕ್ಯಾನ್ಸರ್ ಪೀಡಿತ ಮಕ್ಕಳಿಗೆ ವಿಶೇಷ ಸಹಾಯ, ವೃದ್ಧಾಶ್ರಮಗಳಿಗೆ ಭೇಟಿ ನೀಡಿ ಸಹಾಯ ನೀಡುವುದರ ಜೊತೆ ಧೈರ್ಯ ನೀಡುವುದು, ಲಕ್ಷ್ಮಿ ನಾರಾಯಣ ಹೆಸರಿನಲ್ಲಿ ಯುವ ಕ್ರೀಡಾ ಪಟುಗಳಿಗೆ ಉತ್ತೇಜನ ವಾಗಿ ಪ್ರತಿವರ್ಷ ಬ್ಯಾಡ್ಮಿಂಟನ್ ಪಂದ್ಯಾವಳಿ ಆಯೋಜನೆ ಸೇರಿದಂತೆ ಹಲವು ಸಮಾಜಮುಖಿ ಕಾರ್ಯಗಳನ್ನು ನಡೆಸುತ್ತಿದೆ, ಈಗಾಗಲೇ 168 ವಿದ್ಯಾರ್ಥಿಗಳಿಗೆ 41 ಲಕ್ಷ ಹಣದ ನೆರವು ನೀಡಿದೆ. ಅಲ್ಲದೆ, ಪ್ರತಿ ತಿಂಗಳು ಶಂಕರ ಕ್ಯಾನ್ಸರ್ ಆಸ್ಪತ್ರೆಗೆ ಭೇಟಿ ನೀಡಿ ರೋಗಿಗಳಿಗೆ ಆತ್ಮಸ್ಥೈರ್ಯ ತುಂಬುವ ಕಾರ್ಯವನ್ನೂ ಮಾಡುತ್ತಿದೆ.*

*ಕಾರ್ಯಕ್ರಮದಲ್ಲಿ ಮಾಜಿ ಬಿಬಿಎಂಪಿ ಸದಸ್ಯ ಸೋಮು, ಫೌಂಡೇಶನ್ ಪದಾಧಿಕಾರಿಗಳು, ವೈದ್ಯರು ಹಾಗೂ ಸಂಗೀತಾಭಿಮಾನಿಗಳು ಉಪಸ್ಥಿತರಿದ್ದರು.*

# ಕಾಕೋಳಿನಲ್ಲಿ ವೈಭವದ ಶ್ರೀಕೃಷ್ಣ ಜನ್ಮಾಷ್ಟಮಿ-ಲೀಲೋತ್ಸವ

● ವಿಕ್ರಮ ವಾಹಿನಿ । ಬೆಂಗಳೂರು

ಯಲಹಂಕ-ದೊಡ್ಡಬಳ್ಳಾಪುರ ರಸ್ತೆಯ ರಾಜಾನುಕುಂಟೆ ಸಮೀಪದ ಕಾಕೋಳು ಶ್ರೀ ವೇಣುಗೋಪಾಲಸ್ವಾಮಿ ದೇವಸ್ಥಾನದಲ್ಲಿ ಶ್ರೀಕೃಷ್ಣ ಜನ್ಮಾಷ್ಟಮಿ ಹಾಗೂ ಶ್ರೀಕೃಷ್ಣ ಲೀಲೋತ್ಸವವನ್ನು ಭಕ್ತಿ-ಸಂಭ್ರಮದಿಂದ ಆಚರಿಸಲಾಯಿತು.

ಜನ್ಮಾಷ್ಟಮಿ ಅಂಗವಾಗಿ ಮೂಲ ದೇವರಿಗೆ ಪಂಚಾಮೃತ ಅಭಿಷೇಕ, ನವನೀತ ಅಲಂಕಾರ ಸೇರಿದಂತೆ ವಿವಿಧ ವಿಶೇಷ ಪೂಜಾ ಕೈಂಕರ್ಯಗಳು ನೆರವೇರಿದವು.

ಪಾಂಚಜನ್ಯ ಸಭಾಂಗಣದ ಹರಿತಸ ವೇದಿಕೆಯಲ್ಲಿ ನಡೆದ 'ನವನೀತಚೋರನಿಗೆ ನಾದನೀರಾಜನ' ಕಾರ್ಯಕ್ರಮದಲ್ಲಿ ತುಮಕೂರಿನ ವಿದ್ವಾನ್ ವಿಜಯೇಂದ್ರ ಆಚಾರ್ಯ ಅವರ ಗಾಯನ ಹಾಗೂ ವೇಣುವಾದನ ಭಕ್ತರ ಗಮನ ಸೆಳೆಯಿತು. ಬಳಿಕ ನಾಮಸಂಕೀರ್ತನೆ ಮತ್ತು ವಿಷ್ಣು ಸಹಸ್ರನಾಮ ಪಾರಾಯಣ ನಡೆಯಿತು.

ರಾತ್ರಿ ಪೂಜ್ಯ ಶ್ರೀಗಳ ಸಾನ್ನಿಧ್ಯದಲ್ಲಿ ಬಾಲಕೃಷ್ಣನಿಗೆ ತೊಟ್ಟಿಲು ಪೂಜೆ ನೆರವೇರಿಸಲಾಯಿತು. ಮಧ್ಯರಾತ್ರಿ 12 ಗಂಟೆಗೆ ಚಂದ್ರೋದಯದ ಸಂದರ್ಭದಲ್ಲಿ ಸಂಪ್ರದಾಯಬದ್ಧವಾಗಿ ಅರ್ಘ್ಯ ಪ್ರದಾನ ಮಾಡಲಾಯಿತು.



ಶ್ರೀಕೃಷ್ಣ ಲೀಲೋತ್ಸವದ ಅಂಗವಾಗಿ ಶ್ರೀಮನ್ಮಧ್ವಾಚಾರ್ಯರ ಸಾಕ್ಷಾತ್ ಶಿಷ್ಯರಾದ ಚತುರ್ವೇದಭಾಷ್ಯಾಚಾರ್ಯ, ತಂಬಿಹಳ್ಳಿಯ ಶ್ರೀಮನ್ಮಾಧವತೀರ್ಥ ಮಠದ ಪೀಠಾಧಿಪತಿಗಳಾದ ಪರಮಪೂಜ್ಯ ಶ್ರೀ ವಿದ್ಯಾವಲ್ಲಭ ಮಾಧವತೀರ್ಥ ಶ್ರೀಪಾದರ ದಿವ್ಯ ಸಾನ್ನಿಧ್ಯದಲ್ಲಿ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

ಪಾಂಚಜನ್ಯ ಪ್ರತಿಷ್ಠಾನ ಹಾಗೂ ತಿರುಮಲ ತಿರುಪತಿ ದೇವಸ್ಥಾನದ ಹಿಂದೂ ಧರ್ಮ ಪ್ರಚಾರ ಪರಿಷತ್ ಸಹಯೋಗದಲ್ಲಿ ದಾಸ ನಮನ ವತಿಯಿಂದ ಶತಕಂಠ ಗಾಯನ, ಕೋಲಾಟ ಹಾಗೂ ನೃತ್ಯ ಕಾರ್ಯಕ್ರಮಗಳು ನಡೆದವು. ದಾಸ ಸಾಹಿತ್ಯ, ಸಂಗೀತ ಮತ್ತು ನೃತ್ಯದ ಮೂಲಕ ಶ್ರೀಕೃಷ್ಣನ ಲೀಲಾಮೃತವನ್ನು ಅನಾವರಣಗೊಳಿಸಲಾಯಿತು.

ಕಾರ್ಯಕ್ರಮದಲ್ಲಿ ನೂರಾರು ಭಕ್ತರು ಪಾಲ್ಗೊಂಡು ಶ್ರೀ ವೇಣುಗೋಪಾಲಸ್ವಾಮಿಯ ದರ್ಶನ ಪಡೆದು, ವಿವಿಧ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳ ಸವಿಯನ್ನು ಅನುಭವಿಸಿದರು.

# ಸಿಇಓಗಳ ಗ್ರಾಮಭೇಟಿ ಕಡ್ಡಾಯ: ಈಶ್ವರ ಖಂಡ್ರೆ

● ವಿಕ್ರಮ ವಾಹಿನಿ । ಬೆಂಗಳೂರು

**ಗ್ರಾಮೀಣ ಪ್ರದೇಶಗಳ ಅಭಿವೃದ್ಧಿಗೆ ಚುರುಕು ನೀಡುವ ಉದ್ದೇಶದಿಂದ ರಾಜ್ಯದ ಎಲ್ಲ ಜಿಲ್ಲೆಗಳ ಸಿಇಒಗಳು ವಾರದಲ್ಲ ಕನಿಷ್ಠ ಎರಡು ದಿನ 4-5 ಗ್ರಾಮಗಳಿಗೆ ದಿಢೀರ್ ಭೇಟಿ ನೀಡಿ ಕಾಮಗಾರಿಗಳು ಹಾಗೂ ಅಧಿಕಾರಿಗಳ ಕಾರ್ಯವೈಖರಿಯನ್ನು ಪರಿಶೀಲಿಸುವಂತೆ ಸಚಿವ ಈಶ್ವರ ಬಿ. ಖಂಡ್ರೆ ಸೂಚಿಸಿದ್ದಾರೆ. ಜನರ ಅಹವಾಲು ಆಲಿಸಿ ಸ್ಥಳದಲ್ಲೇ ಸಮಸ್ಯೆ ಪರಿಹರಿಸುವ ಜೊತೆಗೆ ಕುಡಿಯುವ ನೀರು, ರಸ್ತೆ, ನೈರ್ಮಲ್ಯ, ಉದ್ಯೋಗ ಮತ್ತು ತ್ಯಾಜ್ಯ ನಿರ್ವಹಣೆಗೆ ಆದ್ಯತೆ ನೀಡುವಂತೆ ಅವರು ನಿರ್ದೇಶಿಸಿದ್ದಾರೆ.**

ರಾಜ್ಯದ ಎಲ್ಲ ಜಿಲ್ಲೆಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು (ಸಿಇಒ) ವಾರದಲ್ಲಿ ಕನಿಷ್ಠ 2 ದಿನ 4-5 ಗ್ರಾಮಗಳಿಗಾದರೂ ದಿಢೀರ್ ಭೇಟಿ ನೀಡಿ ಖುದ್ದು ಪರಿಶೀಲಿಸಬೇಕು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಸೂಚನೆ ನೀಡಿದ್ದಾರೆ.

ಈ ಸಂಬಂಧ ಇಲಾಖೆಯ ಕಾರ್ಯದರ್ಶಿಯವರಿಗೆ ಲಿಖಿತ ಸೂಚನೆ ನೀಡಿರುವ ಅವರು, ಸಿಇಒಗಳು ಗ್ರಾಮ ಪಂಚಾಯತಿಗಳಿಗೆ ಪೂರ್ವ ಸೂಚನೆ ನೀಡದೆ ಭೇಟಿ ನೀಡಿ, ಹಾಜರಾತಿ, ಪಿಡಿಒ ಮತ್ತು ತಾಲೂಕು ಕಾರ್ಯನಿರ್ವಹಣಾಧಿಕಾರಿಗಳ ಕಾರ್ಯವೈಖರಿ ಪರಾಮರ್ಶಿಸುವುದರ ಜೊತೆಗೆ, ಜನರ ಆಹವಾಲು ಆಲಿಸಿ ಸ್ಥಳದಲ್ಲೇ ಕೆಲವು ಸಮಸ್ಯೆಗಳನ್ನಾದರೂ ಪರಿಹರಿಸಬೇಕು ಎಂದು ತಿಳಿಸಿದ್ದಾರೆ.

ರಾಜ್ಯದ 31 ಜಿಲ್ಲೆಗಳಲ್ಲಿ 5900ಕ್ಕೂ ಅಧಿಕ ಗ್ರಾಮ ಪಂಚಾಯತಿಗಳಿದ್ದು, 57,879 ವಸತಿ ಪ್ರದೇಶಗಳಿವೆ. ರಾಜ್ಯದ ಒಟ್ಟು ಜನಸಂಖ್ಯೆ 6 ಕೋಟಿ 13 ಲಕ್ಷ ಇದ್ದು, ಈ ಪೈಕಿ 26,589 ಹಳ್ಳಿಗಳಲ್ಲಿ 4 ಕೋಟಿ 45 ಲಕ್ಷ ಜನರು ವಾಸುತ್ತಿದ್ದಾರೆ. ಅಂದರೆ ರಾಜ್ಯದ ಮುಕ್ಕಾಲು ಭಾಗ ಜನಸಂಖ್ಯೆ ಇರುವುದೇ ಗ್ರಾಮೀಣ ಪ್ರದೇಶಗಳಲ್ಲಿ ಹೀಗಾಗಿ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಗ್ರಾಮಾಭಿವೃದ್ಧಿಗೆ ಗಮನ ಹರಿಸಬೇಕು ಎಂದರು.

ಗ್ರಾಮೀಣ ಜನರಿಗೆ ಶುದ್ಧ ಕುಡಿಯುವ ನೀರು, ಉತ್ತಮ ರಸ್ತೆ, ನೈರ್ಮಲ್ಯ, ವಿಬಿಜಿ ರಾಮ್ ಜಿ ಅಡಿ ಸ್ಥಳದಲ್ಲೇ ಉದ್ಯೋಗ ನೀಡುವ ಬಗ್ಗೆ ಹೆಚ್ಚಿನ ಗಮನ ಹರಿಸಿದರೆ ಗ್ರಾಮಗಳಿಂದ ಜನರು ನಗರಕ್ಕೆ ವಲಸೆ ಹೋಗುವುದು ತಪ್ಪಲಿದ್ದು, ಇದು ನಗರಗಳ ಮೇಲಿನ ಒತ್ತಡವನ್ನೂ ತಗ್ಗಿಸುತ್ತದೆ, ಜೊತೆಗೆ ಗ್ರಾಮಗಳ ಅಭಿವೃದ್ಧಿಯೂ ಆಗುತ್ತದೆ ಎಂದು ಪತ್ರದಲ್ಲಿ ತಿಳಿಸಿದ್ದಾರೆ.

ಜಲ ಜೀವನ ಮಿಷನ್, ವಿಬಿಜಿ ರಾಮ್ ಜಿ, ಪ್ರಧಾನಮಂತ್ರಿ ವಸತಿ ಯೋಜನೆ (ಗ್ರಾಮೀಣ) ಮತ್ತು ಪ್ರಧಾನಮಂತ್ರಿ ಗ್ರಾಮ ಸಡಕ್ ಯೋಜನೆ, ಮುಖ್ಯಮಂತ್ರಿಗಳ ರಸ್ತೆ ಯೋಜನೆ ಇತ್ಯಾದಿಗಳ ಸಮರ್ಪಕ ಅನುಷ್ಠಾನ ಆಗುತ್ತಿದೆಯೇ, ಕೆರೆಗಳ ಒತ್ತುವರಿ ತೆರವು ಆಗುತ್ತಿದೆಯೇ ಹಾಗೂ ಪಂಚಾಯತಿ ವ್ಯಾಪ್ತಿಯಲ್ಲಿ ಸ್ವಚ್ಛತೆ ಮತ್ತು ಒಣ ಹಾಗೂ ಹಸಿ ತ್ಯಾಜ್ಯ ನಿರ್ವಹಣೆ ಸಮರ್ಪಕವಾಗಿದೆಯೇ ಎಂಬುದನ್ನು ಸಿಇಒಗಳು ನಿಯಮಿತವಾಗಿ ಪರಿಶೀಲಿಸಿದರೆ ಆಗ ಕಾಮಗಾರಿಗಳು ಚುರುಕಾಗಲಿವೆ ಎಂದು ಈಶ್ವರ ಖಂಡ್ರೆ ಅಭಿಪ್ರಾಯಪಟ್ಟಿದ್ದಾರೆ.

# ಸರ್ಕಾರಿ ಆಸ್ಪತ್ರೆಗಳ ಟ್ರಾಮಾ ಕೇರ್‌ಗೆ ಬಲ

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದ ಜಿಲ್ಲಾ ಹಾಗೂ ತಾಲೂಕು ಮಟ್ಟದ ಸರ್ಕಾರಿ ಆಸ್ಪತ್ರೆಗಳಲ್ಲಿ ಆಘಾತ ಆರೈಕೆ ಸೇವೆಗಳನ್ನು ಮತ್ತಷ್ಟು ಬಲಪಡಿಸಲು ರಾಜ್ಯ ಸರ್ಕಾರ ಮಹತ್ವದ ಕ್ರಮ ಕೈಗೊಂಡಿದೆ. ತುರ್ತು ಚಿಕಿತ್ಸಾ ವ್ಯವಸ್ಥೆ ಸುಧಾರಿಸುವ ಉದ್ದೇಶದಿಂದ ಹೊಸ ಆಂಬುಲೆನ್ಸ್‌ಗಳು ಹಾಗೂ ವೈದ್ಯಕೀಯ ಉಪಕರಣಗಳ ಖರೀದಿಗೆ ಅನುಮೋದನೆ ನೀಡಲಾಗಿದೆ.

'108 ಆರೋಗ್ಯ ಕವಚ' ಯೋಜನೆಯಡಿ ಹಳೆಯ ಆಂಬುಲೆನ್ಸ್‌ಗಳ ಬದಲಿಗೆ 100 ಹೊಸ ಆಂಬುಲೆನ್ಸ್‌ಗಳನ್ನು ರೂ 31 ಕೋಟಿ ವೆಚ್ಚದಲ್ಲಿ ಖರೀದಿಸಲು ಸರ್ಕಾರ ಆದೇಶಿಸಿದೆ. ಇದರಿಂದ ಅಪಘಾತ ಹಾಗೂ ತುರ್ತು ಸಂದರ್ಭಗಳಲ್ಲಿ ರೋಗಿಗಳನ್ನು ತ್ವರಿತವಾಗಿ ಆಸ್ಪತ್ರೆಗೆ ಸಾಗಿಸಲು ಅನುಕೂಲವಾಗಲಿದೆ.

ನಾಲ್ಕು ಆಸ್ಪತ್ರೆಗಳಿಗೆ ಸಿಟಿ ಸ್ಕ್ಯಾನ್

ಸರ್ಕಾರಿ ಆಸ್ಪತ್ರೆಗಳಲ್ಲಿ ಸಿಟಿ ಸ್ಕ್ಯಾನ್ ಸೌಲಭ್ಯವನ್ನು ಬಲಪಡಿಸಲು ಮೈಸೂರು, ದಾವಣಗೆರೆ ಹಾಗೂ ಬೆಂಗಳೂರಿನ ಸರ್.ಸಿ.ವಿ. ರಾಮನ್ ನಗರ ಆಸ್ಪತ್ರೆಗಳಿಗೆ ತಲಾ ರೂ 6 ಕೋಟಿ ವೆಚ್ಚದಲ್ಲಿ 64-ಸ್ಲೈಸ್ ಸಿಟಿ ಸ್ಕ್ಯಾನ್ ಯಂತ್ರ ಖರೀದಿಸಲು ಅನುಮತಿ ನೀಡಲಾಗಿದೆ.

ಇದೇ ವೇಳೆ ಹಾಸನ ಜಿಲ್ಲಾ ಆಸ್ಪತ್ರೆಗೆ ರೂ 2.50 ಕೋಟಿ ವೆಚ್ಚದಲ್ಲಿ 32-ಸ್ಲೈಸ್ ಸಿಟಿ ಸ್ಕ್ಯಾನ್ ಯಂತ್ರ ಖರೀದಿಸಲು ಸರ್ಕಾರ ಒಪ್ಪಿಗೆ ನೀಡಿದೆ. ಈ ಕ್ರಮಗಳಿಂದ ಸರ್ಕಾರಿ ಆಸ್ಪತ್ರೆಗಳಲ್ಲಿ ತುರ್ತು ರೋಗನಿರ್ಣಯ ಹಾಗೂ ಚಿಕಿತ್ಸಾ ಸೇವೆಗಳ ಗುಣಮಟ್ಟ ಹೆಚ್ಚುವ ನಿರೀಕ್ಷೆಯಿದೆ.

# ರಷ್ಯಾದಲ್ಲಿ ಭೀಕರ ಹಿಮಪಾತ: 11 ಪರ್ವತಾರೋಹಿಗಳ ಸಾವು

● ವಿಕ್ರಮ ವಾಹಿನಿ । ಮಾಸ್ಕೋ

ರಷ್ಯಾದ ದಕ್ಷಿಣ ಭಾಗದಲ್ಲಿರುವ ಕಾಕಸಸ್ ಪರ್ವತ ಶ್ರೇಣಿಯ ಕಬಾರ್ಡಿನೋ-ಬಲ್ಕೇರಿಯಾ ಪ್ರದೇಶದ ಮಿಝಿರ್ಗಿ ಪರ್ವತದಲ್ಲಿ ಸಂಭವಿಸಿದ ಭೀಕರ ಹಿಮಪಾತಕ್ಕೆ 11 ಪರ್ವತಾರೋಹಿಗಳು ಮೃತಪಟ್ಟಿದ್ದು, ಆರು ಮಂದಿ ಗಾಯಗೊಂಡಿದ್ದಾರೆ. ಇನ್ನೂ ಆರು ಮಂದಿ ನಾಪತ್ತೆಯಾಗಿದ್ದು, ಅವರಿಗಾಗಿ ತೀವ್ರ ಶೋಧ ಕಾರ್ಯಾಚರಣೆ ಮುಂದುವರಿದಿದೆ.

ಸುಮಾರು 5,000 ಮೀಟರ್ ಎತ್ತರದ ಮಿಝಿರ್ಗಿ ಪರ್ವತದ ಬೆಝೆಂಗಿ ಕಣಿವೆಯಲ್ಲಿ 33 ಪರ್ವತಾರೋಹಿಗಳ ತಂಡ ಸಾಗುತ್ತಿದ್ದ ವೇಳೆ ಭಾನುವಾರ ಸಂಜೆ 5 ಗಂಟೆ ಸುಮಾರಿಗೆ ಹಿಮದ ಬಂಡೆಗಳು ಏಕಾಏಕಿ ಕುಸಿದು ಬಿದ್ದಿವೆ. ಘಟನೆಯಿಂದ 10 ಮಂದಿ ಸುರಕ್ಷಿತವಾಗಿ ಬೆಟ್ಟದಿಂದ ಕೆಳಗಿಳಿಯುವಲ್ಲಿ ಯಶಸ್ವಿಯಾಗಿದ್ದಾರೆ.

ನಾಪತ್ತೆಯಾಗಿರುವವರ ಪತ್ತೆಗಾಗಿ ತುರ್ತು ಸೇವೆಗಳ ಪಡೆ ಸೇರಿದಂತೆ 50ಕ್ಕೂ ಹೆಚ್ಚು ರಕ್ಷಣಾ ಸಿಬ್ಬಂದಿ ಹಾಗೂ ಹೆಲಿಕಾಪ್ಟರ್‌ಗಳನ್ನು ನಿಯೋಜಿಸಲಾಗಿದೆ. ಪ್ರತಿಕೂಲ ಹವಾಮಾನ ಪರಿಸ್ಥಿತಿಯ ನಡುವೆಯೂ ರಕ್ಷಣಾ ಕಾರ್ಯಾಚರಣೆ ಮುಂದುವರಿದಿದೆ. ಹಿಮಪಾತದ ಭೀಕರ ದೃಶ್ಯಗಳು ಕ್ಯಾಮೆರಾದಲ್ಲಿ ಸೆರೆಯಾಗಿದ್ದು, ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿವೆ.

# ಪಿಂಕ್ ಪವರ್ ರನ್ 3.0: 20,000 ಸ್ಪರ್ಧಿಗಳಿಂದ ಸ್ಥನ ಕ್ಯಾನ್ಸರ್ ಜಾಗೃತಿ

● ವಿಕ್ರಮ ವಾಹಿನಿ । ಬೆಂಗಳೂರು

ದೇಶದ ಮಹಿಳೆಯರಲ್ಲಿ ಹೆಚ್ಚಾಗಿ ಕಾಣಿಸಿಕೊಳ್ಳುತ್ತಿರುವ ಮಾರಕ ಸ್ತನ ಕ್ಯಾನ್ಸರ್ ಕುರಿತು ವ್ಯಾಪಕ ಜಾಗೃತಿ ಮೂಡಿಸುವ ಉದ್ದೇಶದಿಂದ ಸುಧಾ ರೆಡ್ಡಿ ಫೌಂಡೇಶನ್ ಹಾಗೂ ದೇಶದ ಪ್ರಮುಖ ಮೂಲಸೌಕರ್ಯ ಸಂಸ್ಥೆಯಾದ ಎಂಇಐಎಲ್ ಫೌಂಡೇಶನ್ ಜಂಟಿಯಾಗಿ ಅಂತರರಾಷ್ಟ್ರೀಯ ಹಾಫ್ ಮ್ಯಾರಥಾನ್ ಮತ್ತು ಸಮುದಾಯ ಫಿಟ್ನೆಸ್ ಉಪಕ್ರಮವನ್ನು ಮುಂದುವರಿಸಿದ್ದು, ಅದರ ಭಾಗವಾಗಿ 'ಪಿಂಕ್ ಪವರ್ ರನ್' ಮೂರನೇ ಆವೃತ್ತಿಯನ್ನು ಆಯೋಜಿಸುವುದಾಗಿ ಘೋಷಿಸಿದೆ.

ಇದೇ 27 ರಂದು ಹೈದರಾಬಾದ್‌ನ ನೆಕ್ಲೇಸ್ ರಸ್ತೆಯ ಪೀಪಲ್ಸ್ ಪ್ಲಾಜಾದಲ್ಲಿ ಪಿಂಕ್ ಪವರ್ ರನ್‌ನ ಸರಣಿಯ ಮೂರನೇ ಆವೃತ್ತಿ ನಡೆಯಲಿದ್ದು, ಇದರಲ್ಲಿ 20,000ಕ್ಕೂ ಹೆಚ್ಚು ಸ್ಪರ್ಧಿಗಳನ್ನು ಆಕರ್ಷಿಸುವ ನಿರೀಕ್ಷೆಯಿದೆ ಮತ್ತು ಒಟ್ಟು 75 ಲಕ್ಷ ರೂ. ಗಳ ಬಹುಮಾನವನ್ನು ನೀಡಲಿದೆ, 100 ಕ್ಕೂ ಹೆಚ್ಚು ವಿಜೇತರಿಗೆ ಪ್ರಶಸ್ತಿಗಳನ್ನು ನೀಡಲಾಗುವುದು.

ಸುಧಾ ರೆಡ್ಡಿ ಫೌಂಡೇಶನ್‌ನ ಸಂಸ್ಥಾಪಕಿ ಮತ್ತು ಎಂಇಐಎಲ್ ನಿರ್ದೇಶಕಿ ಸುಧಾ ರೆಡ್ಡಿ, ಮಿಸ್ ವರ್ಲ್ಡ್ 2025 ಓಪಲ್ ಸುಚತಾ ಚುವಾಂಗ್ಸ್ರೀ ಮತ್ತು 10 ವರ್ಷಗಳ ಅನುಭವ ಹೊಂದಿರುವ ಸ್ತನ ಆಂಕೋಸರ್ಜನ್ ಡಾ.ಪ್ರಜ್ಞಾ ಚಿಗುರುಪತಿ ಭಾಗವಹಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಈ ಆಯೋಜನೆಯನ್ನು ಘೋಷಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಶ್ರೀಮತಿ ಸುಧಾ ರೆಡ್ಡಿ ಅವರು, ಪಿಂಕ್ ಪವರ್ ರನ್ ಒಂದು ಕ್ರೀಡಾಕೂಟವನ್ನು ಮೀರಿ ಫಿಟ್ನೆಸ್, ಆರೋಗ್ಯ ರಕ್ಷಣೆ ಮತ್ತು ಆರಂಭಿಕ ಕ್ರಿಯೆಯ ಮಹತ್ವವನ್ನು ನೆನಪಿಸಲು ಉದ್ದೇಶಿಸಲಾಗಿದೆ ಎಂದು ಹೇಳಿದರು.




"ಆರೋಗ್ಯವೇ ಸಂಪತ್ತು" ಎಂಬ ಕಾಲಾತೀತ ಗಾದೆಯನ್ನು ಒತ್ತಿಹೇಳಿದ ಅವರು, ಆರೋಗ್ಯಕರ ಸಮುದಾಯವು ದೇಶದ ಬಲವಾದ ಮತ್ತು ಬಲಿಷ್ಠ ಆರ್ಥಿಕತೆಯನ್ನು ರಚಿಸಲು ಅಡಿಪಾಯವಾಗಿದೆ ಎಂದು ಹೇಳಿದರು.

ಮೊದಲ ಬಾರಿಗೆ, ಈವೆಂಟ್ ಅಸೋಸಿಯೇಷನ್ ಆಫ್ ಇಂಟರ್ ನ್ಯಾಷನಲ್ ಮ್ಯಾರಥಾನ್ ಮತ್ತು ಡಿಸ್ಟೆನ್ಸ್ ರೇಸ್ (ಏಮ್ಸ್) ಪ್ರಮಾಣೀಕರಿಸಿದ ಅಧಿಕೃತ 21.097 ಕಿ.ಮೀ ಹಾಫ್ ಮ್ಯಾರಥಾನ್ ಅನ್ನು ಒಳಗೊಂಡಿರುತ್ತದೆ. ಹಾಫ್ ಮ್ಯಾರಥಾನ್ 10 ಕಿ.ಮೀ, 5 ಕಿ.ಮೀ ಮತ್ತು 3 ಕಿ.ಮೀ ವಿಭಾಗಗಳೊಂದಿಗೆ ಇರುತ್ತದೆ. ನವೀಕರಿಸಿದ ಸ್ವರೂಪ ಮತ್ತು ಗಣನೀಯ ಬಹುಮಾನದ ಪರ್ಸ್ ಪ್ರಮುಖ ದೂರದ ಓಟಗಾರರು ಮತ್ತು ಅಂತರರಾಷ್ಟ್ರೀಯ ಕ್ರೀಡಾಪಟುಗಳನ್ನು ಆಕರ್ಷಿಸುವ ಪ್ರಯತ್ನ ಸಾಗಿದೆ ಎಂದರು.

ಡಾ. ಪ್ರಜ್ಞಾ ಚಿಗುರುಪತಿ ಅವರು ಮಾತನಾಡಿ, ಸ್ಥನ ಕ್ಯಾನ್ಸರ್ ಜಾಗೃತಿ ಪ್ರಯತ್ನಗಳನ್ನು ವಿಸ್ತರಿಸುವ ತುರ್ತು ಅಗತ್ಯವನ್ನು ಪ್ರತಿಪಾದಿಸಿದರು ಮತ್ತು ವಿಶೇಷವಾಗಿ ಗ್ರಾಮೀಣ ಮತ್ತು ಅರೆ-ನಗರ ಪ್ರದೇಶಗಳಲ್ಲಿ ಆರಂಭಿಕ ಪತ್ತೆ ಸಂಪನ್ಮೂಲಗಳ ಪ್ರವೇಶವು ಸೀಮಿತವಾಗಿರುತ್ತದೆ. ನಿಯಮಿತ ಆರೋಗ್ಯ ತಪಾಸಣೆಗಳ ಮೂಲಕ ಪೂರ್ವಭಾವಿ ತಡೆಗಟ್ಟುವಿಕೆಯು ಜೀವಗಳನ್ನು ಉಳಿಸುವಲ್ಲಿ ಅತ್ಯಂತ ಪ್ರಮುಖ ಸಾಧನವಾಗಿದೆ ಎಂದು ಒತ್ತಿ ಹೇಳಿದರು.

'ಪಿಂಕ್ ಪವರ್ ರನ್ 3.0' ಭಾಗವಾಗಿ ಸುಧಾರೆಡ್ಡಿ ಫೌಂಡೇಶನ್, ಎಐಜಿ ಆಸ್ಪತ್ರೆಯಲ್ಲಿ ಹಿಂದುಳಿದವರಿಗಾಗಿ ಉಚಿತವಾಗಿ ಓರ್ವರಿಗೆ ಒಂದು ಬಾರಿಗೆ ನೀತಿಯಂತೆ ಸ್ಥನ ಕ್ಯಾನ್ಸರ್ ತಪಾಸಣೆ ಮತ್ತು ಮ್ಯಾಮೋಗ್ರಾಮ್ ಚಿಕಿತ್ಸೆ ಕಲ್ಪಿಸಲಿದೆ.

ಇದೇ ವೇಳೆ ತನ್ನ ಹೆಣ್ಣು ಮಗಳ ಭವಿಷ್ಯಕ್ಕಾಗಿ ಕೆಲಸ ಮಾಡಿ ಜೀವನ ಸಾಗಿಸುತ್ತಿರುವ ತಾಯಿ ರಮಾಬಾಯಿ ರಣವೀರ್ ಅವರಿಗೆ ಪ್ರತಿಷ್ಠಾನವು ಆರ್ಥಿಕ ನೆರವು ಘೋಷಿಸಿತು. ಇದು ತನ್ನ ಹೆಣ್ಣು ಮಕ್ಕಳ ಶಿಕ್ಷಣವನ್ನು ಬೆಂಬಲಿಸುತ್ತದೆ ಮತ್ತು ಕುಟುಂಬಕ್ಕೆ ಹೆಚ್ಚುವರಿ ಆರ್ಥಿಕ ಸಹಾಯವನ್ನು ನೀಡುತ್ತದೆ ಎಂದು ಫೌಂಡೇಶನ್ ತಿಳಿಸಿದೆ.

ಸಂಘಟಕರು ಅಧಿಕೃತ ಪಿಂಕ್ ಪವರ್ ರನ್ 3.0 ಜರ್ಸಿ ಮತ್ತು ಪದಕವನ್ನು ಅನಾವರಣಗೊಳಿಸಿದರು, ಜರ್ಸಿಯನ್ನು ಸಮಕಾಲೀನ ಆಕ್ಟಿವ್ ವೇರ್ ಆಗಿ ವಿನ್ಯಾಸಗೊಳಿಸಲಾಗಿದೆ ಮತ್ತು ಪದಕವನ್ನು ಸಾಮೂಹಿಕ ಭಾಗವಹಿಸುವಿಕೆಯ ನೆನಪಿಗಾಗಿ ಇರಿಸಲಾಗಿದೆ. ಜಾಗತಿಕ ವರ್ಚುವಲ್ ರನ್ ಅನ್ನು ಸಹ ಪರಿಚಯಿಸಲಾಗಿದೆ, ಇದು ವಿಶ್ವದ ಎಲ್ಲಿಂದಲಾದರೂ ಫಿಟ್ನೆಸ್ ಉತ್ಸಾಹಿಗಳಿಗೆ ನೋಂದಣಿ ಶುಲ್ಕವಿಲ್ಲದೆ ದೂರದಿಂದಲೇ ಭಾಗವಹಿಸಲು ಅನುವು ಮಾಡಿಕೊಡುತ್ತದೆ.

ಈ ಕಾರ್ಯಕ್ರಮಕ್ಕೆ ಎಚ್‌ಪಿಸಿಎಲ್, ಬಿಪಿಸಿಎಲ್, ಐಒಸಿಎಲ್, ಎಐಜಿ ಮತ್ತು ಡೆಕಾಥ್ಲಾನ್ ಸೇರಿದಂತೆ ಕಾರ್ಪೊರೇಟ್ ಪಾಲುದಾರರು ಬೆಂಬಲ ನೀಡುತ್ತಿದ್ದು, ಐಫಿ-ನಿಶ್ ಮತ್ತು ಡಿಸ್ಟ್ರಿಕ್ಟ್ ಮೂಲಕ ನೋಂದಣಿಗಳು ಮುಕ್ತವಾಗಿವೆ.

ನಾಲ್ಕು ರೇಸ್ ವಿಭಾಗಗಳು, ಎಐಎಂಎಸ್-ಪ್ರಮಾಣೀಕೃತ ಹಾಫ್ ಮ್ಯಾರಥಾನ್, □ 75 ಲಕ್ಷ ಬಹುಮಾನದ ಪೂಲ್, ಜಾಗತಿಕ ವರ್ಚುವಲ್ ಸ್ವರೂಪ ಮತ್ತು ತಡೆಗಟ್ಟುವ ಆರೋಗ್ಯ ಮತ್ತು ಸಮುದಾಯದ ಪ್ರಭಾವದ ಮೇಲೆ ಬಲವಾದ ಗಮನವನ್ನು ಹೊಂದಿರುವ ಸಂಘಟಕರು, ಪಿಂಕ್ ಪವರ್ ರನ್ ನ ಮೂರನೇ ಆವೃತ್ತಿಯು ಇದುವರೆಗಿನ ಉಪಕ್ರಮದ ಅತಿದೊಡ್ಡ ಆವೃತ್ತಿಯಾಗಲಿದೆ ಎಂದು ಸಂಘಟಕರು ಪ್ರತಿಪಾದಿಸಿದ್ದಾರೆ.

# ಭಾಗಪತ್‌ನಲ್ಲಿ ಭೀಕರ ರಸ್ತೆ ಅಪಘಾತ: 12 ಮಂದಿ ಸಾವು

● ವಿಕ್ರಮ ವಾಹಿನಿ । ಭಾಗಪತ್ (ಉ.ಪ್ರ)

ಉತ್ತರ ಪ್ರದೇಶದ ಭಾಗಪತ್ ಜಿಲ್ಲೆಯಲ್ಲಿ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ 12 ಮಂದಿ ಮೃತಪಟ್ಟಿದ್ದು, 22 ಮಂದಿ ಗಂಭೀರವಾಗಿ ಗಾಯಗೊಂಡಿದ್ದಾರೆ. ರಾಜಸ್ಥಾನದ ಗೋಗಾಮೆಡಿಯ ಬಗಡ್ ಧಾಮಕ್ಕೆ ತೆರಳಿ ಉತ್ತರ ಪ್ರದೇಶದ ಬದಾಯು ಜಿಲ್ಲೆಗೆ ಹಿಂದಿರುಗುತ್ತಿದ್ದ ವೇಳೆ ಪ್ರಯಾಣಿಕರಿದ್ದ ಪಿಕ್‌ಅಪ್ ವಾಹನ ಡಿವೈಡರ್‌ಗೆ ಡಿಕ್ಕಿ ಹೊಡೆದು ಪಲ್ಟಿಯಾಗಿದೆ.

ಖೇಕ್ರಾ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಮಧ್ಯರಾತ್ರಿ ಸುಮಾರು 12.30ರ ವೇಳೆಗೆ ಘಟನೆ ನಡೆದಿದೆ. ಸುಮಾರು 32 ಪ್ರಯಾಣಿಕರಿದ್ದ ವಾಹನ ಅಪಘಾತಕ್ಕೀಡಾದ ಮಾಹಿತಿ ತಿಳಿಯುತ್ತಿದ್ದಂತೆ ಪೊಲೀಸರು ಹಾಗೂ ಅಂಬುಲೆನ್ಸ್ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ರಕ್ಷಣಾ ಕಾರ್ಯಾಚರಣೆ ಕೈಗೊಂಡರು.

ಗಾಯಾಳುಗಳನ್ನು ಖೇಕ್ರಾ ಹಾಗೂ ಭಾಗಪತ್‌ನ ಆರೋಗ್ಯ ಕೇಂದ್ರಗಳಿಗೆ ದಾಖಲಿಸಿ ಚಿಕಿತ್ಸೆ ನೀಡಲಾಗಿದ್ದು, ಗಂಭೀರವಾಗಿ ಗಾಯಗೊಂಡವರನ್ನು ಹೆಚ್ಚಿನ ಚಿಕಿತ್ಸೆಗಾಗಿ ಉನ್ನತ ವೈದ್ಯಕೀಯ ಕೇಂದ್ರಗಳಿಗೆ ರವಾನಿಸಲಾಗಿದೆ. ಮೃತರ ಗುರುತು ಪತ್ತೆ ಕಾರ್ಯ ಮುಂದುವರಿದಿದೆ.

ಅಪಘಾತದ ವೇಳೆ ಬಹುತೇಕ ಪ್ರಯಾಣಿಕರು ನಿದ್ರೆಯಲ್ಲಿದ್ದರು ಎನ್ನಲಾಗಿದೆ. ವಾಹನ ಪಲ್ಟಿಯಾದ ತಕ್ಷಣ ಸ್ಥಳದಲ್ಲಿ ಚೀರಾಟ ಕೇಳಿಬಂದಿದ್ದು, ರಕ್ಷಣಾ ಸಿಬ್ಬಂದಿ ತಕ್ಷಣ ಕಾರ್ಯಾಚರಣೆ ಆರಂಭಿಸಿದರು. ಅಪಘಾತಕ್ಕೆ ನಿಖರ ಕಾರಣ ತಿಳಿಯಲು ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

ಅಪಘಾತದ ಸುದ್ದಿ ತಿಳಿಯುತ್ತಿದ್ದಂತೆ ಸ್ಥಳೀಯರು ಹಾಗೂ ಪೊಲೀಸರು ಸ್ಥಳಕ್ಕೆ ಧಾವಿಸಿ, ಗಾಯಾಳುಗಳನ್ನು ತಕ್ಷಣ ಆಸ್ಪತ್ರೆಗೆ ಸಾಗಿಸಿದರು. ಗಾಯಗೊಂಡವರಲ್ಲಿ ಕೆಲವರ ಸ್ಥಿತಿ ಗಂಭೀರವಾಗಿರುವುದರಿಂದ ಹೆಚ್ಚಿನ ಚಿಕಿತ್ಸೆಗಾಗಿ ಜಿಲ್ಲಾ ಹಾಗೂ ಇತರೆ ಆಸ್ಪತ್ರೆಗಳಿಗೆ ರವಾನಿಸಲಾಗಿದೆ.

ಚಾಲಕನ ನಿಯಂತ್ರಣ ತಪ್ಪಿದ ಪರಿಣಾಮ ವಾಹನ ಡಿವೈಡರ್‌ಗೆ ಡಿಕ್ಕಿಯಾಗಿರಬಹುದು ಎಂದು ಶಂಕಿಸಲಾಗಿದ್ದು, ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರಿಸಿದ್ದಾರೆ. ಘಟನೆಯಿಂದ ಸ್ಥಳದಲ್ಲಿ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಗಿತ್ತು.

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

# ವಿಮಾ ಪರಿಹಾರಕ್ಕೆ 24 ಗಂಟೆ ಆಸ್ಪತ್ರೆ ದಾಖಲಾತಿ ಕಡ್ಡಾಯವಲ್ಲ: ಹೈಕೋರ್ಟ್

**24 ಗಂಟೆ ಆಸ್ಪತ್ರೆಯಲ್ಲಿ ದಾಖಲಾಗಿಲ್ಲ ಎಂಬ ಕಾರಣಕ್ಕೆ ವಿಮಾ ಪರಿಹಾರ ನಿರಾಕರಿಸುವಂತಿಲ್ಲ ಎಂದು ಕರ್ನಾಟಕ ಹೈಕೋರ್ಟ್ ಮಹತ್ವದ ತೀರ್ಪು ನೀಡಿದೆ. ಮಂಗಳೂರಿನ ಕ್ಯಾನ್ಸರ್ ರೋಗಿ ಜಿ. ಪದ್ಮನಾಭ ಶೆಟ್ಟಿ ಅವರಿಗೆ ರೂ 2.85 ಲಕ್ಷ ಚಿಕಿತ್ಸಾ ವೆಚ್ಚವನ್ನು ಬಡ್ಡಿ ಸಹಿತ ಪಾವತಿಸುವಂತೆ ನ್ಯಾಷನಲ್ ಇನ್ಶೂರೆನ್ಸ್ ಕಂಪನಿಗೆ ಆದೇಶಿಸಿರುವ ನ್ಯಾಯಾಲಯ, ಕಾನೂನು ಹೋರಾಟದ ವೆಚ್ಚವಾಗಿ ರೂ 50 ಸಾವಿರ ಪರಿಹಾರ ನೀಡುವಂತೆಯೂ ಸೂಚಿಸಿದೆ.**

● ವಿಕ್ರಮ ವಾಹಿನಿ । ಬೆಂಗಳೂರು

ಆಧುನಿಕ ವೈದ್ಯಕೀಯ ಪದ್ಧತಿಯಲ್ಲಿ ಹಲವು ಚಿಕಿತ್ಸೆಗಳು ಕೆಲವೇ ಗಂಟೆಗಳಲ್ಲಿ ಅಥವಾ ಹೊರರೋಗಿಗಳಾಗಿಯೇ ಪೂರ್ಣಗೊಳ್ಳುತ್ತಿರುವ ಹಿನ್ನೆಲೆಯಲ್ಲಿ, ವಿಮಾ ಪರಿಹಾರ ಪಡೆಯಲು ರೋಗಿ ಕಡ್ಡಾಯವಾಗಿ 24 ಗಂಟೆಗಳ ಕಾಲ ಆಸ್ಪತ್ರೆಯಲ್ಲಿ ದಾಖಲಾಗಿರಬೇಕು ಎಂಬ ಷರತ್ತನ್ನು ಯಾಂತ್ರಿಕವಾಗಿ ಅನ್ವಯಿಸುವಂತಿಲ್ಲ ಎಂದು ಕರ್ನಾಟಕ ಹೈಕೋರ್ಟ್ ಮಹತ್ವದ ತೀರ್ಪು ನೀಡಿದೆ.

ಮಂಗಳೂರಿನ ಪ್ರಾಸ್ಟೇಟ್ ಕ್ಯಾನ್ಸರ್ ಪೀಡಿತ ನಿವೃತ್ತ ವಿಜಯಾ ಬ್ಯಾಂಕ್ ಅಧಿಕಾರಿ ಜಿ. ಪದ್ಮನಾಭ ಶೆಟ್ಟಿ ಅವರಿಗೆ ಚಿಕಿತ್ಸೆಗಾಗಿ ಖರ್ಚಾದ ರೂ 2,85,470 ಮೊತ್ತವನ್ನು ಬಡ್ಡಿ ಸಹಿತ ಪಾವತಿಸುವಂತೆ ನ್ಯಾಷನಲ್ ಇನ್ಶೂರೆನ್ಸ್ ಕಂಪನಿಗೆ ನ್ಯಾಯಾಲಯ ನಿರ್ದೇಶಿಸಿದೆ. ಅಲ್ಲದೆ, ಕಾನೂನು ಹೋರಾಟಕ್ಕೆ ಒಳಗಾದ ವೃದ್ಧ ರೋಗಿಗೆ ರೂ 50,000 ಪರಿಹಾರ ನೀಡುವಂತೆಯೂ ಆದೇಶಿಸಿದೆ.




ವೈದ್ಯರ ಸಲಹೆಯಂತೆ ಪದ್ಮನಾಭ ಶೆಟ್ಟಿ ಅವರು ಪ್ರಾಸ್ಟೇಟ್ ಕ್ಯಾನ್ಸರ್ ಚಿಕಿತ್ಸೆಗೆ 'ಝೋಲಾಡೆಕ್ಸ್' ಮತ್ತು 'ಎಕ್ಸ್‌ಗೀವಾ' ಇಂಜೆಕ್ಷನ್‌ಗಳನ್ನು ಪಡೆದಿದ್ದರು. ಆದರೆ ಈ ಚಿಕಿತ್ಸೆ ಹೊರರೋಗಿಯಾಗಿ ನಡೆದಿದ್ದು, 24 ಗಂಟೆಗಳ ಕಾಲ ಆಸ್ಪತ್ರೆಯಲ್ಲಿ ದಾಖಲಾಗಿಲ್ಲ ಎಂಬ ಕಾರಣ ನೀಡಿ ವಿಮಾ ಕಂಪನಿ ಚಿಕಿತ್ಸಾ ವೆಚ್ಚವನ್ನು ಪಾವತಿಸಲು ನಿರಾಕರಿಸಿತ್ತು.

ಇದನ್ನು ಪ್ರಶ್ನಿಸಿ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸೂರಜ್ ಗೋವಿಂದರಾಜ್ ಅವರ ಏಕಸದಸ್ಯ ಪೀಠ, ವೈದ್ಯರ ಲಿಖಿತ ಸಲಹೆಯಂತೆ ಅಗತ್ಯ ಚಿಕಿತ್ಸೆ ಪಡೆದಿರುವ ಸಂದರ್ಭದಲ್ಲಿ ಕೇವಲ ತಾಂತ್ರಿಕ ಕಾರಣ ಮುಂದಿಟ್ಟು ವಿಮಾ ಪರಿಹಾರ ನಿರಾಕರಿಸುವುದು ಸಮಂಜಸವಲ್ಲ ಎಂದು ಅಭಿಪ್ರಾಯಪಟ್ಟಿದೆ.

ಚಿಕಿತ್ಸಾ ವಿಧಾನಗಳಲ್ಲಿ ಆಗಿರುವ ಬದಲಾವಣೆಗಳನ್ನು ವಿಮಾ ಕಂಪನಿಗಳು ಪರಿಗಣಿಸಬೇಕು ಎಂದು ಸೂಚಿಸಿದ ನ್ಯಾಯಾಲಯ, ಪದ್ಮನಾಭ ಶೆಟ್ಟಿ ಅವರಿಗೆ ನೀಡಬೇಕಾದ ಚಿಕಿತ್ಸಾ ವೆಚ್ಚವನ್ನು ಬಡ್ಡಿ ಸಹಿತ 30 ದಿನಗಳೊಳಗೆ ಪಾವತಿಸುವಂತೆ ನ್ಯಾಷನಲ್ ಇನ್ಶೂರೆನ್ಸ್ ಕಂಪನಿಗೆ ಆದೇಶಿಸಿದೆ. ವೃದ್ಧ ರೋಗಿಯನ್ನು ಪರಿಹಾರಕ್ಕಾಗಿ ನ್ಯಾಯಾಲಯದ ಮೆಟ್ಟಿಲೇರುವಂತೆ ಮಾಡಿದ್ದಕ್ಕೆ ಪೀಠ ಅಸಮಾಧಾನ ವ್ಯಕ್ತಪಡಿಸಿದೆ.

## ಫ್ರಿಡ್ಜ್‌ನಲ್ಲಿ ಮಹಿಳೆಯ ಕತ್ತರಿಸಿದ ತಲೆ ಪತ್ತೆ; ಪತಿ ಪೊಲೀಸರಿಗೆ ಶರಣು

● ವಿಕ್ರಮ ವಾಹಿನಿ । ಗುವಾಹಟಿ (ಅಸ್ಸಾಂ)

ಮನೆಯೊಂದರಲ್ಲಿ ಮಹಿಳೆಯೊಬ್ಬರ ಭಾಗಶಃ ಕೊಳೆತ ಹಾಗೂ ಶಿರಚ್ಛೇದಿತ ಮೃತದೇಹ ಪತ್ತೆಯಾಗಿರುವ ಆಘಾತಕಾರಿ ಘಟನೆ ಅಸ್ಸಾಂನ ಗುವಾಹಟಿಯಲ್ಲಿ ನಡೆದಿದೆ. ಮೃತ ಮಹಿಳೆಯ ಕತ್ತರಿಸಿದ ತಲೆಯನ್ನು ಪಾಲಿಥಿನ್ ಚೀಲದಲ್ಲಿ ಸುತ್ತಿ ಫ್ರಿಡ್ಜ್‌ನಲ್ಲಿ ಇಡಲಾಗಿತ್ತು. ಪ್ರಕರಣಕ್ಕೆ ಸಂಬಂಧಿಸಿದಂತೆ ಆಕೆಯ ಪತಿ ಪೊಲೀಸರ ಮುಂದೆ ಶರಣಾಗಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಮೃತ ಮಹಿಳೆಯನ್ನು ರಿಯಾ ತಾಲೂಕ್ದಾರ್ ಎಂದು ಗುರುತಿಸಲಾಗಿದೆ. ಆಕೆಯ ಪತಿ ರಾಮಾನುಜನ್ ಗೋಸ್ವಾಮಿ ಕ್ಯಾಬ್ ಚಾಲಕರಾಗಿದ್ದು, ಗುವಾಹಟಿಯ ನೂನ್ಮತಿ ನಿವಾಸಿಯಾಗಿದ್ದಾರೆ. ದಂಪತಿ ನಗರದ ಬೆಲ್ತೋಲಾ ಪ್ರದೇಶದ ಅಪಾರ್ಟ್‌ಮೆಂಟ್‌ನಲ್ಲಿ ವಾಸಿಸುತ್ತಿದ್ದರು ಎನ್ನಲಾಗಿದೆ.

**ದುರ್ವಾಸನೆ ಬಂದಿದ್ದರಿಂದ ಪೊಲೀಸರಿಗೆ ಮಾಹಿತಿ**

ಭಾನುವಾರ ರಾತ್ರಿ ಮನೆಯಿಂದ ಭಾರೀ ದುರ್ವಾಸನೆ ಬರುತ್ತಿದೆ ಎಂದು ನೆರೆಹೊರೆಯವರು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಕೂಡಲೇ ಸ್ಥಳಕ್ಕೆ ತೆರಳಿದ ಪೊಲೀಸರು ಮನೆಯನ್ನು ಪರಿಶೀಲಿಸಿದಾಗ ನೆಲದ ಮೇಲೆ ಮಹಿಳೆಯ ಮೃತದೇಹ ಪತ್ತೆಯಾಗಿದೆ. ಮೃತದೇಹದ ಸಮೀಪದಲ್ಲೇ ಫ್ರಿಡ್ಜ್‌ನೊಳಗೆ ಕತ್ತರಿಸಿದ ತಲೆಯೂ ಪತ್ತೆಯಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ವೆಚ್ಚ ನಿಯಂತ್ರಣ, ಸುರಕ್ಷತೆಗೆ ಮೊದಲ ಆದ್ಯತೆ

● ವಿಕ್ರಮ ವಾಹಿನಿ । ನವದೆಹಲಿ

ನಷ್ಟ ಹಾಗೂ ಸುರಕ್ಷತಾ ಸವಾಲು ಎದುರಿಸುತ್ತಿರುವ ಏರ್ ಇಂಡಿಯಾ ಸಂಸ್ಥೆಯಲ್ಲಿ ವೆಚ್ಚ ನಿಯಂತ್ರಣ, ಸುರಕ್ಷತೆ ಮತ್ತು ಕಾರ್ಯಾಚರಣೆಯ ದಕ್ಷತೆಗೆ ಹೆಚ್ಚಿನ ಆದ್ಯತೆ ನೀಡುವಂತೆ ಟಾಟಾ ಸನ್ಸ್ ಅಧ್ಯಕ್ಷ ಹಾಗೂ ಏರ್ ಇಂಡಿಯಾ ಅಧ್ಯಕ್ಷ ಎನ್. ಚಂದ್ರಶೇಖರನ್ ಉದ್ಯೋಗಿಗಳಿಗೆ ಸೂಚಿಸಿದ್ದಾರೆ.

ಸೋಮವಾರ ನಡೆದ ಸಭೆಯಲ್ಲಿ ಸುಮಾರು 24 ಸಾವಿರ ಸಿಬ್ಬಂದಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಕಳೆದ 18 ತಿಂಗಳಲ್ಲಿ ಜಾಗತಿಕ ಸಂಘರ್ಷ, ವೈಮಾನಿಕ ಮಾರ್ಗಗಳ ಸ್ಥಗಿತ, ಇಂಧನ ಬೆಲೆ ಏರಿಕೆ ಹಾಗೂ ಸುರಕ್ಷತಾ ಕಾಳಜಿಗಳಿಂದ ಸಂಸ್ಥೆ ಹಲವು ಸವಾಲು ಎದುರಿಸಿದೆ ಎಂದರು.

ಕಳಪೆ ಸೇವೆ ಹಾಗೂ ಕಳೆದ ಜೂನ್‌ನಲ್ಲಿ ಸಂಭವಿಸಿದ ಎಐ–171 ವಿಮಾನ ಅಪಘಾತದಿಂದ ಗ್ರಾಹಕರ ನಂಬಿಕೆಗೆ ಧಕ್ಕೆಯಾಗಿದೆ. ಅದನ್ನು ಮರಳಿ ಗಳಿಸುವುದು ಪ್ರಮುಖ ಗುರಿಯಾಗಬೇಕು ಎಂದು ಹೇಳಿದರು.

**ರೂ 22 ಸಾವಿರ ಕೋಟಿ ನಷ್ಟ**

ಏರ್ ಇಂಡಿಯಾ ಕಳೆದ ಹಣಕಾಸು ವರ್ಷದಲ್ಲಿ ಸುಮಾರು ರೂ 22,000 ಕೋಟಿ ನಷ್ಟ ಅನುಭವಿಸಿದ್ದು, ರೂ 40,000 ಕೋಟಿಗೂ ಅಧಿಕ ಸಾಲದ ಹೊರೆ ಹೊಂದಿದೆ ಎಂದು ವರದಿಯಾಗಿದೆ. ಸಂಸ್ಥೆಯ ಆರ್ಥಿಕ ಸ್ಥಿತಿ ಸುಧಾರಿಸಲು ಟಾಟಾ ಸನ್ಸ್ ರೂ 10,000 ಕೋಟಿಗೂ ಅಧಿಕ ಹೊಸ ಹೂಡಿಕೆಗೆ ಅನುಮೋದನೆ ನೀಡಿದೆ.

ಸಭೆಯಲ್ಲಿ ಏರ್ ಇಂಡಿಯಾದ ನೂತನ ಸಿಇಒ ಹಾಗೂ ವ್ಯವಸ್ಥಾಪಕ ನಿರ್ದೇಶಕಿ ಟೆವೊಲ್ಡೆ ಗೆಬ್ರೆಮರಿಯಮ್ ಅವರನ್ನು ಸಿಬ್ಬಂದಿಗೆ ಪರಿಚಯಿಸಲಾಯಿತು.

## 'ಹುಚ್ಚ' ಎಂದವರ ಎದುರೇ ನದಿಗಿಳಿದು ಸ್ವಚ್ಛಗೊಳಿಸಿದ 20ರ ಯುವಕ

● ವಿಕ್ರಮ ವಾಹಿನಿ । ಭೋಪಾಲ್

*ಕಲುಷಿತಗೊಂಡಿದ್ದ ನದಿಯನ್ನು ಸ್ವಚ್ಛಗೊಳಿಸುವ ಮೂಲಕ ಮಧ್ಯಪ್ರದೇಶದ ರಾಜ್‌ಗಢ ಜಿಲ್ಲೆಯ ಬ್ಯಾವರಾ ಪಟ್ಟಣದ 20 ವರ್ಷದ ಯುವಕ ಸುರೇಂದ್ರ ಸಿಂಗ್ ಚೌಧರಿ ದೇಶದ ಗಮನ ಸೆಳೆದಿದ್ದಾರೆ. ಅವರ ಪರಿಸರ ಕಾಳಜಿಗೆ ಕೈಗಾರಿಕೋದ್ಯಮಿ ಆನಂದ್ ಮಹೀಂದ್ರಾ ಸೇರಿದಂತೆ ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕ ಮೆಚ್ಚುಗೆ ವ್ಯಕ್ತವಾಗಿದೆ.*

*ಕಳೆದ ಹಲವು ವರ್ಷಗಳಿಂದ ಪ್ಲಾಸ್ಟಿಕ್, ಕಸದ ರಾಶಿ ಹಾಗೂ ಪಾಚಿಯಿಂದ ಮಲಿನಗೊಂಡಿದ್ದ ಅಜ್ನಾರ್ ನದಿಯ ಸ್ಥಿತಿ ಕಂಡು ಮರುಗಿದ ಬಿಎಸ್‌ಸಿ ವಿದ್ಯಾರ್ಥಿ ಸುರೇಂದ್ರ, ಯಾವುದೇ ಸರ್ಕಾರಿ ನೆರವು ಅಥವಾ ಯಂತ್ರಗಳಿಗಾಗಿ ಕಾಯದೆ ಸ್ವತಃ ನದಿಗಿಳಿದು ಸ್ವಚ್ಛತಾ ಕಾರ್ಯ ಆರಂಭಿಸಿದರು. ಆರಂಭದಲ್ಲಿ ಯಂತ್ರ ಬಳಸಲು ಮುಂದಾದರೂ ಹಣದ ಕೊರತೆಯಿಂದ ಬರಿಗೈಯಲ್ಲೇ ಕಸ ತೆರವುಗೊಳಿಸಲು ಆರಂಭಿಸಿದರು.*

*ನದಿಯಿಂದ ಪ್ಲಾಸ್ಟಿಕ್ ಹಾಗೂ ಇತರ ತ್ಯಾಜ್ಯವನ್ನು ತೆರವುಗೊಳಿಸುವ ಜತೆಗೆ, ಸಂಗ್ರಹಿಸಿದ ತ್ಯಾಜ್ಯದಿಂದ ಗೊಬ್ಬರ ತಯಾರಿಸುವ ಕಾರ್ಯಕ್ಕೂ ಮುಂದಾದರು. ಸ್ವಚ್ಛತಾ ಕಾರ್ಯಕ್ಕೆ ಸ್ವಂತವಾಗಿ ಸುಮಾರು 30 ಸಾವಿರ ಖರ್ಚು ಮಾಡಿ ಉಪಕರಣಗಳು ಹಾಗೂ ಕಸದ ಬುಟ್ಟಿಗಳನ್ನು ಖರೀದಿಸಿದ್ದಾರೆ.*




*ಸುರೇಂದ್ರ ಅವರ ಕಾರ್ಯವನ್ನು ಕೆಲವರು ಆರಂಭದಲ್ಲಿ ಟೀಕಿಸಿದ್ದರೂ, ಅವರು ತಮ್ಮ ಪ್ರಯತ್ನವನ್ನು ನಿಲ್ಲಿಸಲಿಲ್ಲ. ಸಾಮಾಜಿಕ ಮಾಧ್ಯಮದಲ್ಲಿ ಅವರ ಕಾರ್ಯದ ವಿಡಿಯೊಗಳು ವೈರಲ್ ಆಗಿದ್ದು, ಪರಿಸರ ಸಂರಕ್ಷಣೆಯ ಬಗ್ಗೆ ಯುವಜನರಿಗೆ ಮಾದರಿಯಾಗಿದ್ದಾರೆ. 'ಬಿಟ್ಟು ತಬಾಹಿ' ಎಂಬ ಹೆಸರಿನಿಂದ ಸಾಮಾಜಿಕ ಜಾಲತಾಣಗಳಲ್ಲಿ ಗುರುತಿಸಿಕೊಂಡಿರುವ ಸುರೇಂದ್ರ ಅವರ ನಿರಂತರ ಪ್ರಯತ್ನಕ್ಕೆ ಇದೀಗ ವ್ಯಾಪಕ ಪ್ರಶಂಸೆ ವ್ಯಕ್ತವಾಗಿದೆ.*

*ಸುರೇಂದ್ರ ಅವರ ಸ್ವಚ್ಛತಾ ಕಾರ್ಯಕ್ಕೆ ಸ್ಥಳೀಯರಿಂದಲೂ ಬೆಂಬಲ ವ್ಯಕ್ತವಾಗಿದ್ದು, ನದಿಯನ್ನು ಮತ್ತೆ ಸ್ವಚ್ಛ ಹಾಗೂ ಬಳಕೆಗೆ ಯೋಗ್ಯವಾಗಿಸುವ ನಿಟ್ಟಿನಲ್ಲಿ ಅವರ ಪ್ರಯತ್ನ ಮುಂದುವರಿದಿದೆ. ನದಿಗೆ ಕಸ ಎಸೆಯದಂತೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಕಾರ್ಯವನ್ನೂ ಅವರು ಕೈಗೊಂಡಿದ್ದಾರೆ.*

*ನದಿ ಸ್ವಚ್ಛತೆಯ ಜತೆಗೆ ಪರಿಸರ ಸಂರಕ್ಷಣೆ, ತ್ಯಾಜ್ಯ ವಿಂಗಡಣೆ ಹಾಗೂ ಮರುಬಳಕೆಯ ಮಹತ್ವದ ಕುರಿತು ಜನರಲ್ಲಿ ಅರಿವು ಮೂಡಿಸುವುದು ತಮ್ಮ ಉದ್ದೇಶ ಎಂದು ಸುರೇಂದ್ರ ಹೇಳಿದ್ದಾರೆ. ಒಬ್ಬ ವ್ಯಕ್ತಿಯ ದೃಢ ಸಂಕಲ್ಪವೂ ದೊಡ್ಡ ಬದಲಾವಣೆಗೆ ಕಾರಣವಾಗಬಹುದು ಎಂಬ ಸಂದೇಶವನ್ನು ಅವರ ಕಾರ್ಯ ಸಾರಿದೆ.*

## ಎರಡು ಹೋಟೇಲ್‌ಗಳಿಗೆ ಬೀಗ; ಕೃತಕ ಬಣ್ಣ, ಹಳಸಿದ ಆಹಾರ ಪತ್ತೆ



● ವಿಕ್ರಮ ವಾಹಿನಿ । ಚಾಮರಾಜನಗರ

ಅವಧಿ ಮೀರಿದ ಆಹಾರ ಪದಾರ್ಥಗಳ ಬಳಕೆ, ಕೃತಕ ಬಣ್ಣದ ಮಿಶ್ರಣ ಹಾಗೂ ಸ್ವಚ್ಛತೆ ಕೊರತೆ ವಿರುದ್ಧ ಚಾಮರಾಜನಗರ ಜಿಲ್ಲಾಡಳಿತ ಕಾರ್ಯಾಚರಣೆ ನಡೆಸಿದೆ. ಜಿಲ್ಲಾಧಿಕಾರಿ ಶ್ರೀರೂಪಾ ನೇತೃತ್ವದಲ್ಲಿ ನಗರದ ವಿವಿಧ ಹೊಟೇಲ್, ರೆಸ್ಟೋರೆಂಟ್‌ಗಳು ಹಾಗೂ ಆಹಾರ ತಯಾರಿಕಾ ಘಟಕಗಳ ಮೇಲೆ ದಿಢೀರ್ ತಪಾಸಣೆ ನಡೆಸಲಾಯಿತು.

ತಪಾಸಣೆ ವೇಳೆ ಉಡುಪಿ ಗ್ರ್ಯಾಂಡ್ ಹೊಟೇಲ್‌ನಲ್ಲಿ ಆಹಾರ ಪದಾರ್ಥಗಳಿಗೆ ಕೃತಕ ಬಣ್ಣ ಬಳಸಿರುವುದು, ಅಡುಗೆಮನೆಯಲ್ಲಿ ಸ್ವಚ್ಛತೆ ಕೊರತೆ ಹಾಗೂ ಅವಧಿ ಮೀರಿದ ಆಹಾರ ಪದಾರ್ಥಗಳ ಬಳಕೆ ಪತ್ತೆಯಾಗಿದೆ. ಮಕಾವ್ ಹೊಟೇಲ್‌ನಲ್ಲಿ ತಾಜಾತನ ಕಳೆದುಕೊಂಡ ಮಾಂಸ ಹಾಗೂ ಮಶ್ರೂಮ್‌ಗಳನ್ನು ಬಳಸುತ್ತಿರುವುದು ಕಂಡುಬಂದ ಹಿನ್ನೆಲೆಯಲ್ಲಿ ಎರಡೂ ಹೊಟೇಲ್‌ಗಳನ್ನು ತಾತ್ಕಾಲಿಕವಾಗಿ ಮುಚ್ಚುವಂತೆ ಜಿಲ್ಲಾಧಿಕಾರಿ ಆದೇಶಿಸಿದ್ದಾರೆ.

ಕೈಗಾರಿಕಾ ಪ್ರದೇಶದಲ್ಲಿರುವ ಕೇನ್ಸ್ ಹಾಗೂ ಕಲರ್ ಟೋನ್ ಸಂಸ್ಥೆಗಳಲ್ಲೂ ಆಹಾರ ತಯಾರಿಕೆ ಮತ್ತು ಗುಣಮಟ್ಟದ ಕುರಿತು ಪರಿಶೀಲನೆ ನಡೆಸಲಾಯಿತು. ನಗರದ ರಸ್ತೆ ಬದಿಯ ಬೇಕರಿಗಳಿಗೂ ಭೇಟಿ ನೀಡಿದ ಅಧಿಕಾರಿಗಳು ಆಹಾರ ಪದಾರ್ಥಗಳ ಗುಣಮಟ್ಟ, ಸ್ವಚ್ಛತೆ ಹಾಗೂ ಅವಧಿಯನ್ನು ಪರಿಶೀಲಿಸಿದರು.

ಆಹಾರ ಸುರಕ್ಷತಾ ನಿಯಮ ಉಲ್ಲಂಘಿಸುವ ಸಂಸ್ಥೆಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು. ಸಾರ್ವಜನಿಕರ ಆರೋಗ್ಯದ ವಿಚಾರದಲ್ಲಿ ಯಾವುದೇ ರಾಜಿ ಇಲ್ಲ ಎಂದು ಜಿಲ್ಲಾಡಳಿತ ಸ್ಪಷ್ಟಪಡಿಸಿದ್ದು, ಮುಂದಿನ ದಿನಗಳಲ್ಲೂ ದಿಢೀರ್ ತಪಾಸಣೆ ಮುಂದುವರಿಸುವುದಾಗಿ ತಿಳಿಸಿದೆ.

# ಯುವಶಕ್ತಿಯೇ ಭಾರತದ ಭವಿಷ್ಯ: ವಿಜಯೇಂದ್ರ

● ವಿಕ್ರಮ ವಾಹಿನಿ । ಬಳ್ಳಾರಿ/ ಕಂಪ್ಲಿ

ಭಾರತದ ಯುವಜನತೆಯನ್ನು ಸರಿಯಾದ ಶಿಕ್ಷಣ, ಕೌಶಲ್ಯ ಮತ್ತು ಉದ್ಯೋಗದೊಂದಿಗೆ ಸಜ್ಜುಗೊಳಿಸಿದರೆ ಯುವಶಕ್ತಿಯೇ ದೇಶದ ಅತಿದೊಡ್ಡ ಆಸ್ತಿಯಾಗಲಿದೆ. ಆದರೆ ಈ ಶಕ್ತಿಯನ್ನು ಸರಿಯಾದ ದಿಕ್ಕಿನಲ್ಲಿ ಬಳಸಲು ವಿಫಲವಾದರೆ ಅದೇ ಜನಸಂಖ್ಯಾ ಲಾಭಾಂಶ ಸಾಮಾಜಿಕ ಸಮಸ್ಯೆಯಾಗಿ ಪರಿಣಮಿಸಬಹುದು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದರು.

ಯುವಜನತೆ, ಉದ್ಯೋಗ, ಶಿಕ್ಷಣ, ಏಕಖಅ ಸುಧಾರಣೆ, ಕೃತಕ ಬುದ್ಧಿಮತ್ತೆ (AI) ಹಾಗೂ ಕಲ್ಯಾಣ ಕರ್ನಾಟಕದ ಸಮಗ್ರ ಅಭಿವೃದ್ಧಿ ಕುರಿತು ಯುವಕರೊಂದಿಗೆ ನಡೆದ ಮುಕ್ತ ಸಂವಾದದಲ್ಲಿ ಅವರು ಮಾತನಾಡಿದರು.

ಭಾರತದಲ್ಲಿ 35 ವರ್ಷಕ್ಕಿಂತ ಕಡಿಮೆ ವಯಸ್ಸಿನವರು ಸುಮಾರು ಶೇ.65ರಷ್ಟಿದ್ದು, 2047ರೊಳಗೆ ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ರೂಪಿಸುವ ಗುರಿಯಲ್ಲಿ ಯುವಶಕ್ತಿಯ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಯುವಕರನ್ನು ಕೇವಲ ಉದ್ಯೋಗ ಹುಡುಕುವವರನ್ನಾಗಿ ಮಾಡುವ ಬದಲು ಉದ್ಯೋಗ ಸೃಷ್ಟಿಸುವ ಉದ್ಯಮಿಗಳು ಮತ್ತು ಉದ್ಯೋಗದಾತರನ್ನಾಗಿ ರೂಪಿಸುವ ಅಗತ್ಯವಿದೆ ಎಂದರು.

**KPSCಗೆ ಹೊಸ ಕಾಯಕಲ್ಪ ಅಗತ್ಯ**

KPSC ನೇಮಕಾತಿ ಪ್ರಕ್ರಿಯೆಯಲ್ಲಿ ಅಧಿಸೂಚನೆ, ಪರೀಕ್ಷೆ, ಫಲಿತಾಂಶ ಮತ್ತು ಸಂದರ್ಶನ ಸೇರಿದಂತೆ ಪ್ರತಿಯೊಂದು ಹಂತದಲ್ಲೂ ವರ್ಷಗಳ ವಿಳಂಬವಾಗುತ್ತಿರುವುದು ಯುವಕರಲ್ಲಿ ತೀವ್ರ ಅಸಮಾಧಾನಕ್ಕೆ ಕಾರಣವಾಗಿದೆ. ನಾಲ್ಕೈದು ವರ್ಷಗಳ ಕಾಲ ತರಬೇತಿ ಪಡೆದು ನೇಮಕಾತಿಗಾಗಿ ಕಾಯುತ್ತಿರುವ ಲಕ್ಷಾಂತರ ಅಭ್ಯರ್ಥಿಗಳ ಭವಿಷ್ಯದ ಬಗ್ಗೆ ಸರ್ಕಾರ ಗಂಭೀರವಾಗಿ ಯೋಚಿಸಬೇಕು ಎಂದು ವಿಜಯೇಂದ್ರ ಹೇಳಿದರು.

KPSC ಸ್ವಾಯತ್ತ ಸಂಸ್ಥೆ ಎಂಬ ಕಾರಣಕ್ಕೆ ರಾಜ್ಯ ಸರ್ಕಾರ ತನ್ನ ಹೊಣೆಗಾರಿಕೆಯಿಂದ ಹಿಂದೆ ಸರಿಯಬಾರದು. ನೇಮಕಾತಿ ಪ್ರಕ್ರಿಯೆಯಲ್ಲಿ ಆಗುತ್ತಿರುವ ವಿಳಂಬದಿಂದ ಸಂಸ್ಥೆಯ ಮೇಲಿನ ವಿಶ್ವಾಸಾರ್ಹತೆ ಕುಗ್ಗಿದ್ದು, ಏಕಖಅಗೆ ಹೊಸ ಕಾಯಕಲ್ಪ ನೀಡುವ ಅಗತ್ಯವಿದೆ ಎಂದರು.

ಮುಂದಿನ ದಿನಗಳಲ್ಲಿ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದರೆ ಏಕಖಅ ಸುಧಾರಣೆ ಹಾಗೂ ಸರ್ಕಾರಿ ನೇಮಕಾತಿ ಪ್ರಕ್ರಿಯೆಗೆ ತ್ವರಿತ ಚಾಲನೆ ನೀಡುವುದು ಪ್ರಮುಖ ಆದ್ಯತೆಗಳಲ್ಲಿ ಒಂದಾಗಲಿದೆ ಎಂದು ಭರವಸೆ ನೀಡಿದರು.

**ಸರ್ಕಾರಿ ಶಾಲೆಗಳಿಗೆ ಪುನಶ್ಚೇತನ**

ಗ್ರಾಮೀಣ ಭಾಗದ ಸರ್ಕಾರಿ ಶಾಲೆಗಳಿಗೆ ಉತ್ತಮ ಮೂಲಸೌಕರ್ಯ, ಗುಣಮಟ್ಟದ ಶಿಕ್ಷಕರು ಮತ್ತು ಪರಿಣಾಮಕಾರಿ ಶಾಲಾ ನಾಯಕತ್ವ ಒದಗಿಸುವುದು ಅತ್ಯಗತ್ಯ. ಶಿಕ್ಷಕರ ಬದ್ಧತೆ ಮತ್ತು ಉತ್ತಮ ನಾಯಕತ್ವವಿದ್ದರೆ ಸರ್ಕಾರಿ ಶಾಲೆಗಳಲ್ಲಿಯೂ ವಿದ್ಯಾರ್ಥಿಗಳ ಸಂಖ್ಯೆ ಮತ್ತು ಫಲಿತಾಂಶವನ್ನು ಗಣನೀಯವಾಗಿ ಹೆಚ್ಚಿಸಬಹುದು ಎಂದರು.

ಶಿಕಾರಿಪುರದ ಸರ್ಕಾರಿ ಶಾಲೆಯೊಂದರಲ್ಲಿ ಎರಡು ವರ್ಷಗಳ ಹಿಂದೆ ಕೇವಲ 25 ವಿದ್ಯಾರ್ಥಿಗಳಿದ್ದ ಸಂದರ್ಭದಲ್ಲಿ ಉತ್ತಮ ಪ್ರಾಂಶುಪಾಲರು ಮತ್ತು ಶಿಕ್ಷಕರ ನೇಮಕದ ಬಳಿಕ ವಿದ್ಯಾರ್ಥಿಗಳ ಸಂಖ್ಯೆ 250ಕ್ಕೂ ಅಧಿಕವಾಗಿರುವ ಉದಾಹರಣೆಯನ್ನು ನೀಡಿದ ವಿಜಯೇಂದ್ರ, ಸರ್ಕಾರಿ ಶಾಲೆಗಳ ಬಗ್ಗೆ ಪೋಷಕರ ವಿಶ್ವಾಸವನ್ನು ಮರುಸ್ಥಾಪಿಸುವುದು ಸಾಧ್ಯ ಎಂದು ಹೇಳಿದರು.

ಗ್ರಾಮೀಣ ಮಕ್ಕಳಿಗೆ ನಗರಗಳಿಗೆ ವಲಸೆ ಹೋಗುವ ಅನಿವಾರ್ಯತೆ ಇಲ್ಲದಂತೆ ಶಿಕ್ಷಣ, ಆರೋಗ್ಯ ಮತ್ತು ಮೂಲಸೌಕರ್ಯವನ್ನು ಅವರ ಮನೆಬಾಗಿಲಲ್ಲೇ ಒದಗಿಸುವುದು ಸರ್ಕಾರದ ಜವಾಬ್ದಾರಿ ಎಂದರು.

**ಕಲ್ಯಾಣ ಕರ್ನಾಟಕಕ್ಕೆ ವಿಶೇಷ ಆದ್ಯತೆ**

ಬೆಂಗಳೂರು ಅಭಿವೃದ್ಧಿಯನ್ನೇ ಕರ್ನಾಟಕದ ಅಭಿವೃದ್ಧಿ ಎಂದು ಪರಿಗಣಿಸುವ ಮನೋಭಾವ ಬದಲಾಗಬೇಕು. ಕರ್ನಾಟಕದ ಪ್ರತಿಯೊಂದು ಭಾಗವೂ ಸಮಾನವಾಗಿ ಅಭಿವೃದ್ಧಿಯಾದಾಗ ಮಾತ್ರ ಸಮಗ್ರ ಕರ್ನಾಟಕ ನಿರ್ಮಾಣ ಸಾಧ್ಯ ಎಂದು ವಿಜಯೇಂದ್ರ ಹೇಳಿದರು.

ಕಲ್ಯಾಣ ಕರ್ನಾಟಕದ ಹಲವು ಗ್ರಾಮಗಳಲ್ಲಿ ಕುಡಿಯುವ ನೀರಿಗಾಗಿ ಜನರು 3–4 ಕಿಲೋಮೀಟರ್ ನಡೆದು ಹೋಗುವ ಪರಿಸ್ಥಿತಿ, ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆ ಹಾಗೂ ಶಾಲೆಗಳಲ್ಲಿ ಶಿಕ್ಷಕರ ಕೊರತೆ ಇನ್ನೂ ಇದೆ. ರಾಯಚೂರು, ಯಾದಗಿರಿ, ಕೊಪ್ಪಳ ಮತ್ತು ಕಲಬುರಗಿ ಭಾಗಗಳಿಂದ ಯುವಕರ ವಲಸೆ ಹೆಚ್ಚುತ್ತಿರುವುದಕ್ಕೆ ಶಿಕ್ಷಣ, ಕೈಗಾರಿಕೆ ಮತ್ತು ಉದ್ಯೋಗದ ಕೊರತೆಯೂ ಪ್ರಮುಖ ಕಾರಣವಾಗಿದೆ ಎಂದರು.

ಕಲ್ಯಾಣ ಕರ್ನಾಟಕಕ್ಕೆ ಸಮರ್ಪಕ ಬಜೆಟ್, ನೀರಾವರಿ ಯೋಜನೆಗಳು, ಉತ್ತಮ ಶಿಕ್ಷಣ ಸಂಸ್ಥೆಗಳು, ಆರೋಗ್ಯ ಸೇವೆಗಳು ಹಾಗೂ ಕೈಗಾರಿಕೆಗಳನ್ನು ಒದಗಿಸಬೇಕು. ಅನುದಾನ ನೀಡುವುದಷ್ಟೇ ಸಾಲದು; ಅದರ ಬಳಕೆಯಲ್ಲಿ ಪಾರದರ್ಶಕತೆ ಮತ್ತು ಹೊಣೆಗಾರಿಕೆಯೂ ಇರಬೇಕು ಎಂದು ಹೇಳಿದರು.

**AI ಉದ್ಯೋಗ ಕಸಿಯುವುದಕ್ಕಿಂತ ಹೊಸ ಅವಕಾಶಗಳನ್ನು ಸೃಷ್ಟಿಸಲಿದೆ**

ಕೃತಕ ಬುದ್ಧಿಮತ್ತೆ ಹಾಗೂ Automationನಿಂದ ಉದ್ಯೋಗಗಳು ಕಡಿಮೆಯಾಗುವ ಆತಂಕದ ಕುರಿತು ಯುವಕರು ಕೇಳಿದ ಪ್ರಶ್ನೆಗೆ ಉತ್ತರಿಸಿದ ವಿಜಯೇಂದ್ರ, ತಂತ್ರಜ್ಞಾನ ಬದಲಾವಣೆ ಹೊಸ ಸವಾಲುಗಳ ಜೊತೆಗೆ ಹೊಸ ಅವಕಾಶಗಳನ್ನೂ ಸೃಷ್ಟಿಸುತ್ತದೆ ಎಂದರು.

1990ರ ದಶಕದಲ್ಲಿ ಕಂಪ್ಯೂಟರ್ ಬಂದಾಗಲೂ ಉದ್ಯೋಗ ನಷ್ಟದ ಭೀತಿ ಇತ್ತು. ಆದರೆ ನಂತರ ಹೊಸ ಉದ್ಯೋಗ ಕ್ಷೇತ್ರಗಳು ಸೃಷ್ಟಿಯಾದವು. AI ಕೆಲವು ಸಾಂಪ್ರದಾಯಿಕ ಉದ್ಯೋಗಗಳನ್ನು ಬದಲಾಯಿಸಬಹುದು; ಅದೇ ಸಂದರ್ಭದಲ್ಲಿ ಹೊಸ ಉದ್ಯೋಗಗಳಿಗೂ ದಾರಿ ಮಾಡಿಕೊಡಲಿದೆ. ಆದ್ದರಿಂದ ಯುವಕರು ಭಯಪಡುವ ಬದಲು ಣಥಿಇಟಟುಟಿರ ಮತ್ತು ಹೊಸ ತಾಂತ್ರಿಕ ಕೌಶಲ್ಯಗಳನ್ನು ಬೆಳೆಸಿಕೊಳ್ಳಬೇಕು ಎಂದರು.

**ಗ್ರಾಮೀಣ ವಿದ್ಯಾರ್ಥಿಗಳಿಗೆ ಸೈಕಲ್ ಯೋಜನೆ ಮರುಜಾರಿ**

ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು, ವಿಶೇಷವಾಗಿ ಹೆಣ್ಣುಮಕ್ಕಳು, ಶಾಲಾ–ಕಾಲೇಜುಗಳಿಗೆ ದೂರ ಪ್ರಯಾಣಿಸುವ ಸಮಸ್ಯೆಯನ್ನು ಗಮನದಲ್ಲಿಟ್ಟುಕೊಂಡು ಸೈಕಲ್ ಯೋಜನೆಯ ಅಗತ್ಯವಿದೆ ಎಂಬ ಯುವಕರ ಸಲಹೆಗೆ ವಿಜಯೇಂದ್ರ ಸ್ಪಂದಿಸಿದರು.

ಹಿಂದೆ ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ ಸೈಕಲ್, ನೋಟ್‌ಬುಕ್ ಮತ್ತು ಬ್ಯಾಗ್ ಸೇರಿದಂತೆ ಹಲವು ಸೌಲಭ್ಯಗಳನ್ನು ನೀಡಲಾಗುತ್ತಿತ್ತು. ಇಂತಹ ವಿದ್ಯಾರ್ಥಿ ಕಲ್ಯಾಣ ಕಾರ್ಯಕ್ರಮಗಳನ್ನು ಬಲಪಡಿಸುವ ಅಗತ್ಯವಿದೆ. ಬಿಜೆಪಿ ಸರ್ಕಾರ ಮತ್ತೆ ಅಧಿಕಾರಕ್ಕೆ ಬಂದರೆ ವಿದ್ಯಾರ್ಥಿ ಕಲ್ಯಾಣ ಕಾರ್ಯಕ್ರಮಗಳಿಗೆ ಆದ್ಯತೆ ನೀಡಲಾಗುವುದು ಎಂದರು.

**ಪ್ರವಾಸೋದ್ಯಮದಿಂದ ಉತ್ತರ ಕರ್ನಾಟಕದಲ್ಲಿ ಉದ್ಯೋಗ ಸೃಷ್ಟಿ**

IT-BT ಕ್ಷೇತ್ರಗಳ ಹೊರತಾಗಿಯೂ ಕರ್ನಾಟಕದಲ್ಲಿ ಯುವಕರಿಗೆ ದೊಡ್ಡ ಪ್ರಮಾಣದ ಉದ್ಯೋಗಾವಕಾಶಗಳನ್ನು ಸೃಷ್ಟಿಸಬಹುದು. ಬಳ್ಳಾರಿ, ಕೊಪ್ಪಳ ಸೇರಿದಂತೆ ಉತ್ತರ ಕರ್ನಾಟಕದ ಐತಿಹಾಸಿಕ, ಸಾಂಸ್ಕೃತಿಕ ಮತ್ತು ನೈಸರ್ಗಿಕ ಸಂಪತ್ತನ್ನು ಪ್ರವಾಸೋದ್ಯಮದೊಂದಿಗೆ ಜೋಡಿಸಬೇಕು ಎಂದು ವಿಜಯೇಂದ್ರ ಹೇಳಿದರು.

ಕೇರಳದ ಪ್ರವಾಸೋದ್ಯಮ ಅಭಿವೃದ್ಧಿ ಮಾದರಿಯಿಂದ ಕರ್ನಾಟಕ ಪಾಠ ಕಲಿಯಬೇಕು. ಪ್ರವಾಸೋದ್ಯಮವನ್ನು ಒಂದೆರಡು ವರ್ಷಗಳ ಯೋಜನೆಯಾಗಿ ನೋಡದೆ 5, 10 ಅಥವಾ 15 ವರ್ಷಗಳ ದೀರ್ಘಕಾಲಿಕ ಯೋಜನೆಯಾಗಿ ರೂಪಿಸಬೇಕು. ಐತಿಹಾಸಿಕ ಸ್ಥಳಗಳಿಗೆ ಮೂಲಸೌಕರ್ಯ, ಪ್ರವಾಸಿಗರ ಸೌಲಭ್ಯ ಮತ್ತು ಜಾಗತಿಕ ಮಟ್ಟದ ಮಾರುಕಟ್ಟೆ ವ್ಯವಸ್ಥೆ ಕಲ್ಪಿಸಿದರೆ ಗ್ರಾಮೀಣ ಪ್ರದೇಶದಲ್ಲೇ ಉದ್ಯೋಗ ಮತ್ತು ಸ್ವಯಂ ಉದ್ಯೋಗದ ದೊಡ್ಡ ಅವಕಾಶಗಳನ್ನು ಸೃಷ್ಟಿಸಬಹುದು ಎಂದರು.

**ಯುವಕರು ರಾಜಕೀಯಕ್ಕೂ ಬರಬೇಕು**

ಯುವಕರಿಗೆ ತಾತ್ಕಾಲಿಕ ರಾಜಕೀಯ ಆಕರ್ಷಣೆಗಳಿಗಿಂತ ಜೀವನಪೂರ್ತಿ ಉಪಯೋಗವಾಗುವ ಶಿಕ್ಷಣ, ಕೌಶಲ್ಯ, ಉದ್ಯೋಗ ಮತ್ತು ಸ್ವಾಭಿಮಾನಿ ಬದುಕಿನ ಅವಕಾಶಗಳನ್ನು ಕಲ್ಪಿಸುವುದು ಮುಖ್ಯ. ರಾಜಕೀಯ ಕ್ಷೇತ್ರವು ಸಾಮಾಜಿಕ ಸೇವೆ ಮತ್ತು ವ್ಯವಸ್ಥಾತ್ಮಕ ಬದಲಾವಣೆಗೆ ಪರಿಣಾಮಕಾರಿ ವೇದಿಕೆಯಾಗಿದ್ದು, ಇಂಜಿನಿಯರ್, ವೈದ್ಯ, ಖಂಖ, ಖಕಖ ಆಗುವ ಕನಸು ಕಾಣುವ ಯುವಕರು ರಾಜಕೀಯ ಕ್ಷೇತ್ರಕ್ಕೂ ಬರಬೇಕು ಎಂದು ವಿಜಯೇಂದ್ರ ಕರೆ ನೀಡಿದರು.

ಯುವಕರು ಅನ್ಯಾಯವನ್ನು ಪ್ರಶ್ನಿಸುವ ಮನೋಭಾವ ಬೆಳೆಸಿಕೊಳ್ಳಬೇಕು. ಪ್ರಶ್ನಿಸುವ, ಹೋರಾಡುವ ಮತ್ತು ಬದಲಾವಣೆ ತರುವ ಯುವಶಕ್ತಿಯೇ ಅಭಿವೃದ್ಧಿ ಹೊಂದಿದ ಕರ್ನಾಟಕ ಹಾಗೂ ವಿಕಸಿತ ಭಾರತದ ನಿರ್ಮಾಣಕ್ಕೆ ಪ್ರಮುಖ ಶಕ್ತಿಯಾಗಲಿದೆ ಎಂದು ವಿಜಯೇಂದ್ರ ಹೇಳಿದರು.

## 'ಬಿಜೆಪಿ ಪಾದಯಾತ್ರೆ– ಇದು ಜನಮನ ಪಾದಯಾತ್ರೆ'

● ವಿಕ್ರಮ ವಾಹಿನಿ । ಕಂಪ್ಲಿ

'ಬಿಜೆಪಿಯ ಪಾದಯಾತ್ರೆ– ಇದು ಜನಮನ ಪಾದಯಾತ್ರೆ' ಹಾಡಿನ ಜೊತೆಗೆ ವಿವಿಧ ಹಾಡಿನೊಂದಿಗೆ ಇಂದು ಇಲ್ಲಿಂದ ಬಳ್ಳಾರಿ ಪಾದಯಾತ್ರೆ ಮುಂದೆ ಸಾಗಿತು.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರ ನೇತೃತ್ವದಲ್ಲಿ ಪಾದಯಾತ್ರೆ ಮುಂದುವರೆಯುತ್ತಿದೆ. ಕಾನೂನು– ಸುವ್ಯವಸ್ಥೆ ವಿಚಾರದಲ್ಲಿ ಕಾಂಗ್ರೆಸ್ ಸರಕಾರದ ವೈಫಲ್ಯವನ್ನು ಖಂಡಿಸಿ ಇಂದಿನ ಪಾದಯಾತ್ರೆ ಹಮ್ಮಿಕೊಳ್ಳಲಾಗಿದೆ. ಕಾರ್ಯಕರ್ತರು, ರೈತರು, ಮಹಿಳೆಯರು ಸೇರಿ ಜನತೆಯೊಂದಿಗೆ ಈ ಕಾಲ್ನಡಿಗೆಯು ಮುಂದೆ ಸಾಗುತ್ತಿದೆ.

ವಿಧಾನಸಭೆಯ ಮುಖ್ಯ ಸಚೇತಕ ದೊಡ್ಡನಗೌಡ ಹೆಚ್. ಪಾಟೀಲ್, ವಿಧಾನಪರಿಷತ್ ವಿಪಕ್ಷ ಮುಖ್ಯ ಸಚೇತಕ ಎನ್. ರವಿಕುಮಾರ್, ಮಾಜಿ ಸಚಿವರಾದ ಬಿ. ಶ್ರೀರಾಮುಲು, ಗಾಲಿ ಜನಾರ್ಧನ ರೆಡ್ಡಿ, ಶಾಸಕರಾದ ಬಾಲಚಂದ್ರ ಜಾರಕಿಹೊಳಿ, ಸಿದ್ದು ಪಾಟೀಲ್, ವಿಧಾನಪರಿಷತ್ ಸದಸ್ಯರಾದ ಶ್ರೀಮತಿ ಹೇಮಲತಾ ನಾಯ್ಕ್, ವೈ.ಎಂ. ಸತೀಶ್, ರಘು ಕೌಟಿಲ್ಯ, ಬಿಜೆಪಿ ರಾಜ್ಯ ಉಪಾಧ್ಯಕ್ಷ ರಾಜುಗೌಡ ನಾಯಕ, ರಾಜ್ಯ ಕಾರ್ಯದರ್ಶಿ ಶರಣು ತಳ್ಳಿಕೇರಿ, ಯುವ ಮೋರ್ಚಾ ರಾಜ್ಯ ಅಧ್ಯಕ್ಷ ಮತ್ತು ಶಾಸಕ ಧೀರಜ್ ಮುನಿರಾಜು, ಎಸ್.ಟಿ. ಮೋರ್ಚಾ ರಾಜ್ಯ ಅಧ್ಯಕ್ಷ ಬಂಗಾರು ಹನುಮಂತು, ಜಿಲ್ಲಾಧ್ಯಕ್ಷ ಅನಿಲ್ ಕುಮಾರ್ ಮೋಕಾ, ಮಾಜಿ ಸಚಿವ ಶಿವನಗೌಡ ನಾಯಕ, ಮಾಜಿ ಶಾಸಕರಾದ ಸೋಮಶೇಖರ್ ರೆಡ್ಡಿ, ಬಸವರಾಜ್ ದಡೆಸೂಗೂರು, ಹಾಲಪ್ಪ ಆಚಾರ್, ಮುಖಂಡರಾದ ಕಂಪ್ಲಿ ಸುರೇಶ ಬಾಬು, ಶ್ರೀಮತಿ ಅರುಣಾ ಜನಾರ್ಧನ ರೆಡ್ಡಿ, ಡಾ. ಬಸವರಾಜ್ ಕ್ಯಾವಟರ್, ಸಂಸದರು, ಶಾಸಕರು, ವಿಧಾನಪರಿಷತ್ ಸದಸ್ಯರು, ರಾಜ್ಯ ಪದಾಧಿಕಾರಿಗಳು, ಜಿಲ್ಲಾ ಅಧ್ಯಕ್ಷರು, ಮಾಜಿ ಶಾಸಕರು, ವಿಧಾನಪರಿಷತ್ ಮಾಜಿ ಸದಸ್ಯರು ಭಾಗವಹಿಸುವ ನಿರೀಕ್ಷೆ ಇದೆ.



## ನಾಪತ್ತೆಯಾಗಿದ್ದ ಸೊಸೈಟಿ ಸಿಇಒ ಮನೆಗೆ ವಾಪಸ್

● ವಿಕ್ರಮ ವಾಹಿನಿ । ಶಿವಮೊಗ್ಗ

ಆರ್ಥಿಕ ಅವ್ಯವಹಾರದ ಆರೋಪದ ಬೆನ್ನಲ್ಲೇ ನಿಗೂಢವಾಗಿ ನಾಪತ್ತೆಯಾಗಿದ್ದ ತೀರ್ಥಹಳ್ಳಿ ತಾಲೂಕಿನ ಕುಡುಮಲ್ಲಿಗೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಸಿಇಒ ಮದನ್ ಸುರಕ್ಷಿತವಾಗಿ ಮನೆಗೆ ಮರಳಿದ್ದು, ಪ್ರಕರಣ ಸುಖಾಂತ್ಯಗೊಂಡಿದೆ.

ಶುಕ್ರವಾರ ಮನೆಯಿಂದ ಕಾರಿನಲ್ಲಿ ತೆರಳಿದ್ದ ಮದನ್, ಹೊಸನಗರ ತಾಲೂಕಿನ ರಿಪ್ಪನ್‌ಪೇಟೆ ಸಮೀಪದ ಜಂಬಳ್ಳಿ–ಶಿವಪುರ ಅರಣ್ಯ ಪ್ರದೇಶದಲ್ಲಿ ಕಾರನ್ನು ನಿಲ್ಲಿಸಿ ನಾಪತ್ತೆಯಾಗಿದ್ದರು. ಕಾರಿನಲ್ಲಿ ಮೊಬೈಲ್, ಕಾರಿನ ಕೀ ಹಾಗೂ ಸೊಸೈಟಿಯ ದಾಖಲೆಗಳನ್ನು ಬಿಟ್ಟು ಹೋಗಿದ್ದರಿಂದ ಕುಟುಂಬಸ್ಥರಲ್ಲಿ ಆತಂಕ ಹೆಚ್ಚಾಗಿತ್ತು. ಈ ಕುರಿತು ತೀರ್ಥಹಳ್ಳಿ ಪೊಲೀಸ್ ಠಾಣೆಯಲ್ಲಿ ನಾಪತ್ತೆ ಪ್ರಕರಣ ದಾಖಲಿಸಲಾಗಿತ್ತು.

ಈ ನಡುವೆ ಜಂಬಳ್ಳಿ ಅರಣ್ಯದಿಂದ ಅರಸಾಳು ರೈಲು ನಿಲ್ದಾಣಕ್ಕೆ ತೆರಳಿದ್ದ ಮದನ್, ರೈಲಿನಲ್ಲಿ ತಾಳಗುಪ್ಪಕ್ಕೆ ಹಾಗೂ ಅಲ್ಲಿಂದ ಬಸ್‌ನಲ್ಲಿ ಭಟ್ಕಳಕ್ಕೆ ತೆರಳಿದ್ದರು ಎನ್ನಲಾಗಿದೆ. ಒಂದು ದಿನ ಭಟ್ಕಳದಲ್ಲಿ ಕಳೆದ ಬಳಿಕ ಕುಟುಂಬದ ನೆನಪಾಗಿ ಬೇರೊಬ್ಬರ ಮೊಬೈಲ್‌ನಿಂದ ಮನೆಗೆ ಕರೆ ಮಾಡಿ ಮಾತನಾಡಿದ್ದಾರೆ. ಕುಟುಂಬಸ್ಥರು ವಾಪಸ್ ಬರುವಂತೆ ಮನವಿ ಮಾಡಿದ ಹಿನ್ನೆಲೆಯಲ್ಲಿ ಕ್ಯಾಬ್ ಮಾಡಿಕೊಂಡು ಭಾನುವಾರ ರಾತ್ರಿ ಮನೆಗೆ ಮರಳಿದ್ದಾರೆ.

**ರೂ 25 ಲಕ್ಷ ವ್ಯತ್ಯಾಸ**

ಕೆಲ ತಿಂಗಳ ಹಿಂದೆ ಕುಡುಮಲ್ಲಿಗೆ ಸೊಸೈಟಿಯಲ್ಲಿ ನಡೆದ ಲೆಕ್ಕ ಪರಿಶೋಧನೆ ವೇಳೆ ಸುಮಾರು ರೂ 25 ಲಕ್ಷದಷ್ಟು ಹಣದ ವ್ಯತ್ಯಾಸ ಕಂಡುಬಂದಿತ್ತು ಎನ್ನಲಾಗಿದೆ. ಹಣವನ್ನು ಭರಿಸುವಂತೆ ನಿರ್ದೇಶಕರು ಸಿಇಒ ಮೇಲೆ ಒತ್ತಡ ಹೇರಿದ್ದರು. ಈ ಪೈಕಿ ಸುಮಾರು ರೂ 6 ಲಕ್ಷವನ್ನು ಮದನ್ ಪಾವತಿಸಿದ್ದರು. ಉಳಿದ ಹಣವನ್ನೂ ಭರಿಸುವಂತೆ ಒತ್ತಡವಿದ್ದ ಹಿನ್ನೆಲೆಯಲ್ಲಿ ಅವರು ಮನನೊಂದು ನಾಪತ್ತೆಯಾಗಿದ್ದರು ಎನ್ನಲಾಗಿದೆ.

ಮದನ್ ಮನೆಗೆ ಸುರಕ್ಷಿತವಾಗಿ ಮರಳಿರುವುದರಿಂದ ಕುಟುಂಬಸ್ಥರು, ಸೊಸೈಟಿ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ನಿರ್ದೇಶಕರು ನಿಟ್ಟುಸಿರು ಬಿಟ್ಟಿದ್ದಾರೆ. ಪ್ರಕರಣದ ಕುರಿತು ಪೊಲೀಸರು ಮುಂದಿನ ವಿಚಾರಣೆ ನಡೆಸಲಿದ್ದಾರೆ.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481 vikramavahini@gmail.com
93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 158,